VOLUME: 16 | 20 MAY 2026 | ಬುಧವಾರ | RS: 2 | PAGE: 06 ISSUE: 101
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ಶ್ರೀಲೀಲಾ ಡೇಟಿಂಗ್ ಬಗ್ಗೆ ವದಂತಿಗಳಿಗೆ ಪ್ರತಿಕ್ರಿಯಿಸಿದ ಶ್ರೀಲೀಲಾ ತಾಯಿ ಡಾ. ಸ್ವರ್ಣಲತಾ, ಸೋಷಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿರುವ ವದಂತಿಗಳೆಲ್ಲ ಸುಳ್ಳು. ಶ್ರೀಲೀಲಾ ತನ್ನ ಶಿಕ್ಷಣ ಮತ್ತು ಸಿನಿಮಾ ವೃತ್ತಿ ಜೀವನದ ಬಗ್ಗೆ ಮಾತ್ರ ಗಮನ ಹರಿಸಿದ್ದಾಳೆ. ಜೂನ್‌ನಲ್ಲಿ ನಡೆಯಲಿರುವ ನೀಟ್-ಪಿಜಿ ಪರೀಕ್ಷೆಗೆ ತಯಾರಿ ನಡೆಸುತ್ತಿರುವ ಶ್ರೀಲೀಲಾಗೆ ಮದುವೆ ಅಥವಾ ಪ್ರೀತಿ ಬಗ್ಗೆ ಯಾವುದೇ ಯೋಚನೆ ಇಲ್ಲ ಎಂದು ಹೇಳಿದ್ದಾರೆ.

BHARATHA SARATHI
KANNADA DAILY NEWS PAPER
# ಭಾರತ ಸಾರಥಿ
CALL 9740160669
RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಸಾರಿಗೆ ಮುಷ್ಕರಕ್ಕೆ ಹೈಕೋರ್ಟ್ ಬ್ರೇಕ್..!

ಬೆಂಗಳೂರು: ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಸಿಬ್ಬಂದಿ ಟ್ರೇಡ್ ಯೂನಿಯನ್‌ಗಳ ಜಂಟಿ ಕ್ರಿಯಾ ಸಮಿತಿ ನಾಳೆಯಿಂದ ಕರೆದಿದ್ದ ಸಾರಿಗೆ ನೌಕರರ ಮುಷ್ಕರಕ್ಕೆ ಕರ್ನಾಟಕ ಹೈಕೋರ್ಟ್ ಮಂಗಳವಾರ ತಡೆಯೊಡ್ಡಿದೆ.

ಮುಷ್ಕರ ಪ್ರಶ್ನಿಸಿ ಮನೆಕೆಲಸ ಮಾಡುತ್ತಿರುವ ಬೆಂಗಳೂರಿನ ಸಿ.ವೇದಾವತಿ ಹಾಗೂ ಕಟ್ಟಡ ಕಾರ್ಮಿಕ ಎಚ್.ವಿ. ಶ್ರೀಧರ ಎಂಬವರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ನ್ಯಾಯಮೂರ್ತಿಗಳಾದ ಸೂರಜ್ ಗೋವಿಂದರಾಜ್ ಮತ್ತು ಡಾ.ಕೆ. ಮನ್ಮಥರಾವ್ ಅವರ ವಿಭಾಗೀಯ ಪೀಠ ನಡೆಸಿತು.

"ವಿವಿಧ ಯೂನಿಯನ್‌ಗಳ ನೇತೃತ್ವ ವಹಿಸಿರುವ ಜಂಟಿ ಕ್ರಿಯಾ ಸಮಿತಿಯು 29.04.2026ರ ನೋಟಿಸ್ ಆಧರಿಸಿ ಮುಷ್ಕರ ನಡೆಸುವುದಕ್ಕೆ ನಿರ್ಬಂಧ ವಿಧಿಸಲಾಗಿದೆ" ಎಂದು ಪೀಠ ಆದೇಶಿಸಿತು.

"ಸಾರಿಗೆ ಸಚಿವರು ಮತ್ತು ಅಥವಾ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಯಾವಾಗ ಜಂಟಿ ಕ್ರಿಯಾ ಸಮಿತಿಯ ಜೊತೆ ಸಭೆ ನಡೆಸಲಾಗುತ್ತದೆ ಎಂಬುದಕ್ಕೆ ಸಂಬಂಧಿಸಿದಂತೆ ಹೆಚ್ಚುವರಿ ಅಡ್ವೊಕೇಟ್ ಜನರಲ್ ಸೂಚನೆ ಪಡೆದು ವಾದಿಸಲು ಎರಡು ದಿನ ಕಾಲಾವಕಾಶ ಕೋರಿದ್ದಾರೆ" ಎಂದಿರುವ ಪೀಠವು ಅದಕ್ಕಾಗಿ ವಿಚಾರಣೆಯನ್ನು ಮೇ 21ಕ್ಕೆ ಮುಂದೂಡಿದೆ.



ಕೆಎಸ್‌ಆರ್‌ಟಿ ಸಿಬ್ಬಂದಿಯ ಟ್ರೇಡ್ ಯೂನಿಯನ್‌ಗಳ ಜಂಟಿ ಕ್ರಿಯಾ ಸಮಿತಿ ಪರ ವಕೀಲ ಕ್ಲಿಫ್ಟನ್ ಡಿ ರೋಜಾರಿಯೋ ಅವರು "ನಮ್ಮ ಬೇಡಿಕೆಗಳನ್ನು ಸರಿಯಾಗಿ ಈಡೇರಿಸಿಲ್ಲ. ಕಾನೂನಿನ ಪ್ರಕಾರವೇ ಮುಷ್ಕರ ನಡೆಸಲು ನೋಟಿಸ್ ನೀಡಲಾಗಿದೆ. ಅದನ್ನು ಪರಿಗಣಿಸದೇ ಸರ್ಕಾರವೇ ಈ ಸಂದರ್ಭ ನಿರ್ಮಾಣ ಮಾಡಿದೆ" ಎಂದರು.

ಈ ಹಂತದಲ್ಲಿ ಪೀಠವು "ಈಗ ಮುಷ್ಕರ ಬೇಡ. ಈಗಾಗಲೇ ನಿಮಗೆ ಶೇ.12.5ರಷ್ಟು ವೇತನ ಪರಿಷ್ಕರಣೆ ನೀಡಲಾಗಿದೆ. 450 ಕೋಟಿ ರೂಪಾಯಿಯನ್ನು ಸರ್ಕಾರ ಬಿಡುಗಡೆ ಮಾಡಿದೆ. ಇನ್ನೊಂದು 200 ಕೋಟಿ ರೂಪಾಯಿ ಬಿಡುಗಡೆಗೆ ಪ್ರಯತ್ನಿಸೋಣ" ಎಂದಿತು. ಅಲ್ಲದೇ, "ಯಾವಾಗ ಸಭೆ ನಡೆಸುತ್ತೀರಿ?" ಎಂದು ಸರ್ಕಾರಕ್ಕೆ ಪ್ರಶ್ನಿಸಿತು. ಸರ್ಕಾರದ ಪರ ಹೆಚ್ಚುವರಿ ಅಡ್ವೊಕೇಟ್ ಜನರಲ್ ತಾರಾನಾಥ್ ಅವರು ಎರಡು ದಿನ ಕಾಲಾವಕಾಶ ಕೋರಿದರು.

ಇದನ್ನು ಆಲಿಸಿದ ಪೀಠವು ಮುಖ್ಯಮಂತ್ರಿ ಅಥವಾ ಸಾರಿಗೆ ಸಚಿವರು, ಸಾರಿಗೆ ಇಲಾಖೆ ಕಾರ್ಯದರ್ಶಿಯು ಜಂಟಿ ಕ್ರಿಯಾ ಸಮಿತಿ ಜೊತೆಗೆ ಯಾವಾಗ ಸಭೆ ನಡೆಸುತ್ತಿದೆ ಎಂಬುದನ್ನು ಗುರುವಾರದ ವಿಚಾರಣೆಯ ವೇಳೆ ತಿಳಿಸಬೇಕು ಎಂದು ನಿರ್ದೇಶಿಸಿ, ವಿಚಾರಣೆ ಮುಂದೂಡಿತು.

ಅರ್ಜಿದಾರರ ಪರ ಹಿರಿಯ ವಕೀಲ ವಿಕ್ರಮ್ ಹುಯಿಲಗೋಳ ಅವರು "ಈಗಾಗಲೇ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆಗಳು ಆರಂಭವಾಗಿವೆ. ಮುಷ್ಕರದಿಂದ ಜನ ಸಾಮಾನ್ಯರಿಗೆ ಸಮಸ್ಯೆಯಾಗಲಿದೆ" ಎಂದರು.

## ಬೀದಿ ನಾಯಿ ನಿಯಂತ್ರಣಕ್ಕೆ ಸೂಚನೆ

ನವದೆಹಲಿ: ದೇಶಾದ್ಯಂತ ಸಾರ್ವಜನಿಕ ಸ್ಥಳಗಳು ಮತ್ತು ರಸ್ತೆಗಳಿಂದ ಬೀದಿ ನಾಯಿಗಳನ್ನು ಸಂಪೂರ್ಣವಾಗಿ ತೆರವುಗೊಳಿಸುವ ಹಾಗೂ ಅವುಗಳ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಮಂಗಳವಾರ ಅತ್ಯಂತ ಕಟ್ಟುನಿಟ್ಟಿನ ಆದೇಶ ಹೊರಡಿಸಿದೆ. ಬೀದಿ ನಾಯಿಗಳ ನಿಯಂತ್ರಣಕ್ಕೆ ಸಂಬಂಧಿಸಿದಂತೆ ತಾನು ನವೆಂಬರ್ 2025 ರಲ್ಲಿ ನೀಡಿದ್ದ ಐತಿಹಾಸಿಕ ಆದೇಶವನ್ನು ಮಾರ್ಪಡಿಸಲು ಅಥವಾ ಹಿಂಪಡೆಯಲು ಕೋರಿ ಸಲ್ಲಿಕೆಯಾಗಿದ್ದ ಎಲ್ಲಾ ಅರ್ಜಿಗಳನ್ನು ನ್ಯಾಯಾಲಯವು ಸಂಪೂರ್ಣವಾಗಿ ವಜಾಗೊಳಿಸಿದೆ. ಸಾರ್ವಜನಿಕ ಸ್ಥಳಗಳಲ್ಲಿ ಬೀದಿ ನಾಯಿಗಳ ಉಪಸ್ಥಿತಿಯು ಮತ್ತು ಅವುಗಳ ಜನಸಂಖ್ಯೆ ಹೆಚ್ಚುತ್ತಿರುವುದು ಅತ್ಯಂತ ಆತಂಕಕಾರಿ ಎಂದು ನ್ಯಾಯಾಲಯ ಬಣ್ಣಿಸಿದೆ.

ಪ್ರಾಣಿ ಹಕ್ಕುಗಳ ಕಾರ್ಯಕರ್ತರ ವಾದ ತಳ್ಳಿಹಾಕಿದ ಕೋರ್ಟ್ ಸಾರ್ವಜನಿಕ ಸ್ಥಳಗಳಿಂದ ಹಿಡಿದುಕೊಂಡು ಹೋಗುವ ಬೀದಿ ನಾಯಿಗಳಿಗೆ ಕ್ರಿಮಿನಾಶಕ ಚಿಕಿತ್ಸೆ ನೀಡಿದ ನಂತರ, ಅವುಗಳನ್ನು ಮತ್ತೆ ಅದೇ ಹಳೆಯ ಸ್ಥಳಗಳಿಗೆ ಬಿಡಬಾರದು ಎಂದು ನ್ಯಾಯಾಲಯ ಈ ಹಿಂದೆ ಆದೇಶಿಸಿತ್ತು. ಆದರೆ, ನಾಯಿಗಳನ್ನು ಬೇರೆ ಸ್ಥಳಗಳಿಗೆ ಸ್ಥಳಾಂತರಿಸುವುದರಿಂದ ಅವುಗಳು ದಿಗ್ಭ್ರಮೆಗೊಳ್ಳಬಹುದು, ಗೊಂದಲಕ್ಕೊಳಗಾಗಬಹುದು ಮತ್ತು ಇದರಿಂದ ಜನರ ಮೇಲಿನ ದಾಳಿಗಳು ಮತ್ತಷ್ಟು ಹೆಚ್ಚಾಗಬಹುದು ಎಂದು ಪ್ರಾಣಿ ಹಕ್ಕುಗಳ ಕಾರ್ಯಕರ್ತರು ನ್ಯಾಯಾಲಯದಲ್ಲಿ ವಾದಿಸಿದ್ದರು.

ಆದರೆ, ನ್ಯಾಯಮೂರ್ತಿ ವಿಕ್ರಮ್ ನಾಥ್, ನ್ಯಾಯಮೂರ್ತಿ ಸಂದೀಪ್ ಮೆಹ್ತಾ ಮತ್ತು ನ್ಯಾಯಮೂರ್ತಿ ಎನ್.ವಿ. ಅಂಜಾರಿಯಾ ಅವರಿದ್ದ ತ್ರಿಸದಸ್ಯ ಪೀಠವು ಈ ವಾದವನ್ನು ಒಪ್ಪಲು ನಿರಾಕರಿಸಿತು.

ಮುಗ್ಧ ಮಕ್ಕಳ ಮೇಲಿನ ದಾಳಿ ಕಣ್ಣಿಗೆ ಕಾಣುತ್ತಿಲ್ಲವೇ? ವಿಚಾರಣೆ ವೇಳೆ ತೀವ್ರ ಕಳವಳ ವ್ಯಕ್ತಪಡಿಸಿದ ಸುಪ್ರೀಂ ಕೋರ್ಟ್ ಪೀಠವು, ಬೀದಿ ನಾಯಿಗಳು ಸಾರ್ವಜನಿಕರ ಮೇಲೆ, ಅದರಲ್ಲೂ ವಿಶೇಷವಾಗಿ ಅಮಾಯಕ ಮುಗ್ಧ ಮಕ್ಕಳ ಮೇಲೆ ದಾಳಿ ನಡೆಸಿ ಪ್ರಾಣ ತೆಗೆಯುತ್ತಿರುವ ಭೀಕರ ನಿದರ್ಶನಗಳನ್ನು ನಾವು ಯಾವುದೇ ಕಾರಣಕ್ಕೂ ಕಡೆಗಣಿಸಲು ಸಾಧ್ಯವಿಲ್ಲ. ಸಾರ್ವಜನಿಕರ ಸುರಕ್ಷತೆಯೇ ನಮಗೆ ಮುಖ್ಯ ಎಂದು ಖಡಕ್ ಆಗಿ ಹೇಳಿತು. ಅರ್ಜಿದಾರರು ಭಾರತೀಯ ಪ್ರಾಣಿ ಕಲ್ಯಾಣ ಮಂಡಳಿಯ ನಿಯಮಗಳಲ್ಲಿ ಹಸ್ತಕ್ಷೇಪ ಮಾಡಲು ಯಾವುದೇ ಬಲವಾದ ಕಾರಣಗಳನ್ನು ನೀಡಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿತು.

## ಸಿಎಂ, ಡಿಸಿಎಂ ಜೊತೆ ಖರ್ಗೆ ಸಭೆ?

ಬೆಂಗಳೂರು: ಸಂಪುಟ ಪುನಾರಚನೆ ಮತ್ತು ನಾಯಕತ್ವ ಬದಲಾವಣೆ ಚರ್ಚೆ ಮತ್ತೆ ಮುನ್ನೆಲೆಗೆ ಬಂದಿದೆ. ನಾಯಕತ್ವ ಜಟಾಪಟಿ ನಡುವೆ ಸಚಿವ ಕೆ.ಜೆ.ಜಾರ್ಜ್ ನಿವಾಸದಲ್ಲಿ ಮಹತ್ವದ ಸಭೆ ನಡೆದಿದೆ. ಸಭೆಯಲ್ಲಿ ಮಲ್ಲಿಕಾರ್ಜುನ್ ಖರ್ಗೆ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ ಶಿವಕುಮಾರ್ ಭಾಗಿಯಾಗಿದ್ದು ಸಾಕಷ್ಟು ಕುತೂಹಲ ಮೂಡಿಸಿದೆ.

ಬುಧವಾರ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷ ತುಂಬುತ್ತಿದೆ. ಸರ್ಕಾರಕ್ಕೆ ಮೂರು ವರ್ಷ ತುಂಬಿದ ಹಿನ್ನೆಲೆಯಲ್ಲಿ ಮಂಗಳವಾರ ತುಮಕೂರಿನಲ್ಲಿ ಸಾಧನಾ ಸಮಾವೇಶ ಹಮ್ಮಿಕೊಂಡಿತ್ತು.

ಈ ಮಧ್ಯೆ ಮತ್ತೆ ನಾಯಕತ್ವ ಬದಲಾವಣೆ ಚರ್ಚೆ ಮತ್ತೆ ಮುನ್ನೆಲೆಗೆ ಬಂದಿದೆ. ನಾಯಕತ್ವ ಜಟಾಪಟಿ ನಡುವೆ ಸಚಿವ ಕೆ.ಜೆ.ಜಾರ್ಜ್ (ನಿವಾಸದಲ್ಲಿ ಮಹತ್ವದ ಸಭೆ ನಡೆದಿದೆ. ಸಭೆಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ ಶಿವಕುಮಾರ್ ಭಾಗಿಯಾಗಿದ್ದು ಸಾಕಷ್ಟು ಕುತೂಹಲ ಮೂಡಿಸಿದೆ.

ರಾಜ್ಯ ರಾಜಕೀಯದಲ್ಲಿ ಮತ್ತೆ ನಾಯಕತ್ವ ಬದಲಾವಣೆ ಚರ್ಚೆ ಜೋರಾಗಿದೆ. ನಾಯಕತ್ವ ಜಟಾಪಟಿ ಮಧ್ಯೆ ಸಚಿವ ಕೆ.ಜೆ.ಜಾರ್ಜ್ ನಿವಾಸದಲ್ಲಿ ರಾಜ್ಯ ನಾಯಕರು ಸಭೆ ನಡೆಸಿದ್ದಾರೆ.



ಡಿಸಿಎಂ ಡಿ ಕೆ ಶಿವಕುಮಾರ್ ಅವರು ಧರ್ಮಪತ್ನಿ ಉಷಾ ಅವರ ಜತೆ ತಿರುಮಲದಲ್ಲಿ ಮಂಗಳವಾರ ಶ್ರೀ ವೆಂಕಟೇಶ್ವರ ಸ್ವಾಮಿಯ ದರ್ಶನ ಪಡೆದರು.

## ಯುದ್ಧ ಮುಂದುವರೆಸದಂತೆ ವಾರ್ನಿಂಗ್

ಟೆಹ್ರಾನ್: ಪಶ್ಚಿಮ ಏಷ್ಯಾದಲ್ಲಿನ ಪ್ರಸ್ತುತ ಪರಿಸ್ಥಿತಿಯು ಯಾವುದೇ ಕ್ಷಣದಲ್ಲಿ ಇಡೀ ಜಾಗತಿಕ ಆರ್ಥಿಕತೆಯನ್ನು ಛಿದ್ರಗೊಳಿಸಬಹುದು. ಅಮೆರಿಕ ಮತ್ತು ಇರಾನ್ ನಡುವೆ ನಡೆಯುತ್ತಿರುವ ಉದ್ವಿಗ್ನತೆ ಇನ್ನು ಮುಂದೆ ಕೇವಲ ಮೌಖಿಕ ಯುದ್ಧಕ್ಕೆ ಸೀಮಿತವಾಗಿಲ್ಲ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಮಿಲಿಟರಿ ಕ್ರಮದ ಬೆದರಿಕೆಯ ನಂತರ, ಇರಾನ್ ಮಿಲಿಟರಿಯ ಮುಕ್ತ ಎಚ್ಚರಿಕೆ ಜಾಗತಿಕ ತೈಲ ಮಾರುಕಟ್ಟೆಯನ್ನು ಆಘಾತಗೊಳಿಸಿದೆ. ಹಾರ್ಮುಜ್ ಜಲಸಂಧಿಯಲ್ಲಿ ಹಡಗುಗಳನ್ನು ನಿರ್ಬಂಧಿಸುವುದು ಅಥವಾ ಟೋಲ್ ತೆರಿಗೆಗಳನ್ನು ವಿಧಿಸುವಂತಹ ಸಣ್ಣ ಕ್ರಮಗಳನ್ನು ಇನ್ನು ಮುಂದೆ ಆಶ್ರಯಿಸುವುದಿಲ್ಲ ಎಂದು ಇರಾನ್ ಸ್ಪಷ್ಟಪಡಿಸಿದೆ, ಬದಲಿಗೆ ಪ್ರಮುಖ ದಾಳಿಯನ್ನು ಪ್ರಾರಂಭಿಸುವ ಉದ್ದೇಶವನ್ನು ಹೊಂದಿದೆ.

ಯುಎಸ್ ಮತ್ತೆ ದಾಳಿ ಮಾಡಲು ಧೈರ್ಯ ಮಾಡಿದರೆ, ಹೊಸ ವಿಧಾನ ಬಳಸುತ್ತೇವೆ ಎಂದು ಇರಾನ್ ಹೇಳಿದೆ. ಇದರ ನಂತರ, ವಿಶ್ವದ ಉಳಿದ ತೈಲ ಸರಬರಾಜುಗಳು ಅಪಾಯದಲ್ಲಿರುತ್ತವೆ. ರಾಜತಾಂತ್ರಿಕತೆ ಮತ್ತು ರಾಜಿ ಮಾಡಿಕೊಳ್ಳುವ ಭರವಸೆಯಲ್ಲಿ ಇರಾನ್ ಮೇಲೆ ಹೊಸ ಮಿಲಿಟರಿ ದಾಳಿ ನಡೆಸುವ ಬಗ್ಗೆ ಟ್ರಂಪ್ ಸುಳಿವು ಬೆನ್ನಲ್ಲೇ ಇರಾನ್ ಈ ಎಚ್ಚರಿಕೆ ನೀಡಿದೆ.

ಟ್ರಂಪ್‌ರ ಹೇಳಿಕೆಗೆ ಪ್ರತಿಕ್ರಿಯಿಸಿದ ಇರಾನ್ ಮಿಲಿಟರಿ ವಕ್ತಾರ ಮೊಹಮ್ಮದ್ ಅಕ್ರಮನಿಯಾ,



ಶತ್ರು ಇಸ್ರೇಲಿ ಬಲೆಗೆ ಬಿದ್ದು ನಮ್ಮ ಮೇಲೆ ಮತ್ತೆ ದಾಳಿ ಮಾಡುವಷ್ಟು ಮೂರ್ಖರಾಗಿದ್ದರೆ, ನಾವು ಹೊಸ ಶಸ್ತ್ರಾಸ್ತ್ರಗಳು ಮತ್ತು ಸಂಪೂರ್ಣವಾಗಿ ಹೊಸ ವಿಧಾನಗಳೊಂದಿಗೆ ಅವರ ವಿರುದ್ಧ ಹಲವಾರು ಹೊಸ ರಂಗಗಳನ್ನು ತೆರೆಯುತ್ತೇವೆ ಎಂದು ಘೋಷಿಸಿದರು. ಇರಾನ್‌ನ ಈ ಹೊಸ ಪ್ರಯೋಗ ಜಗತ್ತಿಗೆ ಗಂಭೀರ ಬೆದರಿಕೆಯನ್ನು ಒಡ್ಡುತ್ತದೆ, ಏಕೆಂದರೆ ಅದು ವಿಶ್ವದ ಅತ್ಯಂತ ಸೂಕ್ಷ್ಮ ತೈಲ ಸರಬರಾಜು ಮಾರ್ಗವನ್ನು ನೇರವಾಗಿ ಗುರಿಯಾಗಿಸುತ್ತದೆ ಎಂದು ಇರಾನ್ ಹೇಳಿದೆ.

ಖತಮ್ ಅಲ್-ಅನ್ಬಿಯಾ ಕೇಂದ್ರ ಪ್ರಧಾನ ಕಚೇರಿಯ ಮುಖ್ಯಸ್ಥ ಮೇಜರ್ ಜನರಲ್ ಅಲಿ ಅಬ್ದುಲ್ಲಾಹಿ ಕೂಡ ಯುಎಸ್ ಮತ್ತು ಅದರ ಮಿತ್ರರಾಷ್ಟ್ರಗಳಿಗೆ ಅಂತಿಮ ಎಚ್ಚರಿಕೆ ನೀಡಿದರು. ಇರಾನ್‌ನ ಮಿಲಿಟರಿ ಈಗ ಹಿಂದೆಂದಿಗಿಂತಲೂ ಬಲಿಷ್ಠವಾಗಿದ್ದು ಹೆಚ್ಚು ಸಿದ್ಧವಾಗಿದೆ ಎಂದು ಅವರು ಹೇಳಿದರು. "ನಮ್ಮ ಶತ್ರುಗಳು ಮತ್ತೊಂದು ಕಾರ್ಯತಂತ್ರದ ತಪ್ಪು ಮಾಡಿದರೆ, ನಾವು ನಮ್ಮ ಎಲ್ಲಾ ಶಕ್ತಿಯಿಂದ ದಾಳಿ ಮಾಡಿ ದಾಳಿಕೋರರ ಕೈಯನ್ನು ಕತ್ತರಿಸುತ್ತೇವೆ. ನಮ್ಮ ಪ್ರತಿಕ್ರಿಯೆ ಎಷ್ಟು ವೇಗವಾಗಿ, ಶಕ್ತಿಯುತವಾಗಿ ಮತ್ತು ಸಮಗ್ರವಾಗಿರುತ್ತದೆ ಎಂದರೆ ಅಮೆರಿಕ ಅದನ್ನು ನಿಭಾಯಿಸಲು ಸಾಧ್ಯವಾಗುವುದಿಲ್ಲ" ಎಂದು ಜನರಲ್ ಅಬ್ದುಲ್ಲಾಹಿ ಆಕ್ರಮಣಕಾರಿಯಾಗಿ ಘೋಷಿಸಿದರು.

ಸುಂಕ ತೆರಿಗೆಗಳನ್ನು ವಿಧಿಸುವ ಅಥವಾ ಹಡಗುಗಳನ್ನು ಬೆದರಿಸುವ ಹಿಂದಿನ ತಂತ್ರಗಳ ಜೊತೆಗೆ, ಇರಾನ್ ಇನ್ನೂ ಅನೇಕ ಪ್ರಮುಖ ದಾಳಿಗಳನ್ನು ನಡೆಸಬಹುದು ಎಂದು ರಕ್ಷಣಾ ತಜ್ಞರು ನಂಬುತ್ತಾರೆ. ಯುದ್ಧ ಭುಗಿಲೆದ್ದರೆ, ಇರಾನ್ ಹಾರ್ಮುಜ್ ಜಲಸಂಧಿಯನ್ನು ಸಂಪೂರ್ಣವಾಗಿ ಹತ್ತಿಕ್ಕುತ್ತದೆ. ರಹಸ್ಯ ಸಮುದ್ರದೊಳಗಿನ ಆತ್ಮಹತ್ಯಾ ಡ್ರೋನ್‌ಗಳು ಮತ್ತು ಆಧುನಿಕ ಹಡಗು ವಿರೋಧಿ ಕ್ಷಿಪಣಿಗಳನ್ನು ಬಳಸಿ, ಇರಾನ್ ಈ ಸಂಪೂರ್ಣ ಮಾರ್ಗವನ್ನು ನಿಷೇಧಿತ ವಲಯವನ್ನಾಗಿ ಮಾಡುತ್ತದೆ. ಇದರರ್ಥ ಸೌದಿ ಅರೇಬಿಯಾ, ಕತಾರ್ ಮತ್ತು ಯುಎಇಯಂತಹ ದೇಶಗಳಿಂದ ಉಳಿದಿರುವ ತೈಲ ಸರಬರಾಜುಗಳು ಸಂಪೂರ್ಣವಾಗಿ ಅಡ್ಡಿಪಡಿಸಲ್ಪಡುತ್ತವೆ. ಇದು ಜಾಗತಿಕವಾಗಿ ಪೆಟ್ರೋಲ್ ಮತ್ತು ಡೀಸೆಲ್ ಕೊರತೆಯನ್ನು ಸೃಷ್ಟಿಸುತ್ತದೆ.

## ರಾಜ್ಯದಲ್ಲಿ ತೈಲ ಕೊರತೆ ಇಲ್ಲ

ಬೆಂಗಳೂರು: ಮಧ್ಯಪ್ರಾಚ್ಯ ಯುದ್ಧದಿಂದ ಎದುರಾಗಿರುವ ಜಾಗತಿಕ ತೈಲ ಬಿಕ್ಕಟ್ಟಿನ ನಡುವೆಯೂ ಕರ್ನಾಟಕದಲ್ಲಿ ಯಾವುದೇ ನಿರ್ಬಂಧಗಳಿಲ್ಲದೇ ಇಂಧನ ವಿತರಣೆ ಮುಂದುವರಿಯಲಿದೆ.

ಪೆಟ್ರೋಲ್, ಡೀಸೆಲ್ ಮತ್ತು ಎಲ್‌ಪಿಜಿ ನಿರಂತರ ಪೂರೈಕೆಯಾಗಲಿದೆ ಎಂದು ಸಾರ್ವಜನಿಕ ತೈಲ ಕಂಪನಿಗಳು ಭರವಸೆ ನೀಡಿವೆ.

ತೈಲ ಮತ್ತು ಅನಿಲ ವಲಯದ ಮೇಲೆ ಪ್ರಸ್ತುತ ಪರಿಣಾಮ ಬೀರುತ್ತಿರುವ ಜಾಗತಿಕ ಅನಿಶ್ಚಿತತೆಗಳ ಹೊರತಾಗಿಯೂ, ಸಾರ್ವಜನಿಕ ವಲಯದ ತೈಲ ಕಂಪನಿಗಳಾದ ಇಂಡಿಯನ್ ಆಯಿಲ್, ಬಿಸಿಪಿಎಲ್ ಮತ್ತು ಎಚ್‌ಪಿಸಿಎಲ್, ಕರ್ನಾಟಕದಾದ್ಯಂತ ಪೆಟ್ರೋಲ್, ಡೀಸೆಲ್ ಮತ್ತು ದ್ರವೀಕೃತ ಪೆಟ್ರೋಲಿಯಂ ಗ್ಯಾಸ್ ನಿರಂತರ ಪೂರೈಕೆ ಮಾಡುತ್ತಿವೆ ಎಂದು ಕರ್ನಾಟಕದ ತೈಲ ಉದ್ಯಮದ ರಾಜ್ಯ ಮಟ್ಟದ ಸಂಯೋಜಕ ಸಿದ್ಧಾರ್ಥ್ ಅಗರ್ವಾಲ್ ತಿಳಿಸಿದ್ದಾರೆ.

ಟರ್ಮಿನಲ್‌ಗಳು, ಡಿಪೋಗಳು, ಎಲ್‌ಪಿಜಿ ಬಾಟ್ಲಿಂಗ್ ಪ್ಲಾಂಟ್‌ಗಳು ಮತ್ತು ಚಿಲ್ಲರೆ ಮಾರಾಟ ಮಳಿಗೆಗಳನ್ನು ಒಳಗೊಂಡಿರುವ ತನ್ನ ವ್ಯಾಪಕ ಪೂರೈಕೆ ಜಾಲದ ಮೂಲಕ ಇಂಧನದ ಸುಗಮ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ತೈಲ ಉದ್ಯಮವು ಸಂಪೂರ್ಣವಾಗಿ ಸಜ್ಜಾಗಿದೆ. ಎಲ್ಲಾ ಚಿಲ್ಲರೆ ಮಾರಾಟ ಮಳಿಗೆಗಳಲ್ಲಿ ಇಂಧನ ವಿತರಣಾ ಕಾರ್ಯಾಚರಣೆಗಳು ಸುಗಮವಾಗಿ ಮುಂದುವರಿದಿದ್ದು, ನಿಗದಿತ ಸುರಕ್ಷತೆ ಮತ್ತು ಕಾರ್ಯಾಚರಣೆಯ ಮಾನದಂಡಗಳಿಗೆ ಅನುಗುಣವಾಗಿ ಯಾವುದೇ ನಿರ್ಬಂಧಗಳಿಲ್ಲದೆ ಪೂರೈಕೆಯನ್ನು ಕಟ್ಟುನಿಟ್ಟಾಗಿ ನಿರ್ವಹಿಸಲಾಗುತ್ತಿದೆ ಎಂದು ಹೇಳಿದ್ದಾರೆ. ಪೂರೈಕೆ ಸರಪಳಿಯಾದ್ಯಂತ ಪೆಟ್ರೋಲಿಯಂ ಉತ್ಪನ್ನಗಳ ಸಮರ್ಪಕ ದಾಸ್ತಾನು ಲಭ್ಯವಿದೆ. ಗ್ರಾಹಕರ ಬೇಡಿಕೆಯನ್ನು ಪೂರೈಸಲು ದಾಸ್ತಾನು ಮರುಪೂರಣ ಕಾರ್ಯಾಚರಣೆಗಳನ್ನು ನಿರಂತರವಾಗಿ ನಡೆಸಲಾಗುತ್ತಿದೆ.

ದೇಶೀಯ ಗ್ರಾಹಕರಿಗೆ ಎಲ್‌ಪಿಜಿ ಪೂರೈಕೆಯನ್ನು ಸಹಜ ಸ್ಥಿತಿಯಲ್ಲಿ ಕಾಯ್ದುಕೊಳ್ಳಲಾಗಿದ್ದು, ಇಡೀ ರಾಜ್ಯಾದ್ಯಂತ ವಿತರಣೆಗಳು ಸುಗಮವಾಗಿ ಪ್ರಗತಿಯಲ್ಲಿವೆ ಎಂದು ತಿಳಿಸಿದ್ದಾರೆ.

ನಾಗರಿಕರು ತಮ್ಮ ಸಾಮಾನ್ಯ ಖರೀದಿ ಪ್ರವೃತ್ತಿಯನ್ನು ಮುಂದುವರಿಸಬೇಕಾಗಿ ಮತ್ತು ಅನಗತ್ಯ ಆತಂಕದಿಂದ ಮುಂಚಿತವಾಗಿಯೇ ಅತಿಯಾಗಿ ಖರೀದಿಸುವುದನ್ನು ತಪ್ಪಿಸಬೇಕಾಗಿ ವಿನಂತಿಸಲಾಗಿದೆ.

## ‘ಕಾಂಗ್ರೆಸ್ ಗೆಲುವಿನ ನಾಗಾಲೋಟ ಬಹಳ ದಿನ ನಡೆಯದು’

ಬೆಂಗಳೂರು: ಮುಖ್ಯಮಂತ್ರಿಗಳೇ, ಯಾವ ಪುರುಷಾರ್ಥಕ್ಕೆ ನೀವು ತುಮಕೂರಿನಲ್ಲಿ ಸಾಧನಾ ಸಮಾವೇಶ ಹಮ್ಮಿಕೊಂಡಿದ್ದೀರಿ ಎಂದು ಶಾಸಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಕೇಳಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 3 ವರ್ಷಗಳಲ್ಲಿ ತಾವು ಮಾಡಿದ ಸಾಧನೆಯಾದರೂ ಏನು? ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ಆಗಿವೆಯೇ? ಹೊಸ ಯೋಜನೆಗಳನ್ನು ಅನುಷ್ಠಾನಕ್ಕೆ ತಂದಿದ್ದೀರಾ ಎಂದು ಪ್ರಶ್ನಿಸಿದರು.

ನಾಡಿಗೆರಡು ತುತ್ತು ಅನ್ನ ಕೊಡುವ ರೈತರ ಬದುಕನ್ನು ಕಟ್ಟಿಕೊಡುವ ಸಲುವಾಗಿ ನೆರೆ ಮತ್ತು ಬರದ ಸಂದರ್ಭದಲ್ಲಿ ನೆರವಿಗೆ ನಿಮ್ಮ ಸರಕಾರ ಬಂದಿದೆಯೇ ಎಂದು ಕೇಳಿದರು. ಇದ್ಯಾವುದನ್ನೂ ಮಾಡದೇ, ಗ್ಯಾರಂಟಿಗಳ ನೆಪ ಒಡ್ಡಿಕೊಂಡು ರಾಜ್ಯ ಸರಕಾರವು ಜನರ ಪಾಲಿಗೆ ಬದುಕಿದೆ ಎಂಬುದನ್ನು ನೆನಪಿಸುವ ಕಾರ್ಯವನ್ನು ಈ ಸಾಧನಾ ಸಮಾವೇಶದ ಮೂಲಕ ತಾವು ಮಾಡುತ್ತ ಇದ್ದೀರಿ ಎಂದು ಆಕ್ಷೇಪಿಸಿದರು. ಕಾಂಗ್ರೆಸ್ ಸರಕಾರವು ಕೇವಲ ಜಾಹೀರಾತಿನ ಮೂಲಕ ತಮ್ಮ ಯಶಸ್ಸನ್ನು ಬಿಚ್ಚಿಡುವ ಕೆಲಸ ಮಾಡುತ್ತಿದೆ ಎಂದು ಟೀಕಿಸಿದರು.

ಉಪ ಚುನಾವಣೆಗಳಲ್ಲಿ ಕಾಂಗ್ರೆಸ್ ಗೆದ್ದಿದೆ.




ನಿಮ್ಮ ಗೆಲುವಿಗೆ ಗ್ಯಾರಂಟಿಗಳು ಸಹಕರಿಸಿವೆ. ಗ್ಯಾರಂಟಿ ಹಣ ಬಿಡುಗಡೆ ಮಾಡಿ ಚುನಾವಣೆ ಗೆಲ್ಲಲು ಪ್ರಯತ್ನ ಮಾಡುತ್ತ ಇದ್ದೀರಿ ಎಂದು ದೂರಿದರು.

ಈ ಗೆಲುವಿನ ನಾಗಾಲೋಟ ಬಹಳ ದಿನ ನಡೆಯಲು ಸಾಧ್ಯವಿಲ್ಲ ಎಂದು ತಿಳಿಸಿದರು. ಹಿಂದೆಯೂ ಕಾಂಗ್ರೆಸ್ ಸರಕಾರವು ಅಸ್ತಿತ್ವದಲ್ಲಿ ಇದ್ದಾಗ ಇದೇ ಸಿದ್ದರಾಮಯ್ಯನವರು ಮುಖ್ಯಮಂತ್ರಿ ಆಗಿದ್ದಾಗ ನಂಜನಗೂಡು, ಬೇರೆ ಉಪ ಚುನಾವಣಾ ಫಲಿತಾಂಶ ಏನಾಗಿತ್ತು ಎಂದು ಕೇಳಿದರು. ನಂತರ ನಡೆದ ಸಾರ್ವತ್ರಿಕ ಚುನಾವಣೆಯಲ್ಲಿ ಜನರು ನಿಮ್ಮನ್ನು ಮನೆಗೆ ಕಳಿಸಿದ್ದನ್ನು ತಾವು ಮರೆತಿಲ್ಲ ಎಂದು ಭಾವಿಸುವುದಾಗಿ ಹೇಳಿದರು.

ಗ್ಯಾರಂಟಿಗಳನ್ನು ಕೇವಲ ಚುನಾವಣಾ ತಂತ್ರಗಾರಿಕೆಗೆ ಬಳಸುವ ಕೆಲಸ ಈ ಸರಕಾರದಿಂದ ಬಳಸುವ ಆಗುತ್ತಿದೆ. ಗ್ಯಾರಂಟಿಗಳೇ ಅಭಿವೃದ್ಧಿ ಎಂದು ಬಿಂಬಿಸುವ ಕೆಲಸವನ್ನು ಮುಖ್ಯಮಂತ್ರಿ ಮತ್ತು ಕಾಂಗ್ರೆಸ್ ಸರಕಾರ ಮಾಡುತ್ತಿದೆ.

ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ರಸ್ತೆಗೆ ಆದ್ಯತೆ ನೀಡಿದ್ದೀರಾ? ನೀರಾವರಿ ಯೋಜನೆಗಳಿಗೆ ಹಣ ಒದಗಿಸಿದ್ದೀರಾ? ಆಸ್ಪತ್ರೆಗಳು, ಶಾಲೆಗಳಿಗೆ ಕಾಂಗ್ರೆಸ್ ಸರಕಾರ ನೀಡಿದೆಯೇ? ಅಭಿವೃದ್ಧಿಯನ್ನು ಕಣ್ಮುಂದೆ ಇಟ್ಟುಕೊಂಡು ಶಾಸಕರ ಕ್ಷೇತ್ರಗಳಿಗೆ ಅನುದಾನ ಬಿಡುಗಡೆ ಮಾಡಲು ನಿಮಗೆ ಸಾಧ್ಯ ಆಗಿದೆಯೇ ಎಂದು ಕೇಳಿದರು.

ಇವರ ಯೋಗ್ಯತೆಗೆ ಬೆಂಗಳೂರು ಮಹಾನಗರದ ರಸ್ತೆ ಗುಂಡಿಗಳನ್ನು ಮುಚ್ಚಲು ಸಾಧ್ಯ ಆಗುತ್ತಿಲ್ಲ. ಕೃಷಿ ಕ್ಷೇತ್ರದ ಬಗ್ಗೆ ಈ ಸರಕಾರ ಕಿಂಚಿತ್ತೂ ತಲೆ ಕೆಡಿಸಿಕೊಂಡಿಲ್ಲ. ಸಂಕಷ್ಟದಲ್ಲಿ ಇರುವ ರೈತರಿಗೆ ಸಾಂತ್ವನ ಹೇಳುವ ಸಂವೇದನೆ ಕೂಡ ಈ ಕಾಂಗ್ರೆಸ್ ಸರಕಾರಕ್ಕೆ ಇಲ್ಲ ಎಂಬುದು ದುರ್ದೈವ ಎಂದು ಟೀಕಿಸಿದರು. ನೆರೆ ಮತ್ತು ಬರದ ಸಂದರ್ಭದಲ್ಲಿ ನೆರವಿಗೆ ಇವರು ಧಾವಿಸಿಲ್ಲ ಎಂದು ಆಕ್ಷೇಪಿಸಿದರು.

ಉದ್ಯೋಗ ಸೃಷ್ಟಿ ಕುರಿತು ಸಾಕಷ್ಟು ಮಾತನಾಡುತ್ತಾರೆ. ಯುವಜನತೆ ಜೀವನದ ಜೊತೆ ಚೆಲ್ಲಾಟ ಆಡುವ ಕಾಂಗ್ರೆಸ್ ಸರಕಾರದ ಅಹಿಂದ ಮುಖವಾಡವೂ ಕಳಚಿಬಿದ್ದಿದೆ ಎಂದು ನುಡಿದರು. ಭ್ರಷ್ಟಾಚಾರರಹಿತ ಆಡಳಿತ ನೀಡುವುದಾಗಿ ಹಲವಾರು ಬಾರಿ ಹೇಳಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ ಆದಾಗಲೇ ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿಗಳು ರಾಜೀನಾಮೆ ಕೊಡಬೇಕಾಗಿತ್ತು ಎಂದು ತಿಳಿಸಿದರು. ಈ ಹಗರಣದ ಕುರಿತು ಸದನದಲ್ಲೇ ಮುಖ್ಯಮಂತ್ರಿಗಳು ಒಪ್ಪಿಕೊಂಡಿದ್ದು, ಸಚಿವರು ರಾಜೀನಾಮೆ ಕೊಟ್ಟಿದ್ದನ್ನು ನೆನಪಿಸಿದರು. ಮತ್ತೊಂದು ಕಡೆ ‘ಮುಡಾ’ ಹಗರಣ ನಡೆದಿದೆ. 14 ನಿವೇಶನ ವಾಪಸ್ ಮಾಡಿದ್ದು ರಾಜ್ಯದ ಜನರಿಗೆ ಗೊತ್ತಿದೆ ಎಂದರು.

ಕ್ರಿಮಿನಲ್ ಚಟುವಟಿಕೆಯ ವ್ಯಕ್ತಿಗಳಿಗೆ ಭಯ ಹುಟ್ಟಿಸಬೇಕಾದ ಜೈಲುಗಳಲ್ಲಿ ಕೈದಿಗಳಿಗೆ ಕುಡಿಯುವ ವ್ಯವಸ್ಥೆ ಮಾಡಲಾಗುತ್ತಿದೆ. ರಾಜಾರೋಷವಾಗಿ ಕೈದಿಗಳು ಆರಾಮವಾಗಿ ಇದ್ದಾರೆ. ಅತಿ ಹೆಚ್ಚು ಬಜೆಟ್ ಮಂಡಿಸಿದ ಮುಖ್ಯಮಂತ್ರಿಗಳು, ದೀರ್ಘಕಾಲ ಸಿಎಂ ಎಂಬ ವೈಯಕ್ತಿಕ ಕಾರಣ ಬಿಟ್ಟರೆ, ಅಹಿಂದ ಹೆಸರು ಹೇಳಿಕೊಂಡು ಆ ಸಮುದಾಯಗಳನ್ನು ತನ್ನ ರಾಜಕೀಯ ಸ್ವಾರ್ಥಕ್ಕಾಗಿ, ಅಹಿಂದ ಸಮುದಾಯಗಳನ್ನು ತನ್ನ ಮುಖ್ಯಮಂತ್ರಿ ಕುರ್ಚಿ ಉಳಿಸಿಕೊಳ್ಳುವ ಸಲುವಾಗಿ ದುರ್ಬಳಕೆ ಮಾಡಿಕೊಂಡ ಅಪಕೀರ್ತಿ ಇವರಿಗೆ ಸಲ್ಲುತ್ತದೆ ಎಂದು ನುಡಿದರು.

ಪಶ್ಚಿಮ ಬಂಗಾಲ, ಅಸ್ಸಾಂನಲ್ಲಿನ ಸೋಲಿನಿಂದ ಹತಾಶವಾದ ಕಾಂಗ್ರೆಸ್ ಪಕ್ಷವು ರಾಜ್ಯದಲ್ಲಿ ಅರಾಜಕತೆ ಸೃಷ್ಟಿಸಲು ಹೊರಟಿದೆ ಎಂದು ಆರೋಪಿಸಿದರು. ಈ ಸರಕಾರದ ಆಡಳಿತ ವೈಖರಿಯಿಂದ ಜನರು ಬೇಸತ್ತಿದ್ದಾರೆ. ರಾಜ್ಯದಲ್ಲಿ ಯಾವತ್ತೇ ಚುನಾವಣೆ ನಡೆದರೂ ಈ ಸರಕಾರಕ್ಕೆ ಜನರು ಪಾಠ ಕಲಿಸುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ರಾಜ್ಯಸಭಾ ಸದಸ್ಯ ಲೇಹರ್ ಸಿಂಗ್ ಸಿರೋಯಾ, ಮಾಜಿ ಸಚಿವರು ಮತ್ತು ಶಾಸಕರಾದ ಬಿ.ಎ ಬಸವರಾಜ್, ರಾಜ್ಯ ವಕ್ತಾರ ಹೆಚ್. ವೆಂಕಟೇಶ್ ದೊಡ್ಡೇರಿ, ಒಬಿಸಿ ಮೋರ್ಚಾ ರಾಜ್ಯ ಅಧ್ಯಕ್ಷ ರಘು ಕೌಟಿಲ್ಯ, ಎಸ್‌ಸಿ ಮೋರ್ಚಾ ರಾಜ್ಯ ಉಪಾಧ್ಯಕ್ಷ ಹೂಡಿ ಮಂಜುನಾಥ್ ಉಪಸ್ಥಿತರಿದ್ದರು.

ಭಾರತ ಸಾರಥಿ
20/05/2026
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಮಾರತಹಳ್ಳಿಯಲ್ಲಿ ಹೊಸ ಮಳಿಗೆ ಆರಂಭ

ಬೆಂಗಳೂರು

ಲೈಮ್ಲೈಟ್ ಲ್ಯಾಬ್ ಗ್ರೋನ್ ಡೈಮಂಡ್ಸ್ ತನ್ನ ವಿಸ್ತರಣಾ ಯೋಜನೆಯ ಭಾಗವಾಗಿ ಬೆಂಗಳೂರಿನ ಮಾರತಹಳ್ಳಿಯಲ್ಲಿ ಹೊಸ ವಿಶೇಷ ಮಳಿಗೆಯನ್ನು ಆರಂಭಿಸಿದೆ. ಈ ಮೂಲಕ ಬ್ರ್ಯಾಂಡ್ ನಗರದಲ್ಲಿ ತನ್ನ ಹಾಜರಾತಿಯನ್ನು ಮತ್ತಷ್ಟು ಬಲಪಡಿಸಿದ್ದು, ಇದು ಬೆಂಗಳೂರಿನಲ್ಲಿ ಐದನೇ ಹಾಗೂ ಕರ್ನಾಟಕದಲ್ಲಿ ಆರನೇ ಮಳಿಗೆಯಾಗಿ ದಾಖಲೆಯಾಗಿದೆ.




ಈ ಹೊಸ ಮಳಿಗೆಯ ಉದ್ಘಾಟನೆಯನ್ನು ಲೈಮ್ಲೈಟ್ ಲ್ಯಾಬ್ ಗ್ರೋನ್ ಡೈಮಂಡ್ಸ್ ನಿರ್ದೇಶಕ ಕರಮ್ ಜ್ಯೋತ್ ಸಿಂಗ್ ಚಾವ್ಲಾ ಹಾಗೂ ರೀಜನಲ್ ಪಾರ್ಟ್ನರ್ ಜಾನಕಿ ರಾಮನ್ ನೆರವೇರಿಸಿದರು. ಈ ಸಂದರ್ಭದಲ್ಲಿ ಬ್ರ್ಯಾಂಡ್‌ನ ಹಿರಿಯ ನಿರ್ವಹಣಾ ತಂಡವೂ ಉಪಸ್ಥಿತರಿತ್ತು.

ಮಾರತಹಳ್ಳಿ ಪ್ರದೇಶವು ವಸತಿ ಮತ್ತು ವಾಣಿಜ್ಯ ಚಟುವಟಿಕೆಗಳ ಕೇಂದ್ರವಾಗಿದ್ದು, ಯುವಜನತೆ ಹಾಗೂ ತಂತ್ರಜ್ಞಾನ ಕ್ಷೇತ್ರದಲ್ಲಿ ತೊಡಗಿರುವ ಜನಸಂಖ್ಯೆಯಿಂದ ಪ್ರಸಿದ್ಧವಾಗಿದೆ. ಈ ಕಾರಣದಿಂದಲೇ ಈ ಸ್ಥಳವನ್ನು ಆಯ್ಕೆ ಮಾಡಲಾಗಿದ್ದು, ನಗರದಲ್ಲಿನ ವೇಗವಾಗಿ ಬೆಳೆಯುತ್ತಿರುವ ಮೈಕ್ರೋ ಮಾರುಕಟ್ಟೆಗಳಿಗೆ ತಲುಪುವ ಬ್ರ್ಯಾಂಡ್‌ನ ತಂತ್ರವನ್ನು ಇದು ಪ್ರತಿಬಿಂಬಿಸುತ್ತದೆ.

ಲೈಮ್ಲೈಟ್ ಪ್ರಸ್ತುತ ದೇಶಾದ್ಯಂತ 60ಕ್ಕೂ ಹೆಚ್ಚು ಮಳಿಗೆಗಳ ಮೂಲಕ 45ಕ್ಕೂ ಹೆಚ್ಚು ನಗರಗಳಲ್ಲಿ ತನ್ನ ಹಾಜರಾತಿಯನ್ನು ವಿಸ್ತರಿಸಿದೆ. ಹೊಸ ಮಳಿಗೆಯ ಸೇರ್ಪಡೆ ಈ ರಾಷ್ಟ್ರೀಯ ವಿಸ್ತರಣಾ ಪಯಣದಲ್ಲಿ ಮತ್ತೊಂದು ಮಹತ್ವದ ಮೈಲಿಗಲ್ಲಾಗಿದೆ.

ಈ ಮಳಿಗೆಯನ್ನು ಆಧುನಿಕ ಹಾಗೂ ಉನ್ನತ ಮಟ್ಟದ ರಿಟೇಲ್ ಅನುಭವ ನೀಡುವ ರೀತಿಯಲ್ಲಿ ವಿನ್ಯಾಸಗೊಳಿಸಲಾಗಿದೆ. ಇಲ್ಲಿ ಪ್ರಯೋಗಾಲಯದಲ್ಲಿ ರೂಪಿಸಲಾದ ವಜ್ರಾಭರಣಗಳ ವಿಶಾಲ ಸಂಗ್ರಹ ಲಭ್ಯವಿದ್ದು, ಅವು ಟೈಪ್ 2 ಗುಣಮಟ್ಟದ ವಜ್ರಗಳಿಂದ ತಯಾರಾಗಿವೆ ಎಂದು ಕಂಪನಿ ತಿಳಿಸಿದೆ.

ಗ್ರಾಹಕರಿಗೆ ಇಲ್ಲಿ ಸಾಲಿಟೇರ್ ಗಳು, ನೆಕ್ಲೇಸ್‌ಗಳು, ಕಿವಿಯೋಲೆಗಳು, ಕೈಬಳೆಗಳು ಹಾಗೂ ದೈನಂದಿನ ಬಳಕೆಗೆ ಸೂಕ್ತವಾದ ಆಭರಣಗಳ ವಿಸ್ತಾರ ಶ್ರೇಣಿ ಲಭ್ಯವಿದ್ದು, ಆಧುನಿಕ ಜೀವನಶೈಲಿ ಹಾಗೂ ವಿವಿಧ ಸಂದರ್ಭಗಳಿಗೆ ಹೊಂದುವಂತೆ ವಿನ್ಯಾಸಗೊಳಿಸಲಾಗಿದೆ.

# ಬಜಾಜ್ ಜನರಲ್ ಇನ್ಶೂರೆನ್ಸ್‌ನಿಂದ ವಿಮಾ ಯೋಜನೆ

ಬೆಂಗಳೂರು

ಭಾರತದ ಪ್ರಮುಖ ಖಾಸಗಿ ಜನರಲ್ ವಿಮಾ ಸಂಸ್ಥೆಗಳಲ್ಲಿ ಒಂದಾದ ಬಜಾಜ್ ಜನರಲ್ ಇನ್ಶೂರೆನ್ಸ್ ಲಿಮಿಟೆಡ್ (ಹಿಂದೆ ಬಜಾಜ್ ಅಲಯನ್ಸ್ ಜನರಲ್ ಇನ್ಶೂರೆನ್ಸ್ ಕಂಪನಿ ಲಿಮಿಟೆಡ್) ಹೊಸ ಸಮಗ್ರ ಆರೋಗ್ಯ ವಿಮಾ ಉತ್ಪನ್ನ 'ಮೈ ಹೆಲ್ತ್ ಕೇರ್ ಪ್ಲಾನ್ ಎಡ್ಜ್+' ಅನ್ನು ಬಿಡುಗಡೆ ಮಾಡಿದೆ. ಈ ಹೊಸ ಯೋಜನೆ ಹೆಚ್ಚುತ್ತಿರುವ ವೈದ್ಯಕೀಯ ವೆಚ್ಚಗಳನ್ನು ನಿಯಂತ್ರಿಸುವುದು ಮತ್ತು ಗ್ರಾಹಕರಿಗೆ ಹೆಚ್ಚಿನ ಅನುವು ಹಾಗೂ ಕಸ್ಟಮೈಸ್ ಆಯ್ಕೆಗಳನ್ನು ನೀಡುವುದು ಇದರ ಪ್ರಮುಖ ಉದ್ದೇಶವಾಗಿದೆ.




ಈ ಯೋಜನೆ ಈಗಿನ ಎಂಎಚ್‌ಸಿಪಿ ಉತ್ಪನ್ನದ ಆಧಾರದ ಮೇಲೆ ರೂಪುಗೊಂಡಿದ್ದು, ಆಸ್ಪತ್ರೆ ದಾಖಲಾತಿಗೆ ಅಗತ್ಯವಿರುವ ಮೂಲ ವಿಮಾ ಕವಚದ ಜೊತೆಗೆ ವಿವಿಧ ಐಚ್ಛಿಕ ರೈಡರ್‌ಗಳನ್ನು ಒಳಗೊಂಡಿದೆ. ಇದರ ಮೂಲಕ ಗ್ರಾಹಕರು ತಮ್ಮ ಅಗತ್ಯ, ಜೀವನ ಹಂತ ಹಾಗೂ ಆರ್ಥಿಕ ಸಾಮರ್ಥ್ಯಕ್ಕೆ ಅನುಗುಣವಾಗಿ ಪಾಲಿಸಿಯನ್ನು ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ.

ಈ ಯೋಜನೆಯಲ್ಲಿ ರೂ.5 ಲಕ್ಷದಿಂದ ರೂ.5 ಕೋಟಿ ವರೆಗೆ ವಿಮಾ ಮೊತ್ತ ಆಯ್ಕೆ ಮಾಡಬಹುದಾಗಿದೆ. ಜೊತೆಗೆ ಪಾಲಿಸಿ ವರ್ಷದೊಳಗೆ ಅನಿಯಮಿತ ರೀಸ್ಟೋರೇಷನ್ ಸೌಲಭ್ಯವಿದ್ದು, ಹಲವಾರು ಬಾರಿ ಕ್ಲೈಮ್ ಸಲ್ಲಿಸಿದರೂ ವಿಮಾ ರಕ್ಷಣೆ ಮುಂದುವರಿಯುತ್ತದೆ ಎಂದು ಕಂಪನಿ ತಿಳಿಸಿದೆ.

ಆಸ್ಪತ್ರೆ ವೆಚ್ಚಗಳಾದ ರೂಮ್ ಬಾಡಿಗೆ, ಐಸಿಯು ಶುಲ್ಕ, ಶಸ್ತ್ರಚಿಕಿತ್ಸೆ, ಆಧುನಿಕ ಚಿಕಿತ್ಸೆ ವಿಧಾನಗಳು, ಆಯುಷ್ ಚಿಕಿತ್ಸೆಗಳು ಹಾಗೂ ಆಸ್ಪತ್ರೆಗೆ ದಾಖಲಾಗುವ ಮೊದಲು ಮತ್ತು ನಂತರದ ವೆಚ್ಚಗಳನ್ನು ಈ ಯೋಜನೆ ಒಳಗೊಂಡಿದೆ. ಜೊತೆಗೆ ಡೇ ಕೇರ್ ಪ್ರಕ್ರಿಯೆಗಳು, ಮನೆಮಾತಿನ ಆಸ್ಪತ್ರೆ ಚಿಕಿತ್ಸೆ, ಅಂಗ ದಾನಿ ವೆಚ್ಚಗಳು ಹಾಗೂ ತುರ್ತು ಆಂಬುಲೆನ್ಸ್ ಸೇವೆಗಳಿಗೂ ಕವಚ ಒದಗಿಸಲಾಗಿದೆ.

ಈ ಯೋಜನೆಯ ಪ್ರಮುಖ ವಿಶೇಷತೆ ಅದರ ಮಾಡ್ಯುಲರ್ ರಚನೆ ಆಗಿದ್ದು, ಗ್ರಾಹಕರು ತಮ್ಮ ಅಗತ್ಯಕ್ಕೆ ತಕ್ಕಂತೆ ಹೆಚ್ಚುವರಿ ಕವಚಗಳನ್ನು ಸೇರಿಸಿಕೊಳ್ಳಬಹುದು. ಕನ್ಸ್ಯೂಮೆಬಲ್ಸ್ ಪ್ಲಸ್, ಸೂಪರ್ ಕ್ಯುಮುಲೇಟಿವ್ ಬೋನಸ್, ಮೇಜರ್ ಇಲ್ನೆಸ್ ಮತ್ತು ಆಕ್ಸಿಡೆಂಟ್ ಮಲ್ಟಿಪ್ಲೈಯರ್ ಮುಂತಾದ ರೈಡರ್‌ಗಳು ಇದರಲ್ಲಿ ಸೇರಿವೆ.

ಇದಲ್ಲದೆ, ಈ ಯೋಜನೆಯಡಿ ವಿದೇಶದಲ್ಲಿ ತುರ್ತು ಹಾಗೂ ಯೋಜಿತ ಚಿಕಿತ್ಸೆಗಳಿಗೆ ಜಾಗತಿಕ ವಿಮಾ ಕವಚ ಆಯ್ಕೆಯೂ ಲಭ್ಯವಿದ್ದು, ಅಂತಾರಾಷ್ಟ್ರೀಯ ಆರೋಗ್ಯ ಸೇವೆ ಅಗತ್ಯವಿರುವ ಗ್ರಾಹಕರಿಗೆ ಇದು ಹೆಚ್ಚಿನ ನೆರವಾಗಲಿದೆ ಎಂದು ಸಂಸ್ಥೆ ತಿಳಿಸಿದೆ.

# ಬಿಜೆಪಿ ಅಧಿಕಾರಕ್ಕೆ ಬರಲು ಮೊದಲ ಹೆಜ್ಜೆ: ವಿಜಯೇಂದ್ರ

ಬೆಂಗಳೂರು

2028ರ ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅಧಿಕಾರಕ್ಕೆ ಬರುವುದಕ್ಕೆ ಮೊದಲ ಹೆಜ್ಜೆಯನ್ನು ಚಿತ್ರದುರ್ಗದಲ್ಲಿ ಇದೇ 9ರಂದು ಅಭಿಮಾನೋತ್ಸವದ ಮೂಲಕ ಹಾಕಿದ್ದೇವೆ ಎಂದು ಶಾಸಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ.

ಬಿ.ಎಸ್.ವೈ ಅಭಿಮಾನೋತ್ಸವ ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದ ಎಲ್ಲಾ ಕಾರ್ಯಕರ್ತರಿಗೆ ಇಂದು "ಅರಮನೆ ಮೈದಾನದ ಗೇಟ್ ನಂ. 4ರ ಗಾಯತ್ರಿ ವಿಹಾರ"ದಲ್ಲಿ ಅಭಿನಂದನಾ ಕಾರ್ಯಕ್ರಮ ಮತ್ತು ಔತಣಕೂಟವನ್ನು ಏರ್ಪಡಿಸಲಾಗಿತ್ತು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಬಿ.ಎಸ್. ವೈ ಅಭಿಮಾನೋತ್ಸವಕ್ಕೆ ರಾಜ್ಯದ ಮೂಲೆಮೂಲೆಗಳಿಂದ ಅಭಿಮಾನಿಗಳು, ಕಾರ್ಯಕರ್ತರು ಜನಸಾಗರದಂತೆ ಆಗಮಿಸಿದ್ದು, ಯಶಸ್ವಿಯಾಗಿ ನಡೆದಿದೆ ಇದೊಂದು ಹೊಸ ಇತಿಹಾಸವನ್ನು ಸೃಷ್ಟಿ ಮಾಡಿದೆ ಎಂದು ವಿಶ್ಲೇಷಿಸಿದರು.



ಅಭಿಮಾನೋತ್ಸವದ ಕುರಿತ ಚರ್ಚೆ ನಡೆಯುತ್ತಿದ್ದಾಗ ಅನುಮಾನ, ಗೊಂದಲಗಳೂ ವ್ಯಕ್ತವಾಗಿತ್ತು. ಲೋಕಸಭೆ, ವಿಧಾನಸಭಾ ಚುನಾವಣೆ ಹತ್ತಿರ ಇಲ್ಲದಿರುವಾಗ ಅಭಿಮಾನೋತ್ಸವ ಯಾಕೆ ಎಂಬ ಪ್ರಶ್ನೆ ಎದ್ದುದು ಸಹಜ ಎಂದ ಅವರು, ಪಕ್ಷದ ರಾಜ್ಯಾಧ್ಯಕ್ಷನಾಗಿ ರಾಜಕೀಯ ಬೇಳೆ ಬೇಯಿಸಿಕೊಳ್ಳಲು ಯಡಿಯೂರಪ್ಪನವರನ್ನು ಅಭಿನಂದಿಸಿಲ್ಲ. ರೈತರ ಕಣ್ಣೀರೊರೆಸಿದ, ಬಿಜೆಪಿಯನ್ನು ಅಧಿಕಾರಕ್ಕೆ ತಂದ, ಸಂಘಟನೆಯನ್ನು ಬಲಪಡಿಸಿ ಕಾರ್ಯಕರ್ತರಿಗೆ ಧೈರ್ಯ ತುಂಬಿದ ಹಾಗೂ ಸಾಮಾಜಿಕ ನ್ಯಾಯ ನೀಡಿದ ರಾಜ್ಯ ಕಂಡ ಅಪ್ರತಿಮ ಹೋರಾಟಗಾರನ ಅಭಿಮಾನೋತ್ಸವ ಇದಾಗಿತ್ತು ಎಂದು ತಿಳಿಸಿದರು.

ಯಡಿಯೂರಪ್ಪನವರೂ ಸೇರಿ ಅನೇಕ ಹಿರಿಯರ ತಪಸ್ಸು, ಕಾರ್ಯಕರ್ತರ ಪರಿಶ್ರಮದಿಂದ ಬಿಜೆಪಿಯನ್ನು ನಗರ ಕೇಂದ್ರಿತ ಪಕ್ಷದಿಂದ ರಾಜ್ಯದ ಮೂಲೆಗಳಿಗೆ ತಲುಪಿಸಲು ಸಾಧ್ಯವಾಗಿದೆ. ಯಡಿಯೂರಪ್ಪನವರ ಪ್ರಾಮಾಣಿಕತೆ, ಹೋರಾಟ, ಪರಿಶ್ರಮದ ಮುಖವನ್ನು ರಾಜ್ಯದ ಯುವಜನತೆಗೆ ಪರಿಚಯಿಸುವ ಕೆಲಸಕ್ಕಾಗಿ ಅಭಿಮಾನೋತ್ಸವ ಆಚರಿಸಿದ್ದೇವೆ ಎಂದು ವಿವರಿಸಿದರು.

ಆ ದಿನ ರಾಜ್ಯದ ಮೂಲೆ ಮೂಲೆಗಳಿಂದ 10 ಲಕ್ಷಕ್ಕೂ ಹೆಚ್ಚು ಅಭಿಮಾನಿಗಳು ಬಂದಿದ್ದರು. ಒಬ್ಬ ಹೋರಾಟಗಾರನ ಮೇಲೆ ಅಭಿಮಾನದಿಂದ ಜನರು ಸ್ವ ಇಚ್ಛೆಯಿಂದ ಬಂದಿದ್ದರು. ಯಡಿಯೂರಪ್ಪ ಅವರು ವ್ಯಕ್ತಿಯಲ್ಲ; ಅವರೊಬ್ಬ ಶಕ್ತಿ ಎಂದೇ ಜನ ಭಾವಿಸಿದ್ದಾರೆ ಎಂದು ತಿಳಿಸಿದರು. ಕಾರ್ಯಕರ್ತರು ಮತ್ತು ಮುಖಂಡರ ಶ್ರಮದಿಂದ ಅಭಿಮಾನೋತ್ಸವ ಯಶಸ್ವಿಯಾಗಿದೆ ಎಂದು ಹೇಳಿದರು.

ಕರ್ನಾಟಕದ ಇತಿಹಾಸದಲ್ಲಿ ಮೊಟ್ಟ ಮೊದಲ ಬಾರಿಗೆ ಇಂಥ ಕಾರ್ಯಕ್ರಮ ಆಗುತ್ತಿದೆ ಎಂದು ಅಮಿತ್ ಶಾ ಜೀ ಅವರು ಮೆಚ್ಚುಗೆ ಸೂಚಿಸಿದ್ದನ್ನು ಅವರು ಉಲ್ಲೇಖಿಸಿದರು. ಎಲ್ಲ ಸಮಾಜಗಳ ಜಗದ್ಗುರುಗಳು, ಸ್ವಾಮೀಜಿಗಳು ಒಂದೇ ವೇದಿಕೆಯಲ್ಲಿ ಬಂದಿದ್ದಾರೆ ಎಂದರೆ, ಯಡಿಯೂರಪ್ಪ ಅವರ ಮೇಲಿನ ಅಭಿಮಾನವೇ ಇದಕ್ಕೆ ಕಾರಣ ಎಂದಿದ್ದರು ಎಂದು ತಿಳಿಸಿದರು. ಅರ್ಥಪೂರ್ಣವಾಗಿ ರಾಜ್ಯದ ಯುವಜನತೆಗೆ ಸ್ಪಷ್ಟ ಸಂದೇಶ ನೀಡುವ ಮಾದರಿಯಲ್ಲಿ ಕಾರ್ಯಕ್ರಮ ಯಶಸ್ಸು ಪಡೆದಿದೆ ಎಂದು ಅವರು ನುಡಿದರು.

ಮಾಜಿ ಉಪಮುಖ್ಯಮಂತ್ರಿ ಮತ್ತು ಸಂಸದ ಗೋವಿಂದ ಕಾರಜೋಳ, ಸಂಸದ ಬಿ.ವೈ.ರಾಘವೇಂದ್ರ, ಸಂಸದರು, ಶಾಸಕ ಎಸ್.ಆರ್.ವಿಶ್ವನಾಥ್, ಶಾಸಕರು, ವಿಧಾನಪರಿಷತ್ ಸದಸ್ಯರು ಉಪಸ್ಥಿತರಿದ್ದರು.

# ಅಂಧ ಮಕ್ಕಳು ಮತ್ತು ವಿಕಲಚೇತನರಿಗೆ ಸಹಾಯಧನ

ಬೆಂಗಳೂರು

ರಾಜ್ಯದ ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರ ಹುಟ್ಟುಹಬ್ಬದ ಪ್ರಯುಕ್ತ ನಗರದ ಮೌರ್ಯ ಹೋಟೆಲ್ ಸಭಾಂಗಣದಲ್ಲಿ ಸಾಮಾಜಿಕ ಸೇವಾ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.



ಕಾರ್ಯಕ್ರಮದಲ್ಲಿ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಎಂಇಐ ಅಧ್ಯಕ್ಷ ಎಸ್. ಮನೋಹರ್ ಅವರೊಂದಿಗೆ ಅಂಧ ಮಕ್ಕಳ ಜೊತೆ ಕೇಕ್ ಕತ್ತರಿಸಿ ಸಂಭ್ರಮಿಸಿದರು. ಇದೇ ವೇಳೆ ಅಂಧರ ಸಂಸ್ಥೆ, ವಿಕಲಚೇತನರು ಹಾಗೂ ವಿದ್ಯಾರ್ಥಿಗಳಿಗೆ ಸಹಾಯಧನ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ರಾಮಲಿಂಗಾ ರೆಡ್ಡಿ, "ಡಿ.ಕೆ. ಶಿವಕುಮಾರ್ ಅವರು ಕಾಂಗ್ರೆಸ್ ಪಕ್ಷದ ಸಂಘಟನೆಯಲ್ಲಿ ಮುಂಚೂಣಿ ನಾಯಕರಾಗಿದ್ದು, ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲು ಪ್ರಮುಖ ಕಾರಣಕರ್ತರು" ಎಂದು ಹೇಳಿದರು.

"2028 ಮತ್ತು 2033ರ ವಿಧಾನಸಭಾ ಚುನಾವಣೆಯಲ್ಲಿಯೂ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲಿದೆ. ಎಸ್.ಐ.ಆರ್. ಮಾಡುವ ಬದಲು ಹೊಸ ಮತದಾರರ ಪಟ್ಟಿಯನ್ನು ಸಿದ್ಧಪಡಿಸಿ ಚುನಾವಣೆ ನಡೆಸಬೇಕು" ಎಂದು ಅವರು ಅಭಿಪ್ರಾಯಪಟ್ಟರು.

ಕೇಂದ್ರ ಬಿಜೆಪಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅವರು, "ಚುನಾವಣೆ ಸಂದರ್ಭದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಸದೆ, ಚುನಾವಣೆ ಬಳಿಕ ಬೆಲೆ ಹೆಚ್ಚಿಸಿ ಜನರಿಗೆ ವಂಚನೆ ಮಾಡಲಾಗುತ್ತಿದೆ. ಜನರು ಬಿಜೆಪಿಯ ದುರಾಡಳಿತವನ್ನು ಗಮನಿಸುತ್ತಿದ್ದಾರೆ" ಎಂದು ಟೀಕಿಸಿದರು.

"ಕಾಂಗ್ರೆಸ್ ಪಕ್ಷ ನುಡಿದಂತೆ ನಡೆಯುವ ಪಕ್ಷ ಎಂಬ ವಿಶ್ವಾಸ ಜನರಲ್ಲಿ ಮೂಡಿದ್ದು, ಮುಂದಿನ ದಿನಗಳಲ್ಲಿಯೂ ಜನರ ಆಶೀರ್ವಾದದಿಂದ ಅಧಿಕಾರದಲ್ಲಿ ಮುಂದುವರಿಯಲಿದೆ" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಮುಖಂಡರಾದ ಎ. ಆನಂದ್, ಜಿ. ಜನಾರ್ದನ್, ಪ್ರಕಾಶ್, ಚಂದ್ರಶೇಖರ್, ಕುಶಾಲ್ ಅರುವೆಗೌಡ, ಪುಟ್ಟರಾಜು ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಪ್ರತಿದಿನ ಬಾದಾಮಿ ಸೇವನೆಯಿಂದ ಮೆದುಳಿನ ಆರೋಗ್ಯ ಸುಧಾರಣೆ

ಬೆಂಗಳೂರು

ಇತ್ತೀಚಿನ ಸಂಶೋಧನೆಯ ಪ್ರಕಾರ, ಪ್ರತಿದಿನ ಬಾದಾಮಿ ಸೇವಿಸುವುದು ಪೂರ್ವ ಮಧುಮೇಹದಿಂದ ಬಳಲುತ್ತಿರುವ ವಯಸ್ಕರ ಮೆದುಳಿನ ಕಾರ್ಯಕ್ಷಮತೆ ಹಾಗೂ ಚಯಾಪಚಯ ಆರೋಗ್ಯದಲ್ಲಿ ಗಮನಾರ್ಹ ಸುಧಾರಣೆಯನ್ನು ನೀಡಬಹುದು ಎಂದು ತಿಳಿದುಬಂದಿದೆ. ಈ ಅಧ್ಯಯನವು 'ಜರ್ನಲ್ ಆಫ್ ನ್ಯೂಟ್ರಿಷನ್' ಪತ್ರಿಕೆಯಲ್ಲಿ ಪ್ರಕಟವಾಗಿದ್ದು, ಡಾ. ಅನೂಪ್ ಮಿಶ್ರಾ ಮತ್ತು ಡಾ. ಸೀಮಾ ಗುಲಾಟಿ ಅವರ ನೇತೃತ್ವದಲ್ಲಿ ನಡೆಸಲಾಗಿದೆ.



ಈ ಸಂಶೋಧನೆಯಲ್ಲಿ 40 ರಿಂದ 60 ವರ್ಷ ವಯಸ್ಸಿನ, ಪೂರ್ವ ಮಧುಮೇಹದಿಂದ ಬಳಲುತ್ತಿದ್ದ 60 ಏಷ್ಯನ್ ಭಾರತೀಯ ವಯಸ್ಕರನ್ನು ಆಯ್ಕೆ ಮಾಡಲಾಗಿತ್ತು. ಇವರನ್ನು ಎರಡು ಗುಂಪುಗಳಾಗಿ ವಿಭಜಿಸಿ, ಒಂದು ಗುಂಪಿಗೆ ಸಾಮಾನ್ಯ ಸಮತೋಲಿತ ಆಹಾರ ನೀಡಲಾಗಿದ್ದರೆ, ಇನ್ನೊಂದು ಗುಂಪಿಗೆ ದೈನಂದಿನ ಕ್ಯಾಲೊರಿಯ ಒಂದು ಭಾಗವನ್ನು ಬಾದಾಮಿಯಿಂದ ಪಡೆಯುವಂತೆ ಆಹಾರ ಯೋಜನೆ ನೀಡಲಾಗಿದೆ.

ಅಧ್ಯಯನವು 24 ವಾರಗಳ ಕಾಲ ನಡೆಯಿದ್ದು, ದಿನಕ್ಕೆ ಸುಮಾರು 32 ರಿಂದ 42 ಗ್ರಾಂ ಬಾದಾಮಿ ಸೇವನೆ ಮಾಡಲಾಗಿದೆ.

# ಅತ್ಯಂತ ದೊಡ್ಡ ಡೆನಿಮ್, ಸ್ನೀಕರ್ ಹಬ್ಬ ಆರಂಭ

ಮಂಗಳೂರು

ಈ ಸೀಸನ್‌ನಲ್ಲಿ, ಫಿಜಾ ಬೈ ನೆಕ್ಸಸ್ ತನ್ನ ಬಹುನಿರೀಕ್ಷಿತ 'ಡೆನಿಮ್ ಮತ್ತು ಸ್ನೀಕರ್ ಫೆಸ್ಟ್' ನ 4ನೇ ಆವೃತ್ತಿಯನ್ನು ಹೊತ್ತು ತಂದಿದೆ. ಅತ್ಯಾಧುನಿಕ ಫಿಟ್ಸ್, ಸ್ಟೇಟ್‌ಮೆಂಟ್ ಕಿಕ್ಸ್ ಮತ್ತು ಗಲ್ಲಿ–ಶೈಲಿಯ ಬಟ್ಟೆಗಳ ಪ್ರದರ್ಶನ ಹಾಗೂ ಮಾರಾಟದ ಸೀಮಿತ ಅವಧಿಯ ಸಂಭ್ರಮ ಇದಾಗಿದೆ.

ಶಾಲಾ–ಕಾಲೇಜುಗಳ ಮರುಆರಂಭದ ಸರಿಯಾದ ಸಮಯದಲ್ಲೇ ಈ ಹಬ್ಬವನ್ನು ಆಯೋಜಿಸಲಾಗಿದ್ದು, ಜಾಗತಿಕ ಮತ್ತು ದೇಶೀಯ ಪ್ರಮುಖ ಬ್ರ್ಯಾಂಡ್‌ಗಳು ಒಂದೇ ಸೂರಿನಡಿ ಇಲ್ಲಿ ಲಭ್ಯವಿರಲಿವೆ.





ದೈನಂದಿನ ಡೆನಿಮ್ ಅಗತ್ಯತೆಗಳಿಂದ ಹಿಡಿದು, ಸಖತ್ ಕ್ರೇಜ್ ಸೃಷ್ಟಿಸಿರುವ ಸ್ನೀಕರ್‌ಗಳವರೆಗೆ, ಗ್ರಾಹಕರು ಹೊಸ ಕಲೆಕ್ಷನ್‌ಗಳು, ಇತ್ತೀಚಿನ ಲಾಂಚ್‌ಗಳು ಮತ್ತು ಟ್ರೆಂಡ್‌ನಲ್ಲಿರುವ ವಿನ್ಯಾಸಗಳನ್ನು ಇಲ್ಲಿ ಅನ್ವೇಷಿಸಬಹುದಾಗಿದೆ.

ಇದು ರಜಾದಿನಗಳ ಶಾಪಿಂಗ್ ಆಗಿರಲಿ, ಕಾಲೇಜು ವಾರ್ಡ್‌ರೋಬ್ ಬದಲಾಯಿಸುವುದಾಗಿರಲಿ ಅಥವಾ ನಿಮ್ಮ ಶೈಲಿಯನ್ನು ಅಪ್‌ಗ್ರೇಡ್ ಮಾಡಿಕೊಳ್ಳುವುದಾಗಿರಲಿ, ಈ ಹಬ್ಬವು ಪ್ರತಿಯೊಬ್ಬ ಫ್ಯಾಶನ್ ಪ್ರೇಮಿಗೂ ಸೂಕ್ತವಾದದ್ದನ್ನು ನೀಡುವ ಭರವಸೆ ನೀಡುತ್ತದೆ.

# 'ಜನಿವಾರ ಧಾರ್ಮಿಕ ಹಿನ್ನೆಲೆ ಹೊಂದಿರುವಂಥದ್ದು'

ಬೆಂಗಳೂರು

ರಾಜ್ಯ ಸರ್ಕಾರ ಶಾಲಾ ಕಾಲೇಜುಗಳಲ್ಲಿ ಹಿಜಾಬ್‌ಗೆ ಅನುಮತಿ ನೀಡಿರುವ ಹಿನ್ನೆಲೆಯಲ್ಲಿ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ, ನಟ ನಿಖಿಲ್ ಕುಮಾರಸ್ವಾಮಿ ಜನಿವಾರವು ಕೂಡ ಧಾರ್ಮಿಕ ಪರಂಪರೆಯ ಹಿನ್ನೆಲೆಯಿಂದ ಬಂದಿರುವಂಥದ್ದು. ಧಾರ್ಮಿಕ ಆಚರಣೆಗಳು ಅವರವರ ಭಾವಕ್ಕೆ ಬಿಟ್ಟಿರುವ ವಿಚಾರವೆಂದು ಸಮರ್ಥಿಸಿಕೊಂಡರು.



ಬೆಂಗಳೂರಿನಲ್ಲಿ ತಮ್ಮನ್ನು ಭೇಟಿಯಾದ ಪತ್ರಕರ್ತರನ್ನುದ್ದೇಶಿಸಿ ಮಾತನಾಡಿದ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ದೇಶದ ನಾಗರಿಕರ ಹಿತದೃಷ್ಟಿಯಿಂದ ಒಂಭತ್ತು ಅಂಶಗಳನ್ನು ಪಾಲಿಸುವಂತೆ ತಿಳಿಸಿದ್ದಾರೆ. ಪೆಟ್ರೋಲ್, ಗ್ಯಾಸ್ ಬೆಲೆ ಏರಿಕೆ ನಮ್ಮ ಕೈಲಿಲ್ಲ. ಮಧ್ಯಪ್ರಾಚ್ಯ ದೇಶಗಳಲ್ಲಿ ನಡೆಯುತ್ತಿರುವ ನಿರಂತರ ಯುದ್ಧದಿಂದಾಗಿ ಈ ಸಮಸ್ಯೆ ಉದ್ಭವಿಸಿದೆ. ಯುದ್ಧ ನಿಂತ ಬಳಿಕ ಎಲ್ಲವೂ ಸರಿಹೋಗಬಹುದೆಂಬ ವಿಶ್ವಾಸವಿದೆ ಎಂದರು.

ಕರ್ನಾಟಕದ ಬದಲಾದ ರಾಜಕೀಯ ವಿದ್ಯಮಾನಗಳ ಕುರಿತು ಪತ್ರಕರ್ತರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಜೆಡಿಎಸ್ ಪಕ್ಷದ ಶಾಸಕರು ನಮ್ಮನ್ನು ಭೇಟಿಯಾಗುವುದು ಸಹಜ. ದೇವೇಗೌಡರನ್ನು ಮತ್ತು ನಮ್ಮನ್ನು ಪಕ್ಷದ ತತ್ವ ಸಿದ್ಧಾಂತಗಳ ಮೇಲೆ ಭೇಟಿ ಆಗುತ್ತಾರೆ. ಇದರಲ್ಲಿ ಬೇರೆ ಅರ್ಥ ಕಲ್ಪಿಸುವ ಪ್ರಮೇಯ ಉದ್ಭವಿಸುವುದಿಲ್ಲ ಎಂದರು. ನೀಟ್ ಪರೀಕ್ಷೆಯ ವಿಚಾರವಾಗಿ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಇದು ವ್ಯವಸ್ಥಿತವಾಗಿ ಕಳೆದ ಹಲವಾರು ವರ್ಷಗಳಿಂದ ನಡೆದುಕೊಂಡು ಬರುತ್ತಿದೆ. ಪ್ರಶ್ನೆ ಪತ್ರಿಕೆ ಬಹಿರಂಗಗೊಂಡ ಬಳಿಕ ಇದನ್ನು ಸಿಬಿಐ ತನಿಖೆಗೆ ಒಪ್ಪಿಸಲಾಗಿದೆ. ಸಿಬಿಐ ಈಗಾಗಲೇ ವಿಚಾರಣೆ ಆರಂಭಿಸಿದೆ. ಆರೋಪಿಗಳನ್ನು ಬಂಧಿಸಿ ಸಮಗ್ರ ಮಾಹಿತಿ ಕಲೆ ಹಾಕುತ್ತಿದ್ದಾರೆ. ವಿದ್ಯಾರ್ಥಿಗಳು ಸಾಕಷ್ಟು ಕಷ್ಟ ಪಟ್ಟು ಓದಿರುತ್ತಾರೆ. ಇಂತಹ ಕೃತ್ಯಗಳಿಂದ ಅವರಿಗೆ ಬೇಸರವಾಗುವುದು ಸಹಜ. ಇದರಲ್ಲಿ ದೊಡ್ಡ ಮಾಫಿಯಾಯವೇ ಇರುವುದು ಬಹಿರಂಗಗೊಂಡಿದೆ.



ಕೆನಡಾ ದೇಶದ ಹೈ ಕಮೀಷನರ್ ಕ್ರಿಸ್ ಕೂಟರ್ ನೇತೃತ್ವದ ನಿಯೋಗ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾವೇರಿ ನಿವಾಸದಲ್ಲಿ ಸೌಹಾರ್ದ ಭೇಟಿ ಮಾಡಿ ಶಿಕ್ಷಣ, ತಂತ್ರಜ್ಞಾನ, ಏರೋಸ್ಪೇಸ್ ಕ್ಷೇತ್ರಗಳಲ್ಲಿ ಎರಡೂ ದೇಶಗಳ ಬಾಂಧವ್ಯ ವೃದ್ಧಿ ಕುರಿತು ಮಾತುಕತೆ ನಡೆಸಿತು.

# ಎನ್‌ಎಸ್‌ಇ ಮತ್ತು ಕರ್ನಾಟಕ ಉನ್ನತ ಶಿಕ್ಷಣ ಇಲಾಖೆ ನಡುವೆ ಒಪ್ಪಂದ

ಬೆಂಗಳೂರು

ವಿದ್ಯಾರ್ಥಿಗಳ ಸಬಲೀಕರಣ ಹಾಗೂ ಉದ್ಯೋಗಾರ್ಹತೆ ಹೆಚ್ಚಿಸುವ ನಿಟ್ಟಿನಲ್ಲಿ ರಾಷ್ಟ್ರೀಯ ಷೇರು ಮಾರುಕಟ್ಟೆ (ಎನ್‌ಎಸ್‌ಇ) ಮತ್ತು ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ನಡುವೆ ಮಹತ್ವದ ತಿಳುವಳಿಕಾ ಒಪ್ಪಂದ (ಎಂ.ಒ.ಯು) ಸಹಿ ಮಾಡಲಾಗಿದೆ. ಈ ಒಪ್ಪಂದದ ಮೂಲಕ ರಾಜ್ಯದ ಯುವಜನತೆಗೆ ಭದ್ರತಾ ಮಾರುಕಟ್ಟೆ ಹಾಗೂ ಹಣಕಾಸು ಕ್ಷೇತ್ರಕ್ಕೆ ಸಂಬಂಧಿಸಿದ ಉದ್ಯಮಾಧಾರಿತ ಕೌಶಲ್ಯಗಳನ್ನು ಒದಗಿಸುವ ಉದ್ದೇಶ ಹೊಂದಲಾಗಿದೆ.

ಈ 'ವಿದ್ಯಾರ್ಥಿ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮ'ವನ್ನು ಅಧಿಕೃತವಾಗಿ ಮೇ 15, 2026 ರಂದು ಆರಂಭಿಸಲಾಗಿದ್ದು, ಒಪ್ಪಂದ ವಿನಿಮಯ ಕಾರ್ಯಕ್ರಮವು ರಾಜ್ಯ ಸರ್ಕಾರದ ಉನ್ನತ ಮಟ್ಟದ ಗಣ್ಯರ ಉಪಸ್ಥಿತಿಯಲ್ಲಿ ನೆರವೇರಿತು.

ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ಸಿದ್ದರಾಮಯ್ಯ ಸೇರಿದಂತೆ ಹಲವು ಸಚಿವರು ಹಾಗೂ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

ಒಪ್ಪಂದಕ್ಕೆ ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ಕಾರ್ಯದರ್ಶಿ ಖುಷ್ಬೂ ಜಿ. ಚೌಧರಿ ಹಾಗೂ ಎನ್‌ಎಸ್‌ಇ ಸಂಸ್ಥೆಯ ಮುಖ್ಯ ನಿಯಂತ್ರಣಾಧಿಕಾರಿ ಅಂಕಿತ್ ಶರ್ಮಾ ಸಹಿ ಹಾಕಿದರು. ಈ ಸಹಭಾಗಿತ್ವವು ಶಿಕ್ಷಣ ಕ್ಷೇತ್ರದಲ್ಲಿ ಹಣಕಾಸು ಜಾಗೃತಿ ಮತ್ತು ಮಾರುಕಟ್ಟೆ ಸಂಬಂಧಿತ ಕೌಶಲ್ಯಗಳನ್ನು ವಿದ್ಯಾರ್ಥಿಗಳಿಗೆ ತಲುಪಿಸುವ ಮಹತ್ವದ ಹೆಜ್ಜೆಯಾಗಿದೆ.




ಈ ಸಂದರ್ಭದಲ್ಲಿ ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್, ಐಟಿ ಮತ್ತು ಬಿಟಿ ಸಚಿವ ಪ್ರಿಯಾಂಕ್ ಎಂ. ಖರ್ಗೆ, ಕೃಷಿ ಸಚಿವ ಎನ್. ಚಲುವರಾಯಸ್ವಾಮಿ, ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣಪ್ರಕಾಶ್ ಆರ್. ಪಾಟೀಲ್ ಹಾಗೂ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಉಪಸ್ಥಿತರಿದ್ದರು.

ಎನ್‌ಎಸ್‌ಇ ಹಾಗೂ ರಾಜ್ಯ ಸರ್ಕಾರದ ಈ ಸಹಯೋಗವು ಕರ್ನಾಟಕವನ್ನು ಹೂಡಿಕೆದಾರ ಸ್ನೇಹಿ ಹಾಗೂ ಜ್ಞಾನಾಧಾರಿತ ಆರ್ಥಿಕ ವ್ಯವಸ್ಥೆಯತ್ತ ಕೊಂಡೊಯ್ಯುವಲ್ಲಿ ಸಹಕಾರಿಯಾಗಲಿದೆ ಎಂದು ಅಭಿಪ್ರಾಯ ವ್ಯಕ್ತವಾಗಿದೆ.

ಎನ್‌ಎಸ್‌ಇ ವ್ಯವಸ್ಥಾಪಕ ನಿರ್ದೇಶಕ ಮತ್ತು ಸಿಇಒ ಆಶಿಷ್ ಕುಮಾರ್ ಚೌಹಾಣ್ ಮಾತನಾಡಿ, ಶಿಕ್ಷಣ, ಹಣಕಾಸು ಸಾಕ್ಷರತೆ ಮತ್ತು ಹೂಡಿಕೆ ಜ್ಞಾನವು ಸಬಲ ಹಾಗೂ ಸುಸ್ಥಿರ ಕರ್ನಾಟಕ ನಿರ್ಮಾಣಕ್ಕೆ ಮೂಲಸ್ತಂಭಗಳಾಗಿವೆ ಎಂದು ತಿಳಿಸಿದ್ದಾರೆ. ಈ ಉಪಕ್ರಮದ ಮೂಲಕ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಜ್ಞಾನ ಒದಗಿಸಿ, ಉದ್ಯೋಗ ಮತ್ತು ಉದ್ಯಮಶೀಲತೆ ಅವಕಾಶಗಳನ್ನು ಹೆಚ್ಚಿಸಲು ಎನ್‌ಎಸ್‌ಇ ಬದ್ಧವಾಗಿದೆ ಎಂದು ಅವರು ಹೇಳಿದ್ದಾರೆ.

## ಮೇ ಮಾಹೆಯಲ್ಲಿಯೇ 2 ತಿಂಗಳ
# ಪಡಿತರ ವಿತರಣೆ

ತುಮಕೂರು

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯ ಪಡಿತರ ಚೀಟಿದಾರರಿಗೆ ಮೇ ಮತ್ತು ಜೂನ್ ಮಾಹೆಯ ಎರಡು ತಿಂಗಳ ಪಡಿತರವನ್ನು ಒಟ್ಟಿಗೆ ಮೇ–2026ರ ಮಾಹೆಯಲ್ಲಿ ವಿತರಿಸಲಾಗುವುದು ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರತಿ ಅಂತ್ಯೋದಯ ಪಡಿತರ ಚೀಟಿ(ಎಎವೈ)ಗೆ ಮಾಹೆಯಾನ 21 ಕೆ.ಜಿ.ಯಂತೆ 42 ಕೆ.ಜಿ. ರಾಗಿ; ಮಾಹೆಯಾನ 14 ಕೆ.ಜಿ.ಯಂತೆ 28 ಕೆ.ಜಿ. ಅಕ್ಕಿ ಸೇರಿದಂತೆ ಒಟ್ಟು 70 ಕೆ.ಜಿ. ರಾಗಿ ಹಾಗೂ ಅಕ್ಕಿಯನ್ನು ವಿತರಣೆ ಮಾಡಲಾಗುವುದು.

ಆದ್ಯತಾ(ಕೇಂದ್ರ) ಪಡಿತರ ಚೀಟಿ(ಪಿ.ಹೆಚ್.ಹೆಚ್.)ಯ ಪ್ರತಿ ಸದಸ್ಯರಿಗೆ ಮಾಹೆಯಾನ 3 ಕೆ.ಜಿ.ಯಂತೆ 6 ಕೆ.ಜಿ. ರಾಗಿ ಹಾಗೂ ಮಾಹೆಯಾನ 2 ಕೆ.ಜಿ.ಯಂತೆ 4 ಕೆ.ಜಿ. ಅಕ್ಕಿ ಸೇರಿದಂತೆ ಒಟ್ಟು 10 ಕೆ.ಜಿ. ರಾಗಿ ಹಾಗೂ ಅಕ್ಕಿಯನ್ನು ವಿತರಣೆ ಮಾಡಲಾಗುವುದು.

ಆದ್ಯತಾ(ರಾಜ್ಯ) ಪಡಿತರ ಚೀಟಿ(ಪಿ.ಹೆಚ್.ಹೆಚ್.)ಯ ಪ್ರತಿ ಸದಸ್ಯರಿಗೆ ಮಾಹೆಯಾನ 5 ಕೆ.ಜಿ.ಯಂತೆ ಒಟ್ಟು 10 ಕೆ.ಜಿ. ಅಕ್ಕಿಯನ್ನು ವಿತರಣೆ ಮಾಡಲಾಗುವುದು.

ಜಿಲ್ಲೆಯ ಪಡಿತರ ಚೀಟಿದಾರರು ಮೇ ಮತ್ತು ಜೂನ್ ಮಾಹೆಗೆ ಸಂಬಂಧಿಸಿದ 2 ತಿಂಗಳ ಪಡಿತರವನ್ನು ಮೇ–2026ರ ಮಾಹೆಯಲ್ಲಿಯೇ ಒಟ್ಟಿಗೆ ಪಡೆಯಬೇಕಾಗಿರುವುದರಿಂದ ಕಡ್ಡಾಯವಾಗಿ 2 ಬಾರಿ ಬಯೋಮೆಟ್ರಿಕ್ ನೀಡಿ ಪಡಿತರವನ್ನು ಪಡೆಯಬೇಕು. ಈ ಕಾರ್ಯಕ್ಕಾಗಿ ಪ್ರತಿ ದಿನ ಬೆಳಿಗ್ಗೆ 6 ರಿಂದ ರಾತ್ರಿ 10 ಗಂಟೆಯವರೆಗೆ ಆಹಾರ ಇಲಾಖೆಯ ಸರ್ವರ್ ಲಭ್ಯಗೊಳಿಸಿರುವುದರಿಂದ ಪಡಿತರ ಚೀಟಿದಾರರು ಬಯೋ ನೀಡಿ, ಮೇ 31ರೊಳಗಾಗಿ ಪಡಿತರ ಪಡೆಯಬಹುದಾಗಿದೆ.

ಪಡಿತರ ಚೀಟಿದಾರರು ತಮಗೆ ಹಂಚಿಕೆ ಮಾಡಿದ ಆಹಾರ ಧಾನ್ಯವನ್ನು ಕಾಳಸಂತೆಯಲ್ಲಿ ಮಾರಾಟ ಮಾಡಿದರೆ ಅಂತಹವರ ಪಡಿತರ ಚೀಟಿಯನ್ನು ರದ್ದುಪಡಿಸಲಾಗುವುದು. ಕಾಳಸಂತೆಯಲ್ಲಿ ಅನಧಿಕೃತವಾಗಿ ಆಹಾರ ಧಾನ್ಯವನ್ನು ದಾಸ್ತಾನು/ಸಾಗಾಣಿಕೆ ಮಾಡುವವರ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆ 1955ರಡಿ ಕ್ರಮ ಜರುಗಿಸಲಾಗುವುದು. ಪಡಿತರ ವಿತರಣೆ ಕುರಿತು ಏನಾದರೂ ದೂರುಗಳು ಇದ್ದಲ್ಲಿ ಕೇಂದ್ರ ಸಹಾಯವಾಣಿ ಸಂಖ್ಯೆ: 1967ಕ್ಕೆ ಕರೆ ಮಾಡಿ ದೂರು ಸಲ್ಲಿಸಬಹುದಾಗಿದೆ ಅಥವಾ ಹತ್ತಿರದ ಆಹಾರ ಕಚೇರಿಗೆ ಭೇಟಿ ನೀಡಿ ದೂರು ಸಲ್ಲಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಉಚಿತ ಕಣ್ಣಿನ ತಪಾಸಣಾ ಶಿಬಿರ

ಕೋಲಾರ

ಭಗವಂತ ನೀಡಿದ ಕಣ್ಣನ್ನು ಪ್ರತಿಯೊಬ್ಬರೂ ರಕ್ಷಣೆ ಮಾಡುವುದು ಕರ್ತವ್ಯ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನಾರಾಯಣಸ್ವಾಮಿ ಅವರು ತಿಳಿಸಿದರು.

ನಗರದ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಲ್ಲಿ ಗುರುವಾರ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಇಲಾಖೆ ಹಾಗೂ ಶಂಕರ ಕಣ್ಣಿನ ಆಸ್ಪತ್ರೆ ಬೆಂಗಳೂರು ವತಿಯಿಂದ ಆಯೋಜಿಸಿದ್ದ ತಾಲೂಕಿನ ವಿಕಲಚೇತನರಿಗೆ ಹಾಗೂ ಹಿರಿಯ ನಾಗರಿಕರಿಗೆ ಉಚಿತ ಕಣ್ಣಿನ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹುಟ್ಟಿನಿಂದಲೇ ದೃಷ್ಟಿಯನ್ನು ಕಳೆದುಕೊಂಡವರು ಪ್ರಪಂಚವನ್ನು ನೋಡುವ ಭಾಗ್ಯದಿಂದ ವಂಚಿತರಾಗಿದ್ದಾರೆ. ಆದರೆ ಬಹಳಷ್ಟು ಮಂದಿ ತಮ್ಮ ನಿರ್ಲಕ್ಷ್ಯದಿಂದ ಕಣ್ಣು ಕಳೆದುಕೊಂಡವರಿದ್ದಾರೆ. ಆದ ಕಾರಣ ದೃಷ್ಟಿ ಇದ್ದವರು ಕಣ್ಣಿನ ರಕ್ಷಣೆಗೆ ಒತ್ತು ನೀಡುವುದು ಅವಶ್ಯವೆಂದರು.

ಜಿಲ್ಲಾಡಳಿತ ವತಿಯಿಂದ ಆರೋಗ್ಯದ ರಕ್ಷಣೆಗಾಗಿ ಹಲವಾರು ಉಚಿತ ಶಿಬಿರಗಳನ್ನು ಮಾಡುತ್ತಾ ಬರುತ್ತಿದ್ದೆ. ಇದರ ಸದುಪಯೋಗವನ್ನು ಸಾರ್ವಜನಿಕರು ಬಳಸಿಕೊಳ್ಳುವ ಮೂಲಕ ತಮ್ಮ ದೇಹದ ಆರೋಗ್ಯವನ್ನು ಕಾಪಾಡಿಕೊಂಡು, ನಿಮ್ಮ ನಿರ್ಭೀತಿಯಿಂದ ಜೀವನವನ್ನು ನಡೆಸಲು ಮುಂದಾಗಿ ಎಂದು ಹೇಳಿದರು.

ಜಿಲ್ಲಾ ಅಂಗವಿಕಲ ಅಧಿಕಾರಿ ಮಂಜುಳಾ ಮಾತನಾಡಿ, ಬೆಂಗಳೂರು ಕುಂದಲಹಳ್ಳಿಯ ಶಂಕರ ಕಣ್ಣಿನ ಆಸ್ಪತ್ರೆ ವತಿಯಿಂದ ತಾಲೂಕಿನ ಅಂಗವಿಕಲರಿಗೆ ಹಾಗೂ ಹಿರಿಯ ನಾಗರಿಕರಿಗೆ ಉಚಿತ ನೇತ್ರ ತಪಾಸಣಾ ಶಿಬಿರ ಆಯೋಜಿಸಲಾಗಿದೆ. ಮುಂದಿನ ದಿನಗಳಲ್ಲಿ ಎಲ್ಲಾ ತಾಲೂಕಿನಲ್ಲೂ ಶಿಬಿರವನ್ನು ಏರ್ಪಡಿಸಲು ಮುಂದಾಗುತ್ತೇವೆ ಎಂದರು.

ಕಣ್ಣಿನ ರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ, ಇಲ್ಲಿ ತಪಾಸಣೆ ಒಳಗಾದವರಿಗೆ ಉಚಿತ ಸಲಹೆ, ಔಷಧಿ, ಕನ್ನಡಕ ನೀಡಲಾಗಿದೆ. ಹೆಚ್ಚಿನ ಚಿಕಿತ್ಸೆ ಬೇಕಾದವರಿಗೆ ಕಣ್ಣಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಲು ತಿಳಿಸಲಾಗಿದೆ ಎಂದು ನುಡಿದರು. 250ಕ್ಕೂ ಹೆಚ್ಚಿನ ಮಂದಿ ಶಿಬಿರದ ಪ್ರಯೋಜನ ಪಡೆದರು.

ಈ ಸಂದರ್ಭದಲ್ಲಿ ಜಿಲ್ಲಾ ನಿರೂಪಣಾಧಿಕಾರಿ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ನಾಗರತ್ನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಮುನಿರಾಜಪ್ಪ, ಶಂಕರ ಕಣ್ಣಿನ ಆಸ್ಪತ್ರೆಯ ವೈದ್ಯೆ ಡಾ.ಅನಿತಾ, ಡಾ.ಶ್ರಾವಣಿ, ಡಾ.ತೇಜಸ್ವಿನಿ, ತಾಲೂಕು ಸಂಯೋಜಕ ರಾಜೇಶ್, ಸುಪ್ರೀಂ ಸೇವಾ ಸಂಸ್ಥೆಯ ಸಂಸ್ಥಾಪಕ ಸುಪ್ರೀಂ, ಸಿಬ್ಬಂದಿಗಳು ಹಾಗೂ ವಿಕಲಚೇತನರು ಹಾಗೂ ಹಿರಿಯ ನಾಗರಿಕರು ಹಾಜರಿದ್ದರು.

# ಭೀಕರ ರಸ್ತೆ ಅಪಘಾತ: ಸ್ಥಳದಲ್ಲೇ ಮಹಿಳೆ ಸಾವು

ತಿಪಟೂರು

ತಿಪಟೂರಿನಿಂದ ಸೂಗೂರು ಕಡೆಗೆ ಬೈಕ್‌ನಲ್ಲಿ ತೆರಳುತ್ತಿದ್ದ ಮಹಿಳೆ ಭೀಕರ ರಸ್ತೆ ಅಪಘಾತದಲ್ಲಿ ಸ್ಥಳದಲ್ಲೇ ಮೃತಪಟ್ಟ ಘಟನೆ ಮತ್ತಿಘಟ್ಟ ಕಾಲುವೆ ಸಮೀಪ ನಡೆದಿದೆ.

ಮೃತರನ್ನು ರಾಮಕ್ಕ (60) ಎಂದು ಗುರುತಿಸಲಾಗಿದೆ. ಅವರು ತಮ್ಮ ಮಗ ಸತೀಶ್ ಅವರೊಂದಿಗೆ ಬೈಕ್‌ನಲ್ಲಿ ತಿಪಟೂರಿನಿಂದ ಸೂಗೂರು ಕಡೆಗೆ ತೆರಳುತ್ತಿದ್ದ ವೇಳೆ, ಹಿಂದಿನಿಂದ ವೇಗವಾಗಿ ಬಂದ ಬಿಳಿ ಬಣ್ಣದ ಹುಂಡೈ ಐ20 ಕಾರು ಬೈಕ್‌ಗೆ ಡಿಕ್ಕಿ ಹೊಡೆದಿದೆ ಎನ್ನಲಾಗಿದೆ.

ಅಪಘಾತದ ಪರಿಣಾಮ ಬೈಕ್ ಮತ್ತು ಸವಾರರನ್ನು ಸುಮಾರು ಒಂದು ಕಿಲೋಮೀಟರ್ ದೂರದವರೆಗೆ ಎಳೆದುಕೊಂಡು ಹೋಗಲಾಗಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ. ಘಟನೆಯ ಬಳಿಕ ಕಾರು ಚಾಲಕ ವಾಹನವನ್ನು ನಿಲ್ಲಿಸದೇ ಪರಾರಿಯಾಗಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಅಪಘಾತಕ್ಕೆ ಕಾರಣವಾದ ಕಾರಿನ ಮಾಲೀಕರು ರಾಜಕೀಯ ಸಂಪರ್ಕ ಹೊಂದಿರುವ ವ್ಯಕ್ತಿಯಾಗಿರುವುದರಿಂದ ಪೊಲೀಸರು ತಕ್ಷಣ ಪ್ರಕರಣ ದಾಖಲಿಸಲು ವಿಳಂಬ ಮಾಡುತ್ತಿದ್ದಾರೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಇದರಿಂದ ಸ್ಥಳದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿತ್ತು.

ಘಟನಾ ಸ್ಥಳಕ್ಕೆ ನೊಣವಿನಕೆರೆ ಪೊಲೀಸ್ ಠಾಣೆ ಅಧಿಕಾರಿಗಳು ಭೇಟಿ ನೀಡಿ ಗ್ರಾಮಸ್ಥರನ್ನು ಸಮಾಧಾನಪಡಿಸುವ ಪ್ರಯತ್ನ ನಡೆಸಿದರು.

# ಹಿಜಾಬ್‌ಗೆ ಅವಕಾಶ ಖಂಡಿಸಿ ಶ್ರೀರಾಮಸೇನೆ ಪ್ರತಿಭಟನೆ

ಕನಕಪುರ

ಶಿಕ್ಷಣ ಸಂಸ್ಥೆಗಳಲ್ಲಿ ಹಿಜಾಬ್‌ಗೆ ಅವಕಾಶ ನೀಡುವ ಕುರಿತು ರಾಜ್ಯ ಸರ್ಕಾರದ ನಿಲುವನ್ನು ಖಂಡಿಸಿ ಶ್ರೀರಾಮ ಸೇನೆ ಕಾರ್ಯಕರ್ತರು ನಗರದ ಚನ್ನಬಸಪ್ಪ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು. ಈ ವೇಳೆ ಸರ್ಕಾರದ ಸುತ್ತೋಲೆಯ ಪ್ರತಿಯನ್ನು ಹರಿದು ಆಕ್ರೋಶ ವ್ಯಕ್ತಪಡಿಸಲಾಯಿತು.

ಪ್ರತಿಭಟನೆಯ ನಂತರ ಕನಕಪುರ ತಹಶೀಲ್ದಾರ್ ಸಂಜಯ್ ಅವರ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು. ವಿವಾದಾತ್ಮಕ ನಿರ್ಧಾರವನ್ನು ತಕ್ಷಣ ಹಿಂಪಡೆಯುವಂತೆ ಆಗ್ರಹಿಸಿ ಮಾತನಾಡಿದ ನಾಗರ್ಜುನಗೌಡ, 2022ರಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯ ಹಿಜಾಬ್ ಸಮವಸ್ತ್ರದ ಭಾಗವಲ್ಲ ಎಂದು ತೀರ್ಪು ನೀಡಿದ್ದರೂ, ಇದೀಗ ಮತ್ತೆ ಈ ವಿಚಾರವನ್ನು ಮುಂದಿಟ್ಟುಕೊಂಡು ಸರ್ಕಾರ ತುಷ್ಟೀಕರಣ ರಾಜಕಾರಣ ನಡೆಸುತ್ತಿದೆ ಎಂದು ಆರೋಪಿಸಿದರು.

ಈ ನಿರ್ಧಾರವು ನ್ಯಾಯಾಂಗದ ತೀರ್ಪಿನ ಆತ್ಮಕ್ಕೆ ವಿರುದ್ಧವಾಗಿದ್ದು, ಶಿಕ್ಷಣ ಸಂಸ್ಥೆಗಳಲ್ಲಿ ಧಾರ್ಮಿಕ ಉದ್ವಿಗ್ನತೆ ಸೃಷ್ಟಿಸುವ ಅಪಾಯಕಾರಿ ನಡೆ ಎಂದು ಅವರು ಹೇಳಿದರು. ಶಾಲೆ ಮತ್ತು ಕಾಲೇಜುಗಳು ಶಿಕ್ಷಣ, ಶಿಸ್ತು ಹಾಗೂ ರಾಷ್ಟ್ರೀಯ ಏಕತೆಯ ಕೇಂದ್ರಗಳಾಗಬೇಕೇ ಹೊರತು ಧಾರ್ಮಿಕ ಪ್ರತ್ಯೇಕತೆಯ ವೇದಿಕೆಯಾಗಬಾರದು ಎಂದು ಅಭಿಪ್ರಾಯಪಟ್ಟರು.



ಮಾಜಿ ಪ್ರಧಾನಮಂತ್ರಿ ಇಂದಿರಾ ಗಾಂಧಿ ವಿದ್ಯಾರ್ಥಿಗಳಲ್ಲಿ ಜಾತಿ ಹಾಗೂ ಧರ್ಮ ಆಧಾರಿತ ಭೇದಭಾವ ಮೂಡಬಾರದು ಎಂಬ ಕಾರಣಕ್ಕಾಗಿ ಸಮವಸ್ತ್ರ ವ್ಯವಸ್ಥೆಗೆ ಮಹತ್ವ ನೀಡಿದ್ದರು. ಆದರೆ ಈಗ ಮತಬ್ಯಾಂಕ್ ರಾಜಕಾರಣಕ್ಕಾಗಿ ಸಮವಸ್ತ್ರ ವ್ಯವಸ್ಥೆಯನ್ನು ದುರ್ಬಲಗೊಳಿಸುವ ಪ್ರಯತ್ನ ನಡೆಯುತ್ತಿದೆ ಎಂದು ಅವರು ಟೀಕಿಸಿದರು.

ಶಾಲಾ ಅಭಿವೃದ್ಧಿ ಸಮಿತಿಗಳ ಅಧಿಕಾರವನ್ನು ಕಡೆಗಣಿಸಿ ಸರ್ಕಾರ ಏಕಪಕ್ಷೀಯ ನಿರ್ಧಾರ ಕೈಗೊಳ್ಳುತ್ತಿದೆ ಎಂದು ಆರೋಪಿಸಿದ ಅವರು, ಹಿಜಾಬ್‌ಗೆ ಅವಕಾಶ ನೀಡಿದರೆ ಭವಿಷ್ಯದಲ್ಲಿ ಶಾಲೆ–ಕಾಲೇಜು ಮತ್ತು ವಸತಿ ನಿಲಯಗಳಲ್ಲಿ ಧಾರ್ಮಿಕ ಪ್ರತ್ಯೇಕತೆ ಹಾಗೂ ಸಂಘರ್ಷಗಳಿಗೆ ಅವಕಾಶ ಸಿಗಬಹುದು ಎಂದು ಎಚ್ಚರಿಸಿದರು.

ಶಿವಧಾರ, ಜನಿವಾರ, ರುದ್ರಾಕ್ಷಿ ಮುಂತಾದ ಹಿಂದೂ ಆಚರಣೆಗಳನ್ನು ಹಿಜಾಬ್ ವಿಚಾರಕ್ಕೆ ಹೋಲಿಸುವುದು ತಪ್ಪು ದಾರಿ ತೋರಿಸುವ ಪ್ರಯತ್ನ ಎಂದು ಹೇಳಿದ ಅವರು, ಅವು ವೈಯಕ್ತಿಕ ನಂಬಿಕೆಗಳ ಭಾಗವಾಗಿದ್ದು ಸಮವಸ್ತ್ರ ನಿಯಮಗಳೊಂದಿಗೆ ಸಂಬಂಧ ಹೊಂದಿಲ್ಲ ಎಂದು ಸ್ಪಷ್ಟಪಡಿಸಿದರು.

ರಾಜ್ಯ ಸರ್ಕಾರ ತನ್ನ ನಿಲುವನ್ನು ಬದಲಿಸದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ಹಮ್ಮಿಕೊಳ್ಳುವುದರ ಜೊತೆಗೆ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಕಾನೂನು ಹೋರಾಟ ಆರಂಭಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಪರಮೇಶ್ ಗೌಡ, ವಿಭಾಗೀಯ ಅಧ್ಯಕ್ಷ ರಾಜೇಶ್ ಡಿ.ಎಂ., ಪ್ರಧಾನ ಕಾರ್ಯದರ್ಶಿ ನವೀನ್ ಕೆ.ಎನ್., ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಾಗರ್, ಜಿಲ್ಲಾ ಕಾರ್ಯದರ್ಶಿ ರಾಜಗೋಪಾಲ್, ಜಿಲ್ಲಾ ಪ್ರಮುಖ ಚೀರಣಕುಪ್ಪೆ ಕುಮಾರ್, ಕುಮಾರಸ್ವಾಮಿ ಸೇರಿದಂತೆ ಹಲವರು ಭಾಗವಹಿಸಿದ್ದರು.

# ‘ಕೃಷಿ ಹೊಂಡಕ್ಕೆ ತಂತಿ ಬೇಲಿ ಅಳವಡಿಸಿಕೊಳ್ಳಿ’

ಕೋಲಾರ

ಕೃಷಿ ಇಲಾಖೆಯಿಂದ ಕೃಷಿ ಭಾಗ್ಯ ಯೋಜನೆಯಡಿ ತಂತಿ ಬೇಲಿ ನಿರ್ಮಾಣಕ್ಕೆ ಸಾಮಾನ್ಯ ರೈತರಿಗೆ ಶೇ.40. ಮತ್ತು ಪ.ಜಾತಿ, ಪ.ಪಂಗಡ ರೈತರಿಗೆ ಶೇ.50 ರಷ್ಟು ಸಹಾಯಧನ ಸರ್ಕಾರದಿಂದ ನೀಡುತ್ತಿದ್ದು, 2023–24 ರಿಂದ 2025–26 ರವರಿಗೆ ಕೃಷಿ ಇಲಾಖೆಯ ಸಹಾಯಧನದಲ್ಲಿ ನಿರ್ಮಿಸಿರುವ ಕೃಷಿ ಹೊಂಡಗಳಿಗೆ ಕೆಲವು ರೈತರು ತಂತಿ ಬೇಲಿ ನಿರ್ಮಿಸಿಕೊಂಡಿರುವುದಿಲ್ಲ ಮತ್ತು ಕೃಷಿ ಹೋಂಡದ ಬಳಿ ಅಪಾಯ ಫಲಕವನ್ನು ಹಾಕಿರುವುದಿಲ್ಲ. ಕೂಡಲೇ ತಂತಿ ಬೇಲಿಯೊಂದಿಗೆ ಅಪಾಯದ ಫಲಕವನ್ನು ಕೃಷಿ ಹೊಂಡಗಳಿಗೆ ಅಳವಡಿಸಬೇಕು ಎಂದು ತಿಳಿಸಿದ್ದಾರೆ.

ಸರ್ಕಾರದಿಂದ ಅನುಷ್ಠಾನ ಮಾಡುತ್ತಿರುವ ಕೃಷಿ ಹೊಂಡಗಳಿಗೆ ತಂತಿ ಬೇಲಿ ನಿರ್ಮಾಣ ಮಾಡುವುದನ್ನು ಕಡ್ಡಾಯಮಾಡಿದ್ದು, ಸರ್ಕಾರದಿಂದ ಸಹಾಯದನ ನೀಡಲಾಗುತ್ತಿದೆ ಹಾಗೂ ಕೃಷಿ ಹೊಂಡಕ್ಕೆ ತಂತಿ ಬೇಲಿ ನಿರ್ಮಾಣ ಮಾಡಿದ ನಂತರವಷ್ಟೇ ಪೂರ್ಣಪ್ರಮಾಣದ ಸಹಾಯಧನ ಪಡೆಯಲು ಅರ್ಹರಾಗಿರುತ್ತಾರೆ. ಈ ಹಿಂದೆ ನಿರ್ಮಾಣ ಮಾಡಿರುವ ಕೃಷಿ ಹೊಂಡಕ್ಕೆ ತಂತಿ ಬೇಲಿ ಅಳವಡಿಸಿ ಜನರ ಹಾಗೂ ಜಾನುವಾರ ಸುರಕ್ಷತೆ ಕಾಪಾಡಬೇಕೆಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಕೃಷಿ ಹೊಂಡಕ್ಕೆ ತಂತಿ ಬೇಲಿ ಅಳವಡಿಸಿಕೊಳ್ಳಿ: ಕೃಷಿ ಹೊಂಡ ದಿಂದ ಹಾಗುವ ಪ್ರಾಣ ಹಾನಿಯನ್ನು ತಡೆಯಲು ಈಗಾಗಲೇ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಕೃಷಿ ಭಾಗ್ಯ ಯೋಜನೆಯ ಎಲ್ಲಾ ರೈತ ಫಲಾನುಭವಿಗಳು ಕಡ್ಡಾಯವಾಗಿ ತಂತಿ ಬೇಲಿ ಅಳವಡಿಸಿಕೊಂಡು ಆಗುವ ದುರಂತಗಳಿಂದ ತಪ್ಪಿಸಿಕೊಳ್ಳಬೇಕೆಂದು ಮನವಿ ಮಾಡಿದ್ದಾರೆ.

ಜಿಲ್ಲೆಯಲ್ಲಿ ಕೃಷಿ ಹೊಂಡಗಳನ್ನು ನರೇಗಾ, ಕೃಷಿ ಭಾಗ್ಯ, ಪಿಎಂಕೆಎಸ್‌ವೈ–01 ರಾಷ್ಟ್ರೀಯ ತೋಟಗಾರಿಕಾ ಮಿಷನ್ ಯೋಜನೆಗಳಲ್ಲಿ ಮತ್ತು ಕೆಲವು ರೈತರು ಸ್ವಂತವಾಗಿ ನಿರ್ಮಿಸಿಕೊಂಡಿದ್ದಾರೆ. ತಂತಿ ಬೇಲಿ ನಿರ್ಮಾಣ ಮಾಡದಿದ್ದಲ್ಲಿ ಆಗುವ ಪ್ರಾಣ ಹಾನಿಗಳಿಗೆ ರೈತ ಫಲಾನುಭವಿಗಳೇ ಸಂಪೂರ್ಣ ಜವಬ್ದಾರರಾಗಿರುತ್ತಾರೆಂದು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಯುವನಿಧಿ ಯೋಜನೆ ಯುವ ಸಮೂಹಕ್ಕೆ ವರ: ಯಲುವಳ್ಳಿ ಎನ್.ರಮೇಶ್

ಚಿಕ್ಕಬಳ್ಳಾಪುರ

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಯುವನಿಧಿ ಯೋಜನೆ ಯುವಕರ ಉಜ್ವಲ ಭವಿಷ್ಯಕ್ಕೆ ನೆರವಾಗುತ್ತಿರುವ ಮಹತ್ವದ ಯೋಜನೆಯಾಗಿದ್ದು, ಜಿಲ್ಲೆಯ ಶೇ.98.13 ರಷ್ಟು ಅರ್ಹ ಉದ್ಯೋಗಾಕಾಂಕ್ಷಿಗಳನ್ನು ಯೋಜನೆಯಡಿ ನೋಂದಾಯಿಸಿ ಸೌಲಭ್ಯ ನೀಡಲಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಯಲುವಳ್ಳಿ ಎನ್. ರಮೇಶ್ ತಿಳಿಸಿದ್ದಾರೆ.

ನಗರದ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜುದಲ್ಲಿ ಜಿಲ್ಲಾ ಉದ್ಯೋಗ ವಿನಿಯಮ ಕಚೇರಿ, ಜಿಲ್ಲಾ ಹಾಗೂ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಮತ್ತು ಕಾಲೇಜಿನ ಸಹಯೋಗದಲ್ಲಿ ಆಯೋಜಿಸಿದ್ದ “ಯುವನಿಧಿ ಅರಿವು ಕಾರ್ಯಾಗಾರ”ವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಯುವನಿಧಿ ಯೋಜನೆಗೆ ಅರ್ಹರಾಗಿರುವ 6200 ಅಭ್ಯರ್ಥಿಗಳ ಪೈಕಿ 6084 ಮಂದಿಯನ್ನು ಈಗಾಗಲೇ ನೋಂದಾಯಿಸಲಾಗಿದ್ದು, ಇದು ಶೇ.98.13 ಸಾಧನೆಯಾಗಿದೆ ಎಂದು ಹೇಳಿದರು. ನೋಂದಾಯಿತರ ಪೈಕಿ 5058 ಅಭ್ಯರ್ಥಿಗಳಿಗೆ ಆರ್ಥಿಕ ಸೌಲಭ್ಯ ಬಿಡುಗಡೆ ಮಾಡಲಾಗಿದ್ದು, ಶೇ.83.14 ಆರ್ಥಿಕ ಸಾಧನೆ ದಾಖಲಿಸಲಾಗಿದೆ ಎಂದರು.

ಇದುವರೆಗೆ ಒಟ್ಟು ರೂ.13,71,48,000 ಮೊತ್ತವನ್ನು ಡಿಬಿಟಿ ಮೂಲಕ ಉದ್ಯೋಗಾಕಾಂಕ್ಷಿಗಳ ಖಾತೆಗಳಿಗೆ ಜಮೆ ಮಾಡಲಾಗಿದೆ ಎಂದು ಮಾಹಿತಿ ನೀಡಿದರು. ಉಳಿದ ಅರ್ಹ ಫಲಾನುಭವಿಗಳಿಗೂ ಶೀಘ್ರದಲ್ಲೇ ಸೌಲಭ್ಯ ವಿತರಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳು ಬಡವರು, ಮಧ್ಯಮ ವರ್ಗದವರು ಹಾಗೂ ಸಂಕಷ್ಟದಲ್ಲಿರುವ ಕುಟುಂಬಗಳಿಗೆ ಬಹಳ ಸಹಕಾರಿಯಾಗಿವೆ ಎಂದು ಹೇಳಿದರು. ಇನ್ನೂ



ಯಾವುದೇ ಅರ್ಹ ಫಲಾನುಭವಿಗಳು ಯೋಜನೆಗಳಿಂದ ವಂಚಿತರಾಗಿದ್ದರೆ ಸಂಬಂಧಪಟ್ಟ ಇಲಾಖೆಗಳನ್ನು ಸಂಪರ್ಕಿಸಿ ನೋಂದಾಯಿಸಿಕೊಳ್ಳುವಂತೆ ಮನವಿ ಮಾಡಿದರು.

ಹಿಂದೆ ದಿವಂಗತ ದೇವರಾಜ ಅರಸು ಅವರು ಜಾರಿಗೆ ತಂದಿದ್ದ ನಿರುದ್ಯೋಗ ಭತ್ಯೆ ಯೋಜನೆಯ ಮುಂದುವರಿದ ರೂಪವೇ ಇಂದಿನ ಯುವನಿಧಿ ಯೋಜನೆ ಎಂದು ವಿವರಿಸಿದರು. ಯೋಜನೆಯಡಿ ಪದವೀಧರರಿಗೆ ರೂ.3000 ಹಾಗೂ ಡಿಪ್ಲೊಮಾ ಪೂರೈಸಿದವರಿಗೆ ರೂ.1500 ನೆರವು ನೀಡಲಾಗುತ್ತಿದೆ ಎಂದರು.

ಅಭ್ಯರ್ಥಿಗಳು ಆನ್‌ಲೈನ್ ಮೂಲಕ ನಿರಂತರವಾಗಿ ನೋಂದಣಿ ಮಾಡಿಕೊಳ್ಳಬಹುದಾಗಿದ್ದು, ಯಾವುದೇ ತೊಂದರೆ ಇದ್ದರೆ ಜಿಲ್ಲಾ ಉದ್ಯೋಗ ವಿನಿಯಮ ಕಚೇರಿಯನ್ನು ಸಂಪರ್ಕಿಸಬಹುದು ಎಂದು ತಿಳಿಸಿದರು.

ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ಓದುತ್ತಿರುವ ಅನೇಕ ವಿದ್ಯಾರ್ಥಿಗಳು ಗ್ರಾಮೀಣ ಹಾಗೂ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಂದ ಬಂದವರಾಗಿದ್ದಾರೆ. ಇವರಲ್ಲಿ ಸುಮಾರು 40ಕ್ಕೂ ಹೆಚ್ಚು ವಿದ್ಯಾರ್ಥಿಗಳು ತಂದೆ–ತಾಯಿಯನ್ನು ಕಳೆದುಕೊಂಡಿದ್ದಾರೆ ಎಂದು ತಿಳಿದು, ಅವರ ಕಾಲೇಜು ಶುಲ್ಕವನ್ನು ವೈಯಕ್ತಿಕವಾಗಿ ಭರಿಸುವುದಾಗಿ ಯಲುವಳ್ಳಿ ಎನ್. ರಮೇಶ್ ಭರವಸೆ ನೀಡಿದರು.

ಜಿಲ್ಲಾ ಉದ್ಯೋಗಾಧಿಕಾರಿ ಪ್ರಸಾದ್ ಎಂ ಮಾತನಾಡಿ, ಕೌಶಲ್ಯಾಭಿವೃದ್ಧಿ ಇಲಾಖೆಯ ವಿವಿಧ ತರಬೇತಿ ಕಾರ್ಯಕ್ರಮಗಳೊಂದಿಗೆ ಯುವನಿಧಿ ಹಣವನ್ನು ಉದ್ಯೋಗ ಅರ್ಜಿ ಸಲ್ಲಿಕೆ ಮತ್ತು ಸಂದರ್ಶನಗಳಿಗೆ ಬಳಸಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

ಚಿಕ್ಕಬಳ್ಳಾಪುರ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಎನ್. ಜಯರಾಮ್ ಮಾತನಾಡಿ, ಸ್ವಾಮಿ ವಿವೇಕಾನಂದ ಜಯಂತಿಯಂದು 2024ರಲ್ಲಿ ಯುವನಿಧಿ ಯೋಜನೆ ಆರಂಭಿಸಲಾಯಿತು ಎಂದು ತಿಳಿಸಿದರು. ವಿದ್ಯಾವಂತ ಯುವಕರು ಉದ್ಯೋಗ ಪಡೆಯಲು ಉತ್ತೇಜನ ನೀಡುವುದೇ ಯೋಜನೆಯ ಮುಖ್ಯ ಉದ್ದೇಶ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಯುವನಿಧಿ ಯೋಜನೆ, ಉದ್ಯೋಗ ಮೇಳ, ಉದ್ಯೋಗ ಪತ್ರ, ಸ್ಟಡಿ ಸರ್ಕಲ್ ಹಾಗೂ ಯುವನಿಧಿ ಪ್ಲಸ್ ಕುರಿತು ಬಿತ್ತಿಪತ್ರಗಳು ಮತ್ತು ಕರಪತ್ರಗಳನ್ನು ವಿದ್ಯಾರ್ಥಿಗಳಿಗೆ ವಿತರಿಸಿ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಪ್ರಾಂಶುಪಾಲ ಚಂದ್ರಯ್ಯ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರಾದ ನಾರಾಯಣಸ್ವಾಮಿ, ಲಕ್ಷ್ಮಣ್, ವೆಂಕಟಲಕ್ಷ್ಮಮ್ಮ, ಬಾಲಕೃಷ್ಣ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಭಾರೀ ಮಳೇಗೆ 104 ಸಾವು: 21 ಜನರಿಗೆ ಗಾಯ

ಲಕ್ನೋ

ಉತ್ತರ ಪ್ರದೇಶದಾದ್ಯಂತ ಭಾರೀ ಮಳೆ ಮತ್ತು ಬಿರುಗಾಳಿಗೆ ಈವರೆಗೆ 104 ಜನರು ಸಾವನ್ನಪ್ಪಿದ್ದಾರೆ. ಪ್ರಯಾಗ್‌ರಾಜ್‌ನಲ್ಲೇ ಅತ್ಯಧಿಕ 21 ಜನ ಬಲಿಯಾಗಿದ್ದಾರೆ.

ಮಳೆ ಹೊಡೆತಕ್ಕೆ 53 ಜನರಿಗೆ ಗಾಯಗಳಾಗಿವೆ. 98 ಮನೆಗಳು ಹಾನಿಗೊಂಡಿವೆ. 130 ಜಾನುವಾರುಗಳು ಸಾವಿಗೀಡಾಗಿವೆ. ಮರಗಳು ಮತ್ತು ವಿದ್ಯುತ್ ಕಂಬಗಳು ಧರೆಗುರುಳಿವೆ. ರಾಜ್ಯಾದ್ಯಂತ ಹಲವಾರು ಮನೆಗಳು ಹಾನಿಗೊಳಗಾಗಿವೆ. ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಸಾವಿಗೆ ಸಂತಾಪ ಸೂಚಿಸಿದ್ದು, 24 ಗಂಟೆಗಳ ಒಳಗೆ ಆರ್ಥಿಕ ನೆರವು ನೀಡಲು ಆದೇಶಿಸಿದ್ದಾರೆ.

ಭದೋಹಿಯಲ್ಲಿ 18, ಮಿರ್ಜಾಪುರದಲ್ಲಿ 15, ಫತೇಪುರ್‌ನಲ್ಲಿ 10, ಉನ್ನಾವ್ ಮತ್ತು ಬದೌನ್‌ನಲ್ಲಿ ತಲಾ ಆರು, ಪ್ರತಾಪ್‌ಗಢ ಮತ್ತು ಬರೇಲಿಯಲ್ಲಿ ತಲಾ ನಾಲ್ಕು ಮತ್ತು ಸೀತಾಪುರ, ರಾಯ್‌ಬರೇಲಿ ಮತ್ತು ಚಂದೌಲಿಯಲ್ಲಿ ತಲಾ ಇಬ್ಬರು ಸಾವನ್ನಪ್ಪಿದ್ದಾರೆ. ಕಾನ್ಪುರ್ ದೇಹತ್, ಹರ್ದೋಯಿ ಮತ್ತು ಸಂಭಾಲ್‌ನಿಂದಲೂ ಎರಡು ಸಾವುಗಳು ವರದಿಯಾಗಿವೆ.

# ನೊಳಂಬ ಸಮುದಾಯದ ಚರಿತ್ರೆ ಅಧ್ಯಯನ ಅಗತ್ಯ

ತುಮಕೂರು

ನೊಳಂಬ ಸಮುದಾಯದ ಚರಿತ್ರೆ ಮತ್ತು ಸಂಸ್ಕೃತಿಯ ಬಗ್ಗೆ ಹೆಚ್ಚಿನ ಅಧ್ಯಯನ ನಡೆಯುವ ಅಗತ್ಯವಿದೆ ಎಂದು ತಿಪಟೂರು ಶಾಸಕ ಕೆ. ಷಡಕ್ಷರಿ ಅಭಿಪ್ರಾಯ ವ್ಯಕ್ತಪಡಿಸಿದರು.

ತುಮಕೂರು ವಿಶ್ವವಿದ್ಯಾನಿಲಯದ ಡಾ. ಶ್ರೀ ಶಿವಕುಮಾರ ಮಹಾಸ್ವಾಮೀಜಿ ಸಭಾಂಗಣದಲ್ಲಿ ತುಮಕೂರು ವಿವಿ ಮತ್ತು ಬೆಂಗಳೂರಿನ ನೊಳಂಬ ಲಿಂಗಾಯತ ಸಂಘದ ಜಂಟಿ ಆಶ್ರಯದಲ್ಲಿ ಏರ್ಪಡಿಸಿದ್ದ ನೊಳಂಬ ಸಂಸ್ಕೃತಿ ಅಧ್ಯಯನ ಪೀಠದ ಉದ್ಘಾಟನಾ ಕಾರ್ಯಕ್ರಮ ಹಾಗೂ ನೊಳಂಬ ಸಂಸ್ಕೃತಿ ಸಂಪದ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನೊಳಂಬರ ಚರಿತ್ರೆ, ಸಂಸ್ಕೃತಿಯ ಹಾಗೂ ಸಮುದಾಯದ ಇತಿಹಾಸದ ಬಗ್ಗೆ ಸಂಪನ್ಮೂಲ ವ್ಯಕ್ತಿಗಳ ಮೂಲಕ ಜನರಿಗೆ ತಲುಪಿಸುವ ಕಾರ್ಯ ಅತ್ಯಗತ್ಯ ಎಂದ ಅವರು, ನೊಳಂಬರ ಇತಿಹಾಸದ ಬಗ್ಗೆ ಇಂದಿನ ಪೀಳಿಗೆಗೆ ಮಾತ್ರವಲ್ಲದೆ ಸ್ವತಃ ಸಮುದಾಯದವರಿಗೂ ಹೆಚ್ಚಿನ



ಅರಿವಿಲ್ಲದಿರುವುದು ವಿಷಾದನೀಯ ಸಂಗತಿ ಎಂದರು.

ಈ ಸಮುದಾಯವು ಕೇವಲ ಆಡಳಿತವಷ್ಟೇ ಅಲ್ಲದೆ, ಸಾಮಾಜಿಕ ಕ್ಷೇತ್ರಕ್ಕೂ ತನ್ನದೇ ಆದ ಕೊಡುಗೆ ನೀಡಿದೆ. ಶಾಸಕರಾದ ನಂತರವಷ್ಟೇ ತಮಗೆ ಜಾತಿಗಳ ಬಗ್ಗೆ ಹೆಚ್ಚಿನ ಅರಿವು ಉಂಟಾಯಿತು ಎಂದು ಅವರು ಮಾರ್ಮಿಕವಾಗಿ ನುಡಿದರು.

ವಿಚಾರ ಸಂಕಿರಣದ ಮೂಲಕ ಹೊಸ ಸಂಶೋಧನೆಗಳು ಮತ್ತು ಆವಿಷ್ಕಾರಗಳು ಬೆಳಕಿಗೆ ಬರಬೇಕು. ಸಂಶೋಧನೆಯ ಫಲಿತಾಂಶಗಳನ್ನು ಮುಂದಿನ ಪೀಳಿಗೆಗೆ ಅರಿವು ಮೂಡಿಸಲು ಬಳಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ನೊಳಂಬ ಸಮುದಾಯವು ಸುಮಾರು 30 ಲಕ್ಷಕ್ಕೂ ಹೆಚ್ಚು ಜನಸಂಖ್ಯೆಯನ್ನು ಹೊಂದಿದ್ದು, ಒಂದು ಬಲಿಷ್ಠ ಸಮುದಾಯವಾಗಿದೆ. ಈ ಸಮುದಾಯದಿಂದ ಈ ಹಿಂದೆ ಟಿ.ಎಂ. ಮಂಜುನಾಥ್ ಅವರು ಪ್ರಥಮವಾಗಿ ಮಂತ್ರಿಯಾಗಿದ್ದರು. ನಂತರ ಮಾಧುಸ್ವಾಮಿ ಅವರು ಮಂತ್ರಿಯಾಗಿ ಸೇವೆ ಸಲ್ಲಿಸಿದ್ದಾರೆ. ರಾಜಕೀಯದಲ್ಲಿ ಸೋಲು–ಗೆಲುವು ಸಾಮಾನ್ಯವಾಗಿದ್ದರೂ, ಸಮಾಜಕ್ಕೆ ಕೊಡುಗೆ ನೀಡುವುದು ಮುಖ್ಯ ಎಂದರು.

ತುಮಕೂರು ವಿಶ್ವವಿದ್ಯಾನಿಲಯದ ಉತ್ತಮ ಪರಿಸರದಲ್ಲಿ ಇಂತಹ ಅರ್ಥಪೂರ್ಣ ವಿಚಾರಗಳು ಚರ್ಚೆಯಾಗುತ್ತಿರುವುದು ಶ್ಲಾಘನೀಯ ಎಂದು ಹರ್ಷ ವ್ಯಕ್ತಪಡಿಸಿದ ಅವರು, ನೊಳಂಬ ಸಂಸ್ಕೃತಿ ಅಧ್ಯಯನ ಪೀಠಕ್ಕೆ 5 ಲಕ್ಷ ರೂ ನೀಡುವುದಾಗಿ ಭರವಸೆ ನೀಡಿದರು.

ಅಧ್ಯಯನ ಪೀಠದ ಪ್ರೇರಣಾ ಲಾಂಛನ ಅನಾವರಣಗೊಳಿಸಿದ ಮಾಜಿ ಸಚಿವ ಜೆ.ಸಿ. ಮಾಧುಸ್ವಾಮಿ ಮಾತನಾಡಿ, ನಮ್ಮ ಸಂಸ್ಕೃತಿ ಮತ್ತು ಇತಿಹಾಸವನ್ನು ಮರೆತು ಬದುಕುತ್ತಿದ್ದೇವೆ. ಇತಿಹಾಸ ಗೊತ್ತಿಲ್ಲದವನು ವಿಜ್ಞಾನ ಓದಲು ಸಾಧ್ಯವಿಲ್ಲ. ಹಾಗಾಗಿ, ನಮ್ಮ ಮಕ್ಕಳಿಗೆ ನಾವು ಯಾರು ಮತ್ತು ನಮ್ಮ ಇತಿಹಾಸವೇನು ಎಂಬ ಅರಿವು ಮೂಡಿಸುವ ನಿಟ್ಟಿನಲ್ಲಿ ನೊಳಂಬ ಅಧ್ಯಯನ ಪೀಠವು ಮಹತ್ವದ ಪಾತ್ರ ವಹಿಸಲಿದೆ ಎಂದರು.

ಈ ಅಧ್ಯಯನ ಪೀಠವು ವಿಶ್ವವಿದ್ಯಾನಿಲಯ ಸ್ವಯಂ ಪ್ರೇರಿತವಾಗಿ ಕೈಗೊಂಡ ಕಾರ್ಯವಲ್ಲ.

ಬದಲಿಗೆ, ಪರಶಿವಮೂರ್ತಿ ಹಾಗೂ ಯೋಗೇಶ್ವರಪ್ಪ ಅವರಂತಹ ಶಿಕ್ಷಣ ತಜ್ಞರ ನಿರಂತರ ಕಾಳಜಿಯ ಫಲವಾಗಿದೆ. ನಾನು ಸಚಿವನಾಗಿದ್ದ ಅವಧಿಯಲ್ಲಿ ಈ ಇಬ್ಬರು ಗಣ್ಯರು ಪೀಠದ ಅವಶ್ಯಕತೆಯ ಬಗ್ಗೆ ಮನವರಿಕೆ ಮಾಡಿಕೊಟ್ಟಿದ್ದರು ಎಂದು ಹೇಳಿದರು.

ಸಮಾಜದಲ್ಲಿ ಅಸೂಯೆ ಹೆಚ್ಚಾಗುತ್ತಿದೆ. ಬೇರೆಯವರ ಕಾಲು ಎಳೆಯುವ ಬದಲು, ಸಾಧನೆ ಮಾಡುವವರಿಗೆ ಬೆನ್ನುತಟ್ಟುವ ಸಂಸ್ಕೃತಿ ಬೆಳೆಯಬೇಕು. ನೊಳಂಬ ಸಂಸ್ಥಾನದ ಇತಿಹಾಸವನ್ನು ಬರಿ ಕಥೆಯಾಗಿ ಕೇಳುವ ಬದಲು, ಇಂದಿನ ಸ್ಥಿತಿಗತಿಗಳಿಗೆ ಅನುಗುಣವಾಗಿ ಅದರ ಸಂಶೋಧನೆ ನಡೆಯಬೇಕು ಎಂದರು.

# ಮಾಸಿಕ ಸಭೆ

ತಿಪಟೂರು

ನಗರದ ನಿವೃತ್ತ ನೌಕರ ಸಂಘದ ಕಚೇರಿಯಲ್ಲಿ ನಡೆದ ತಾಲ್ಲೂಕಿನ ನಿವೃತ್ತ ನೌಕರರ ಸಂಘದ ಮಾಸಿಕ ಸಭೆಯಲ್ಲಿ ಬಸವಣ್ಣ ವಿಚಾರಧಾರೆ ಕುರಿತು ಉಪನ್ಯಾಸ ಕಾರ್ಯಕ್ರಮ ನಡೆಯಿತು.

ಕೇಂದ್ರ ಕನ್ನಡ ಸಾಹಿತ್ಯ ವೇದಿಕೆಯ ಸಂಸ್ಥಾಪಕ ಅಧ್ಯಕ್ಷ ಕೊಟ್ರೇಶ್ ಎಸ್. ಉಪ್ಪಾರ್ ಮಾತನಾಡಿ ಬಸವಣ್ಣ ನಿರ್ಧಿಷ್ಟ ಜಾತಿಗೆ ಸೀಮಿತಗೊಳಿಸಿ ದೇವರೆಂದು ಪೂಜಿಸುವುದು ಅವರ ಮೂಲ ತತ್ವಗಳಿಗೆ ವಿರುದ್ಧ ಎಂದು ವಿಷಾದ ವ್ಯಕ್ತಪಡಿಸಿದರು.

ಜಾತಿ, ವರ್ಣ, ಲಿಂಗ ಭೇದಗಳನ್ನು ತಿರಸ್ಕರಿಸಿ, ಮೌಢ್ಯಗಳನ್ನು ವಿರೋಧಿಸಿ ಸಾಮಾಜಿಕ ಸಮಾನತೆಯನ್ನು ಸಾರಿದ ಮಹಾನ್ ಮಾನವತಾವಾದಿಯನ್ನು ಸ್ಥಾವರ ರೂಪದಲ್ಲಿ ಕಾಣುವುದು ವಿಪರ್ಯಾಸ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಘದ ಅಧ್ಯಕ್ಷ ಕೆ.ಎಮ್. ರಾಜಣ್ಣ ಬಸವಣ್ಣರು ಸಾಮಾಜಿಕ ಬದಲಾವಣೆಯ ಹರಿಕಾರರಾಗಿದ್ದು, ಅವರ ತತ್ವಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿಶ್ವ ಕಾರ್ಮಿಕ ದಿನಾಚರಣೆಯ ಅಂಗವಾಗಿ ಪೌರ ಕಾರ್ಮಿಕ ನಾಗರಾಜು ಗೌರವಿಸಲಾಯಿತು.

ಉಪನ್ಯಾಸದಲ್ಲಿ ಹೆಚ್.ಜಿ.ನರಸಿಂಹಮೂರ್ತಿ, ಪಿ.ಆರ್. ಗುರುಸ್ವಾಮಿ, ಹೆಚ್.ಎಸ್. ಮಂಜಪ್ಪ ಡಿ.ಎಸ್. ಮರುಳಪ್ಪ, ಕೇಂದ್ರ ಸಾಹಿತ್ಯ ವೇದಿಕೆಯ ತಾ ಅಧ್ಯಕ್ಷೆ ಲತಾಮಣಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ನಗರದ ನಿವೃತ್ತ ನೌಕರ ಸಂಘದ ಕಚೇರಿಯಲ್ಲಿ ಬಸವಣ್ಣ ವಿಚಾರಧಾರೆ ಕುರಿತು ಉಪನ್ಯಾಸ ಕಾರ್ಯಕ್ರಮ.

# ‘ನೀಟ್ ಪರೀಕ್ಷೆ ವೈಫಲ್ಯಕ್ಕೆ ಕೇಂದ್ರ ಸರ್ಕಾರವೇ ಹೊಣೆ’

ತುಮಕೂರು

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ತಡೆಯುವಲ್ಲಿ, ಪರೀಕ್ಷಾ ಪಾವಿತ್ರತೆ ಕಾಪಾಡುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ ಎಂದು ಯುವ ಕಾಂಗ್ರೆಸ್ ಮುಖಂಡರು ಗುರುವಾರ ನಗರದಲ್ಲಿ ಪ್ರತಿಭಟನೆ ನಡೆಸಿ ಈ ವೈಫಲ್ಯಕ್ಕೆ ಕೇಂದ್ರ ಸರ್ಕಾರವೇ ಹೊಣೆ ಎಂದು ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಈ ಬಗ್ಗೆ ಸಂಸದರು ಸಂಸತ್ತಿನಲ್ಲಿ ಧ್ವನಿ ಮಾಡಬೇಕು ಎಂದು ಒತ್ತಾಯಿಸಿ ತುಮಕೂರು ಸಂಸದರ ಕಚೇರಿಗೆ ಮುತ್ತಿಗೆ ಹಾಕಲು ಹೊರಟ ಕಾರ್ಯಕರ್ತರನ್ನು ಪೊಲೀಸರು ತಡೆದು ವಶಕ್ಕೆ ಪಡೆದರು.

ಬಿಜಿಎಸ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದ ಯುವ ಕಾಂಗ್ರೆಸ್ ಕಾರ್ಯಕರ್ತರು ನೀಟ್ ಪರೀಕ್ಷೆಯನ್ನು ಸಮರ್ಪಕವಾಗಿ ನಡೆಸುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ. ಲಕ್ಷಾಂತರ ವಿದ್ಯಾರ್ಥಿಗಳ ಕನಸು, ಭವಿಷ್ಯ ಕೇಂದ್ರ ಸರ್ಕಾರ ಹಾಳು ಮಾಡಿದೆ ಎಂದು ಕಾರ್ಯಕರ್ತರು ಆರೋಪಿಸಿದರು. ಬಿತ್ತಿ ಪತ್ರ ಹಿಡಿದು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಇಲಾಹಿ ಸಿಕಂದರ್ ಮಾತನಾಡಿ, ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ನೀಟ್ ಪರೀಕ್ಷೆ ಮಾತ್ರವಲ್ಲ, ಹಲವು ಪರೀಕ್ಷೆಗಳ ಪ್ರಶ್ನೆ ಪತ್ರಿಕೆ ಲೀಕ್ ಮಾಡುವ ದೊಡ್ಡ ದಂಧೆಯೇ ನಡೆಯುತ್ತಿದೆ.

ಸರ್ಕಾರದ ವಿವಿಧ ಹುದ್ದೆಗಳ ನೇಮಕಾತಿ ಪರೀಕ್ಷೆಗಳಲ್ಲೂ ಅಕ್ರಮಗಳು ನಡೆದ ಆರೋಪಗಳಿವೆ. ಮೋದಿ ಸರ್ಕಾರ ಬಡವರ ಪರವಾಗಿಲ್ಲ, ಬಂಡವಾಳಶಾಹಿಗಳ ಪರವಿದೆ ಎಂದು ಟೀಕೆ ಮಾಡಿದರು.

ದೇಶದಲ್ಲಿ ಸುಮಾರು 24 ಲಕ್ಷ, ರಾಜ್ಯದಲ್ಲಿ 1.4 ಲಕ್ಷ ವಿದ್ಯಾರ್ಥಿಗಳು ನೀಟ್ ಮೂಲಕ ತಮ್ಮ ವೈದ್ಯಕೀಯ ಪದವಿಯ ಕನಸು ಕಂಡಿದ್ದರು. ಅಷ್ಟೂ ಜನರಿಗೆ ಮೋದಿ ಸರ್ಕಾರ ಅನ್ಯಾಯ ಮಾಡಿದೆ. ನೀಟ್ ಪ್ರಶ್ನೆ ಪತ್ರಿಕೆ ಬಹಿರಂಗ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಲಾಗಿದೆ. ಪ್ರಾಮಾಣಿಕ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಬೇಕು. ಇನ್ನು ಮುಂದೆ ನೀಟ್ ಮತ್ತಿತರ ಪರೀಕ್ಷೆಗಳು ಪ್ರಾಮಾಣಿಕವಾಗಿ ನಡೆಸಬೇಕು ಎಂದು ಇಲಾಹಿ ಸಿಕಂದರ್ ಒತ್ತಾಯಿಸಿದರು.

ಭಾರತ ಸಾರಥಿ
20/05/2026
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಡಿಜಿಟಲೀಕರಣಕ್ಕೆ ಅಪರ ಜಿಲ್ಲಾಧಿಕಾರಿ ಚಾಲನೆ

ಕೋಲಾರ

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ 'ಜ್ಞಾನ ಭಾರತಮ್' ಮಿಷನ್ ಯೋಜನೆಯಡಿ ಜಿಲ್ಲೆಯಾದ್ಯಂತ ಇರುವ ಅಮೂಲ್ಯ ಹಸ್ತಪ್ರತಿಗಳನ್ನು ಗುರುತಿಸಿ, ಸಂರಕ್ಷಿಸಿ ಹಾಗೂ ಡಿಜಿಟಲೀಕರಣಗೊಳಿಸುವ ಕಾರ್ಯಕ್ಕೆ ಜಿಲ್ಲಾಡಳಿತ ಚಾಲನೆ ನೀಡಿದೆ. ಇಂದು ಜಿಲ್ಲಾಧಿಕಾರಿಗಳ ಕಚೇರಿಯ ಕೇಸ್ವಾನ್ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅಪರ ಜಿಲ್ಲಾಧಿಕಾರಿ ಎಸ್.ಎಂ. ಮಂಗಳ ಅವರು ಮಾತನಾಡಿದರು.

ಜಿಲ್ಲೆಯ ವಿವಿಧ ಮಠಗಳು, ಮಂದಿರಗಳು, ಮಸೀದಿಗಳು ಹಾಗೂ ಹಳೆಯ ಮನೆಗಳಲ್ಲಿ ಇರುವ ತಾಳೆಗರಿ ಮತ್ತು ಕಾಗದದ ರೂಪದ ಹಸ್ತಪ್ರತಿಗಳನ್ನು ಸಮೀಕ್ಷೆ ನಡೆಸಿ ಪಟ್ಟಿ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. ವಿಶೇಷವಾಗಿ 100 ವರ್ಷಗಳಿಗಿಂತ ಹಳೆಯದಾದ ಹಸ್ತಪ್ರತಿಗಳನ್ನು ಆದ್ಯತೆಯ ಮೇರೆಗೆ ಸಂಗ್ರಹಿಸಲು ಕ್ರಮ ಕೈಗೊಳ್ಳಬೇಕು ಎಂದು ಅವರು ಸೂಚಿಸಿದರು.




ಸಾರ್ವಜನಿಕರಲ್ಲಿ ಇರುವ ಹಸ್ತಪ್ರತಿಗಳನ್ನು ಸರ್ಕಾರ ಕಸಿದುಕೊಳ್ಳುತ್ತದೆ ಎಂಬ ಆತಂಕ ಬೇಡ ಎಂದು ಸ್ಪಷ್ಟಪಡಿಸಿದ ಅಪರ ಜಿಲ್ಲಾಧಿಕಾರಿಗಳು, ಮಾಲೀಕರ ಅನುಮತಿಯೊಂದಿಗೆ ಮಾತ್ರ ಅವುಗಳನ್ನು ಡಿಜಿಟಲೀಕರಣಗೊಳಿಸಿ ಮೂಲ ಪ್ರತಿಯನ್ನು ಅವರ ಬಳಿಯೇ ಉಳಿಸಲಾಗುವುದು ಎಂದು ತಿಳಿಸಿದರು.

ಜಿಲ್ಲೆಯ ಆರು ತಾಲ್ಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಶಿಕ್ಷಕರನ್ನು ಈ ಸಮೀಕ್ಷಾ ಕಾರ್ಯದಲ್ಲಿ ಬಳಸಿಕೊಳ್ಳಲು ನಿರ್ಧರಿಸಲಾಗಿದೆ.

ಶಿಕ್ಷಕರು ಸ್ಥಳೀಯ ಮಟ್ಟದಲ್ಲಿ ಹೆಚ್ಚು ಸಂಪರ್ಕ ಹೊಂದಿರುವುದರಿಂದ ಹಸ್ತಪ್ರತಿಗಳ ಪತ್ತೆ ಹಚ್ಚುವುದು ಸುಲಭವಾಗಲಿದೆ ಎಂದು ಸಭೆಯಲ್ಲಿ ಅಭಿಪ್ರಾಯಪಡಲಾಯಿತು. ಇದಲ್ಲದೆ, ಇತಿಹಾಸ ಸಂಶೋಧಕರು ಮತ್ತು ಸ್ಥಳೀಯ ವಿದ್ವಾಂಸರ ನೆರವನ್ನೂ ಪಡೆಯಲಾಗುವುದು ಎಂದರು.

ಉಳಿದಂತೆ ಹಸ್ತಪ್ರತಿಗಳ ಮಾಹಿತಿಗಾಗಿ ವಿಶೇಷ ಪೋಸ್ಟರ್‌ಗಳು ಮತ್ತು ಡಿಜಿಟಲ್ ಬ್ರೋಷರ್‌ಗಳನ್ನು ಸಿದ್ಧಪಡಿಸಿ ಪ್ರಚಾರ ಮಾಡುವುದು.ಗ್ರಾಮ ಪಂಚಾಯತಿ ಮಟ್ಟದಲ್ಲಿ ಜಾಗೃತಿ ಮೂಡಿಸುವುದು. ಸಂಪರ್ಕಕ್ಕಾಗಿ ಜಿಲ್ಲಾ ಸಮನ್ವಯಾಧಿಕಾರಿಗಳ ಮೊಬೈಲ್ ಸಂಖ್ಯೆಗಳನ್ನು ಸಾರ್ವಜನಿಕರಿಗೆ ಒದಗಿಸುವುದು. ಮೇ ಅಂತ್ಯದೊಳಗೆ ಪ್ರಾಥಮಿಕ ಹಂತದ ಸಮೀಕ್ಷಾ ಕಾರ್ಯವನ್ನು ಪೂರ್ಣಗೊಳಿಸುವುದು ಸೇರಿದಂತೆ ಹಲವು ವಿಷಯಗಳನ್ನು ಚರ್ಚಿಸಲಾಯಿತು.

ಸಭೆಯಲ್ಲಿ ಜಿಲ್ಲಾಪಂಚಾಯತ್‌ನ ವೆಂಕಟಾಚಲಪತಿ, ಜ್ಞಾನಭಾರತಮ್ ಸಂಯೋಜಕರು ಹೆಚ್ ಎಸ್. ಶ್ಯಾಮಾಚಾರ, ಇತಿಹಾಸ ತಜ್ಞರು ಡಾ. ಅರಿವು ಶಿವಪ್ಪ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ತುಕರಾಮ ಎನ್ ಪವಾರ್, ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ವಿಷಯ ತಜ್ಞ ವಿ.ಶಿವಶಂಕರ ಶಾಸ್ತ್ರಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# 'ಅನುದಾನ ಪೂರ್ಣ ಪ್ರಮಾಣದಲ್ಲಿ ಬಳಸಿ'

ರಾಮನಗರ

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಅಭಿವೃದ್ಧಿಗಾಗಿ ಇಲಾಖೆಗಳ ಅನುದಾನದಲ್ಲಿ ಮೀಸಲಿರಿಸಿರುವ ಅನುದಾನವನ್ನು ಪೂರ್ಣಪ್ರಮಾಣದಲ್ಲಿ ಬಳಸಿ, ನಿಗಧಿತ ಅವಧಿಯಲ್ಲಿ ಪ್ರಗತಿ ಸಾಧಿಸಬೇಕು ಎಂದು ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷರಾದ ಡಾ. ಮೂರ್ತಿ ಎಲ್ ಅವರು ಹೇಳಿದರು.

ಅವರು ಬುಧವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಎಸ್.ಸಿ.ಪಿ. ಹಾಗೂ ಟಿ.ಎಸ್.ಪಿ ಯೋಜನೆಯಡಿ ನಗರಸಭೆ, ಪುರಸಭೆ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಸೇರಿದಂತೆ ಇತರೆ ಇಲಾಖೆಗಳಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಕಾಲೋನಿಗಳ ಅಭಿವೃದ್ಧಿಗಾಗಿ ಕೈಗೊಳ್ಳಲಾಗುವ ಕಾಮಗಾರಿಗಳಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು ಕಾಮಗಾರಿ ನಡೆಸಿದ ಇಲಾಖೆಯ ಕಡ್ಡಾಯವಾಗಿ ಕಾಮಗಾರಿಗಳ ವಿವರಗಳನ್ನು ಪ್ರದರ್ಶಿಸುವ ನಾಮಫಲಕಗಳನ್ನು ಅಳವಡಿಸಬೇಕು ಎಂದು ಸೂಚಿಸಿದರು.

ಜಿಲ್ಲೆಯ ನಗರ ಮತ್ತು ಪಟ್ಟಣಗಳ ಸ್ವಚ್ಛತೆ ಕಾಪಾಡುವ ಪೌರ ಕಾರ್ಮಿಕರ ಆರೋಗ್ಯದ ಹಿತದೃಷ್ಟಿಯಿಂದ ಕಡ್ಡಾಯವಾಗಿ ಆರೋಗ್ಯ ವಿಮೆ, ಜೀವವಿಮೆ ಹಾಗೂ ಗುಂಪು ವಿಮೆ ಮಾಡಿಸುವಂತೆ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಯೋಜನೆಗಳಡಿ ಸೌಲಭ್ಯ ಪಡೆಯಲು ಸಲ್ಲಿಕೆಯಾಗುವ ಅರ್ಜಿಗಳನ್ನು ಗಂಭೀರವಾಗಿ ಪರಿಗಣಿಸಿ ನಿಗಧಿತ ಅವಧಿಯಲ್ಲಿ ವಿಲೇವಾರಿ ಮಾಡಬೇಕು. ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿಯಲ್ಲಿ ಎಸ್.ಸಿ. ಹಾಗೂ ಎಸ್.ಟಿ ವಿದ್ಯಾರ್ಥಿಗಳು ಉತ್ತಮ ಅಂಕ ಪಡೆಯಲು ಅನುವಾಗುವಂತೆ ಹೆಚ್ಚುವರಿ ತರಗತಿಗಳನ್ನು ನಡೆಸಲು ಕ್ರಮ ವಹಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಿಗೆ ಸೂಚಿಸಿದರು.

ಜಾತಿ ವ್ಯವಸ್ಥೆ ಇಂದಿಗೂ ಜೀವಂತವಿರುವ ಸೂಕ್ಷ್ಮ ಗ್ರಾಮಗಳಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಜನರಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಸ್ಮಶಾನದ ಸಮಸ್ಯೆಗಳನ್ನು ಆಲಿಸಿ ಅದನ್ನು ಪರಿಹರಿಸಬೇಕು. ಜಿಲ್ಲಾಡಳಿತದ ವತಿಯಿಂದ ಎಲ್ಲೆಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಜನರು 25–30 ಮನೆಗಳಲ್ಲಿ ವಾಸಿಸುತ್ತಿರುವರೋ ಅಂತಹ ಅಂತಹ ಗ್ರಾಮಗಳಲ್ಲಿ ಸ್ಮಶಾನದ ವ್ಯವಸ್ಥೆಯನ್ನು ಮಾಡಬೇಕು ಎಂದು ಹೇಳಿದರು.

ಸಭೆಯಲ್ಲಿ ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಸದಸ್ಯರುಗಳಾದ ಎಂ. ಕುಂಬಯ್ಯ, ಸುನಿಲ್ ಎಂ ಉಕ್ಕಲಿ, ಎನ್. ದಿವಾಕರ್, ಗೀತಾ ಥಾವಂಶಿ ಮತ್ತು ಕಾರ್ಯದರ್ಶಿಗಳಾದ ಡಾ. ಎಚ್.ಎಸ್ ಶಿವರಾಮು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅನ್ಮೋಲ್ ಜೈನ್, ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ, ಅಪರ ಪೊಲೀಸ್ ವರಿಷ್ಠಾಧಿಕಾರಿ ರಾಮಚಂದ್ರಯ್ಯ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಹಾಗಣಪತಿ ದೇವಾಲಯದಲ್ಲಿ ಮಹಾಕುಂಭಾಭಿಷೇಕ ಮಹೋತ್ಸವ

ಮಾಲೂರು

ನಗರದ ಮುಖ್ಯ ರಸ್ತೆಯ ಬೆಸ್ಕಾಂ ಹಾಗೂ ಕೆಪಿಟಿಸಿಎಲ್ ಆವರಣದಲ್ಲಿ ನಿರ್ಮಿಸಲಾಗಿರುವ ಶ್ರೀ ಮಹಾಗಣಪತಿ ದೇವಾಲಯದಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀ ಅದಿತ್ಯಾದಿ ನವಗ್ರಹಗಳ ಪ್ರತಿಷ್ಠಾಪನೆ, ವಿಮಾನ ಗೋಪುರ ಪ್ರತಿಷ್ಠಾಪನೆ, ಮಹಾಕುಂಭಾಭಿಷೇಕ ಮಹೋತ್ಸವ ಮೋಹನ ಭಟ್ಟರ ಅರ್ಚಕತ್ವದಲ್ಲಿ ವಿವಿಧ ಪೂಜಾ ಕೈಕಾರ್ಯಗಳೊಂದಿಗೆ ಶ್ರದ್ಧಾ ಭಕ್ತಿಯಿಂದ ನೆರವೇರಿತು.

ನಗರದ ಮುಖ್ಯರಸ್ತೆಯ ಕೆಪಿಟಿಸಿಎಲ್ ಹಾಗೂ ಬೆಸ್ಕಾಂ ಆವರಣದಲ್ಲಿ ನಿರ್ಮಿಸಿರುವ ಗಣಪತಿ ದೇವಾಲಯದಲ್ಲಿ ಭಕ್ತರ ಸಹಕಾರದಿಂದ ನವಗ್ರಹಗಳು ಹಾಗೂ ವಿಮಾನ ಗೋಪುರವನ್ನು ನಿರ್ಮಿಸಲಾಗಿದ್ದು ನವಗ್ರಹಗಳು ಹಾಗೂ ವಿಮಾನ ಗೋಪುರದ ಪ್ರತಿಷ್ಠಾಪನೆ ಕಾರ್ಯಕ್ರಮವು ಬುಧವಾರದಿಂದ ವಿವಿಧ ರೀತಿಯ ಪೂಜಾ ಕೈಕರೆಗಳು ಆರಂಭವಾಗಿ ಗುರುವಾರ ಹೋಮ ಹವನ ನವಗ್ರಹಗಳ ಪ್ರತಿಷ್ಠಾಪನೆ ಹಾಗೂ ವಿಮಾನ ಗೋಪುರದ ಕುಂಭಾಭಿಷೇಕ ನೆರವೇರಿತು.

ದೇವಾಲಯಕ್ಕೆ ತಹಶೀಲ್ದಾರ್ ಎಂ.ವಿ.ರೂಪ ಆಗಮಿಸಿ ಗಣಪತಿಯ ದರ್ಶನ ಪಡೆದು ಮಾತನಾಡಿ, ಸಮಾಜದಲ್ಲಿ ದೇವಾಲಯಗಳನ್ನು ನಿರ್ಮಿಸಿ ಪೂಜಿಸುವುದರಿಂದ ಜನರಲ್ಲಿ ಭಕ್ತಿ ಭಾವ ಮೂಡುವುದಲ್ಲದೆ ಮನಸ್ಸಿಗೆ ಶಾಂತಿ ಮತ್ತು ನೆಮ್ಮದಿ ಸಿಗುತ್ತದೆ.

ಕಾಲಕಾಲಕ್ಕೆ ಮಳೆ ಬೆಳೆಯಾಗುತ್ತದೆ ಜನ ಮತ್ತು ಜಾನುವಾರುಗಳು ರೋಗ ರುಜಿನಗಳು ದೂರವಾಗುತ್ತದೆ. ಇಲ್ಲಿನ ಬೆಸ್ಕಾಂ ಹಾಗೂ ಕೆಪಿಟಿಸಿಎಲ್ ಆವರಣದಲ್ಲಿ ಭಕ್ತಾದಿಗಳ ಸಹಕಾರದಿಂದ ಗಣಪತಿ ದೇವಾಲಯವನ್ನು ನಿರ್ಮಿಸಿ ದೇವಾಲಯದ ಮುಂಭಾಗ ನವಗ್ರಹಗಳ ಪ್ರತಿಷ್ಠಾಪನೆ ಹಾಗೂ ವಿಮಾನ ಗೋಪುರವನ್ನು ನಿರ್ಮಿಸಿದ್ದಾರೆ, ಗಣಪತಿ ಬೆಸ್ಕಾಂ ಹಾಗೂ ಕೆಪಿಟಿಸಿಎಲ್ ಸಿಬ್ಬಂದಿಗೆ ಒಳ್ಳೆಯದನ್ನು ಮಾಡಲಿ ಎಂದು ಹೇಳಿದರು.

ಬೆಸ್ಕಾಂನ ಸಹಾಯಕ ಕಾರ್ಯಪಾಲಕ ಅಭಿಯಂತರ ಆನ್ಸರ್ ಭಾಷಾ ಅವರು ಬೆಸ್ಕಾಂ ಹಾಗೂ ಕೆಪಿಟಿಸಿಎಲ್ ಆವರಣದಲ್ಲಿ ಗಣಪತಿ ದೇವಾಲಯ ನಿರ್ಮಾಣ ಹಾಗೂ ನವಗ್ರಹಗಳ ಪ್ರತಿಷ್ಠಾಪನೆ ವಿಮಾನ ಗೋಪುರ ನಿರ್ಮಿಸಲು ಹೆಚ್ಚಿನ ಶ್ರಮ ವಹಿಸಿದ್ದಾರೆ.

ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಣಾಧಿಕಾರಿ ವಿ.ಕೃಷ್ಣಪ್ಪ, ಬೆಸ್ಕಾಂ ಸಹಾಯಕ ಕಾರ್ಯಪಾಲಕ ಅಭಿಯಂತರ ಅನ್ಸರ್ ಬಾಷಾ, ಪೊಲೀಸ್ ಇನ್ಸ್ಪೆಕ್ಟರ್ ರಾಮಪ್ಪ ಗುತ್ತೇರ್, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಶಿವಕುಮಾರ್, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶೋಭಾ, ನಗರ ಸಭೆ ಮಾಜಿ ಸದಸ್ಯ ಪರಮೇಶ್, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಅಪ್ಪಾಜಿಗೌಡ, ಗುತ್ತಿಗೆದಾರರಾದ ಶ್ರೀನಿವಾಸ್, ಶಿವರಾಜ್, ಪ್ರಸನ್ನ, ರಾಮಾಚಾರಿ, ಬೆಸ್ಕಾಂ ಅಧಿಕಾರಿಗಳಾದ ವೆಂಕಟೇಶ್, ಮುನಿರಾಜು, ಮುನಿಯಪ್ಪ, ಮುನಿರಾಜು, ಪೂಜಾಸಿಂಗ್, ಸಂತೋಷ್, ನಾಗರಾಜನಾಯಕ, ಸಿಬ್ಬಂದಿ ಸತೀಶ್, ಸಮೀರ್, ಮಧು, ಇನ್ನಿತರರು ಹಾಜರಿದ್ದರು.

# ಶನೈಶ್ಚರಸ್ವಾಮಿ ಜಯಂತಿ



ಮಾಲೂರು

ಚಿಕ್ಕತಿರುಪತಿ ಗ್ರಾಮದಲ್ಲಿ ಶ್ರೀ ಓಂಕಾರೇಶ್ವರ ಸ್ವಾಮಿ ದೊಡ್ಡ ಮಠ ಆವರಣದಲ್ಲಿ ಇದೇ 16ರ ಶನಿವಾರ ಶ್ರೀವರಪ್ರದಾಯಕ ಶನೈಶ್ಚರಸ್ವಾಮಿ ದೇವಾಲಯದಲ್ಲಿ ಶ್ರೀ ಶನೈಶ್ಚರಸ್ವಾಮಿ ಜಯಂತಿಯನ್ನು ಏರ್ಪಡಿಸಲಾಗಿದೆ.

ತಾಲೂಕಿನ ಚಿಕ್ಕತಿರುಪತಿ ಗ್ರಾಮದಲ್ಲಿ ವರಪ್ರದಾಯಕ ಶನೈಶ್ಚರಸ್ವಾಮಿ ದೇವಾಲಯದಲ್ಲಿ ಶ್ರೀ ಶನೈಶ್ಚರಸ್ವಾಮಿ ಜಯಂತಿಯನ್ನು ಮೇ 16 ರಂದು ಗಣಪತಿ ಪೂಜೆಯೊಂದಿಗೆ ಪ್ರಾರಂಭವಾಗಿ ನವಗ್ರಹ ಹೋಮ, ಶನಿ ಸಹಸ್ರ ಹೋಮ, ಪೂರ್ಣಾಹುತಿ ಸೇರಿದಂತೆ ವಿವಿಧ ಪೂಜಾ ಕೈಕರುಗಳು ನಡೆಯಲಿದ್ದು, ಮುಜರಾಯಿ ಇಲಾಖೆಯ ಸಚಿವ ರಾಮಲಿಂಗಾರೆಡ್ಡಿ, ಜಯನಗರ ಕ್ಷೇತ್ರದ ಮಾಜಿ ಶಾಸಕಿ ಸೌಮ್ಯ ರೆಡ್ಡಿ, ಶಾಸಕ ಕೆ ವೈ ನಂಜೇಗೌಡ, ಸೇವಕರ್ತರಾದ ದಿವಂಗತ ಕೆ ಜಿ ರಾಜಗೋಪಾಲರೆಡ್ಡಿ, ಧರ್ಮಪತ್ನಿ ಸುನಂದಮ್ಮ ಮತ್ತು ಮಕ್ಕಳು ಕುಟುಂಬ ವರ್ಗದವರು ಆಗಮಿಸಲಿದ್ದು, ಶನೈಶ್ಚರಸ್ವಾಮಿ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ದೇವರ ದರ್ಶನ ಪಡೆದು ತೀರ್ಥ ಪ್ರಸಾದ ಸ್ವೀಕರಿಸುವಂತೆ ಶ್ರೀ ಓಂಕಾರೇಶ್ವರ ಸೇವಾ ಸಮಿತಿ ಮತ್ತು ಚಿಕ್ಕ ತಿರುಪತಿ ಗ್ರಾಮಸ್ಥರು ಕೋರಿದ್ದಾರೆ.

# ಪ್ರಧಾನಿ ಮೋದಿ ಜನತೆಗಿನ ಅನುಭವಗಳ 'ಅಪ್ನಾಪನ್' ಬಿಡುಗಡೆ

ನವದೆಹಲಿ

ಶಿವರಾಜ್ ಸಿಂಗ್ ಚೌಹಾಣ್ ಅವರು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೊಂದಿಗಿನ 35 ವರ್ಷಗಳ ಅನುಭವ ಮತ್ತು ಒಡನಾಟ ಆಧರಿಸಿದ "ಅಪ್ನಾಪನ್" ಪುಸ್ತಕ ಬಿಡುಗಡೆ ಕುರಿತು ಘೋಷಣೆ ಮಾಡಿದ್ದಾರೆ.

ನವದೆಹಲಿನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾರ್ವಜನಿಕ ಜೀವನ, ಸಂಘಟನೆ, ಆಡಳಿತ ಮತ್ತು ರಾಷ್ಟ್ರ ನಿರ್ಮಾಣದ ಹಾದಿಯಲ್ಲಿ ಪ್ರಧಾನಿ ಮೋದಿಯವರೊಂದಿಗೆ ಹೊಂದಿದ್ದ ವೈಯಕ್ತಿಕ ಅನುಭವಗಳು ಹಾಗೂ ಸಾಂಘಿಕ ಪಯಣವನ್ನು ಈ ಪುಸ್ತಕದಲ್ಲಿ ದಾಖಲಿಸಲಾಗಿದೆ ಎಂದು ತಿಳಿಸಿದರು.

"ಅಪ್ನಾಪನ್" ಪುಸ್ತಕವನ್ನು ಮೇ 26, 2026 ರಂದು ಬೆಳಿಗ್ಗೆ 10:30ಕ್ಕೆ ನವದೆಹಲಿಯ ಎನ್‌ಎಎಸ್‌ಸಿ ಕಾಂಪ್ಲೆಕ್ಸ್‌ನಲ್ಲಿ ಮಾಜಿ ಉಪರಾಷ್ಟ್ರಪತಿ ಎಂ. ವೆಂಕಯ್ಯ ನಾಯ್ಡು ಹಾಗೂ ಮಾಜಿ ಪ್ರಧಾನಮಂತ್ರಿ ಎಚ್.ಡಿ. ದೇವೇಗೌಡ ಅವರ ಸಮ್ಮುಖದಲ್ಲಿ ಲೋಕಾರ್ಪಣೆ ಮಾಡಲಾಗುವುದು ಎಂದು ಹೇಳಿದರು.

ಪುಸ್ತಕವು ಪ್ರಧಾನಿ ಮೋದಿಯವರ ನಾಯಕತ್ವ, ವ್ಯಕ್ತಿತ್ವ, ಸಂವೇದನಾಶೀಲತೆ, ಕಾರ್ಯಶೈಲಿ ಹಾಗೂ ರಾಷ್ಟ್ರ ನಿರ್ಮಾಣದ ಬಗ್ಗೆ ಅವರ ಸಮರ್ಪಣಾ ಭಾವವನ್ನು ಒಳನೋಟದೊಂದಿಗೆ ಪರಿಚಯಿಸಲಿದೆ ಎಂದು ಶಿವರಾಜ್ ಸಿಂಗ್ ಚೌಹಾಣ್ ವಿವರಿಸಿದರು.



1991ರಲ್ಲಿ ನಡೆದ ಏಕತಾ ಯಾತ್ರೆಯಿಂದ ಆರಂಭವಾದ ತಮ್ಮ ಮತ್ತು ನರೇಂದ್ರ ಮೋದಿ ಅವರ ಒಡನಾಟವು ಮೂರು ದಶಕಗಳಿಗೂ ಹೆಚ್ಚು ಕಾಲ ಮುಂದುವರಿದಿದೆ ಎಂದು ಅವರು ಸ್ಮರಿಸಿದರು. ಆರಂಭದಲ್ಲಿ ಸಂಘಟನಾ ಕಾರ್ಯಕರ್ತರ ನಡುವಿನ ಸಂಬಂಧವಾಗಿದ್ದ ಈ ಪಯಣ, ಬಳಿಕ ಮುಖ್ಯಮಂತ್ರಿಯಾಗಿ ಹಾಗೂ ಕೇಂದ್ರ ಸಚಿವರಾಗಿ ವಿವಿಧ ಹಂತಗಳಲ್ಲಿ ಮತ್ತಷ್ಟು ಗಾಢವಾಯಿತು ಎಂದು ಹೇಳಿದರು.

"ಜಗತ್ತು ನರೇಂದ್ರ ಮೋದಿಯವರನ್ನು ಪ್ರಭಾವಶಾಲಿ ಮತ್ತು ನಿರ್ಣಾಯಕ ನಾಯಕನಾಗಿ ನೋಡುತ್ತದೆ. ಆದರೆ ನಾನು ಅವರಲ್ಲಿ ಕರ್ಮಯೋಗಿ, ಸಾಧಕ ಹಾಗೂ ರಾಷ್ಟ್ರದ ಹಿತಾಸಕ್ತಿಗೆ ಸಂಪೂರ್ಣ ಸಮರ್ಪಿತ ವ್ಯಕ್ತಿತ್ವವನ್ನು ಕಂಡಿದ್ದೇನೆ" ಎಂದು ಚೌಹಾಣ್ ಹೇಳಿದರು.

ಪ್ರಧಾನಮಂತ್ರಿ ಮೋದಿ ರಾತ್ರಿ ತಡರವರೆಗೆ ಕೆಲಸ ಮಾಡಿದರೂ, ಪ್ರತಿದಿನ ಹೊಸ ಶಕ್ತಿ ಮತ್ತು ಸ್ಪಷ್ಟ ಗುರಿಯೊಂದಿಗೆ ರಾಷ್ಟ್ರ ಸೇವೆಗೆ ತೊಡಗಿಕೊಳ್ಳುತ್ತಾರೆ ಎಂದು ಅವರು ಉಲ್ಲೇಖಿಸಿದರು.

ಏಕತಾ ಯಾತ್ರೆಯನ್ನು ನೆನಪಿಸಿಕೊಂಡ ಅವರು, ಕೆಲವರು ಅದನ್ನು ರಾಜಕೀಯ ಕಾರ್ಯಕ್ರಮವೆಂದು ಕಂಡಿದ್ದರೂ, ನರೇಂದ್ರ ಮೋದಿ ಅದನ್ನು ರಾಷ್ಟ್ರೀಯ ಚೇತನೆಯನ್ನು ಜಾಗೃತಿಗೊಳಿಸುವ ಚಳವಳಿಯನ್ನಾಗಿ ರೂಪಿಸಿದರು ಎಂದು ಹೇಳಿದರು. ಶ್ರೀನಗರದ ಲಾಲ್ ಚೌಕ್‌ನಲ್ಲಿ ತ್ರಿವರ್ಣ ಧ್ವಜಾರೋಹಣ ಮಾಡುವುದು ಮಾತ್ರವಲ್ಲ, ಯುವಜನತೆಯಲ್ಲಿ ದೇಶಪ್ರೇಮ ಮತ್ತು ಸಮರ್ಪಣಾ ಮನೋಭಾವ ಬೆಳೆಸುವುದೇ ಆ ಯಾತ್ರೆಯ ಉದ್ದೇಶವಾಗಿತ್ತು ಎಂದು ವಿವರಿಸಿದರು. ನಾಯಕತ್ವವು ಕೇವಲ ಭಾಷಣಗಳಿಂದ ನಿರ್ಮಾಣವಾಗುವುದಿಲ್ಲ; ಅದು ಶಿಸ್ತು, ತ್ಯಾಗ, ಬದ್ಧತೆ ಮತ್ತು ಜನರ ಮೇಲಿನ ಆತ್ಮೀಯತೆಯಿಂದ ರೂಪುಗೊಳ್ಳುತ್ತದೆ ಎಂಬ ಅರಿವು ಈ ಅನುಭವಗಳಿಂದ ತಮಗೆ ಮೂಡಿತು ಎಂದು ಶಿವರಾಜ್ ಸಿಂಗ್ ಚೌಹಾಣ್ ಹೇಳಿದರು.

# ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ

ಕೋಲಾರ

ಕೋಲಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘವು ಪ್ರತಿ ವರ್ಷದಂತೆ ಈ ಬಾರಿಯೂ ಜುಲೈ 1 ರಂದು ಪತ್ರಿಕಾ ದಿನಾಚರಣೆ ಸಂದರ್ಭದಲ್ಲಿ ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲು ಅರ್ಜಿಗಳನ್ನು ಆಹ್ವಾನಿಸಿದೆ.

ಕೋಲಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯರಾಗಿರುವ ಪತ್ರಕರ್ತರ ಮಕ್ಕಳು 2025–26ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ, ದ್ವಿತೀಯ ಪಿಯುಸಿ ಹಾಗೂ ಯಾವುದೇ ಅಂತಿಮ ಪದವಿ ಪರೀಕ್ಷೆಯಲ್ಲಿ ಶೇ.60 ಕ್ಕಿಂತ ಹೆಚ್ಚಿನ ಅಂಕಗಳನ್ನು ಗಳಿಸಿದ್ದಲ್ಲಿ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಮೇ, 31 ರೊಳಗಾಗಿ ಅರ್ಹ ವಿದ್ಯಾರ್ಥಿಗಳು ಪತ್ರಕರ್ತ ತಂದೆ/ತಾಯಿಯ ಹೆಸರು, ಅಂಕಪಟ್ಟಿ, ಸಮೇತ ಸ್ವಬರಹದ ಅರ್ಜಿಗಳನ್ನು ಕೋಲಾರದ ಪತ್ರಕರ್ತರ ಭವನಕ್ಕೆ ಕಚೇರಿ ವೇಳೆಯಲ್ಲಿ ತಲುಪಿಸಲು ಕೋರಿದೆ.

ಮೇ, 31ರ ನಂತರ ಬರುವ ಯಾವುದೇ ಅರ್ಜಿಗಳನ್ನು ಪುರಸ್ಕಾರಕ್ಕೆ ಪರಿಗಣಿಸುವುದಿಲ್ಲ.

ಜಿಲ್ಲೆಯ ಪತ್ರಕರ್ತರು ತಮ್ಮ ಪ್ರತಿಭಾವಂತ ಮಕ್ಕಳ ಅರ್ಜಿಗಳನ್ನು ಸಕಾಲಕ್ಕೆ ತಲುಪಿಸಿ ಪುರಸ್ಕಾರಕ್ಕೆ ಸಹಕರಿಸಬೇಕೆಂದು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಕೆ.ಚಂದ್ರಶೇಖರ್, ಪ್ರಧಾನ ಕಾರ್ಯದರ್ಶಿ ಎ.ಜಿ.ಸುರೇಶ್‌ಕುಮಾರ್, ಖಜಾಂಚಿ ಬಿ.ಎಲ್.ರಾಜೇಂದ್ರಸಿಂಹ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರಕಾರದ ಮತೀಯ ಓಲೈಕೆ ರಾಜಕಾರಣ: ಸಿ.ಟಿ.ರವಿ

ಬೆಂಗಳೂರು

ಶಾಲೆಗಳಲ್ಲಿ ವಸ್ತ್ರಸಂಹಿತೆ ಇರಬೇಕೇ ಬೇಡವೇ ಎಂದು ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಅವರು ಪ್ರಶ್ನಿಸಿದ್ದಾರೆ.

ರಾಜ್ಯ ಬಿಜೆಪಿ ಕಾರ್ಯಾಲಯದಲ್ಲಿ ಇಂದು ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಜಾಬ್‌ಗೆ ಅನುಮತಿ ನೀಡಿ, ಜನಿವಾರ– ರುದ್ರಾಕ್ಷಿಯನ್ನೂ ಎಳೆದು ತಂದು, ಕೇಸರಿ ಶಾಲಿಗೆ ನಿಷೇಧ ಹೇರಿ ಒಂದು ಸುತ್ತೋಲೆಯನ್ನು ಸರಕಾರ ಹೊರಡಿಸಿದೆ ಎಂದರು. ಬಿಜೆಪಿ, ಹಿಜಾಬ್ ವಿರೋಧಿಯಲ್ಲ; ನಾವು ಹಿಜಾಬ್ ವಿರೋಧಿಸಿಲ್ಲ ಎಂದು ಇದೇವೇಳೆ ಸ್ಪಷ್ಟಪಡಿಸಿದರು.

ಯಾವಾಗಿನಿಂದ ಯೂನಿಫಾರಂ (ವಸ್ತ್ರಸಂಹಿತೆ) ಆರಂಭವಾಗಿದೆ? ಯಾವ ಉದ್ದೇಶಕ್ಕೆ ಅದು ಪ್ರಾರಂಭವಾಗಿದೆ? ಎಂದು ಕೇಳಿದ ಅವರು, ಅಕ್ಷರ ಮತ್ತು ಜ್ಞಾನ ಹೆಚ್ಚಿಸಬೇಕಾದ ಶಿಕ್ಷಣ ಸಚಿವರಿಗೆ ಅದರ ಉದ್ದೇಶದ ಬಗ್ಗೆಯೂ ಸ್ಪಷ್ಟತೆ ಇಲ್ಲ. ಅದರ ಇತಿಹಾಸದ ಅರಿವೂ ಇಲ್ಲ. ಕೇವಲ ಮತೀಯ ಓಲೈಕೆಯ ರಾಜನೀತಿಯ ಭಾಗವಾಗಿ ಶಾಲೆಗಳಲ್ಲಿ ಮತೀಯ ಭಾವನೆಗಳಿಗೆ ಜಾತ್ಯತೀತತೆಯ ಹೆಸರಿನಲ್ಲಿ ಅನುಮತಿ ಕೊಟ್ಟಿದ್ದಾರೆ ಎಂದರು. ಶಾಲೆಗಳಲ್ಲಿ ಎಲ್ಲ ಮಕ್ಕಳೂ ಸಮಾನರು. ಅವರು ಬೇರೆ ಬೇರೆ ಮತ, ಸಂಪ್ರದಾಯಗಳಿಗೆ ಸೇರಿದ್ದರೂ ಅವರೆಲ್ಲ ಸಮಾನವಾಗಿ ಗುರುತಿಸಿಕೊಳ್ಳಬೇಕೆಂಬ ಉದ್ದೇಶದಿಂದ ಶಾಲಾ, ಕಾಲೇಜುಗಳಲ್ಲಿ ಯೂನಿಫಾರಂ ಅಳವಡಿಸಲಾಗಿದೆ ಎಂದು ವಿವರಿಸಿದರು.

ಸ್ವಾತಂತ್ರ್ಯ ಪೂರ್ವದಲ್ಲಿ ಮಿಷನರಿಗಳು, ಮೈಸೂರು ಸಂಸ್ಥಾನದ ಕಾಲಘಟ್ಟದಲ್ಲೂ ಸ್ವಾತಂತ್ರ್ಯ ಪೂರ್ವದಲ್ಲೇ ನಮ್ಮಲ್ಲಿ ಯೂನಿಫಾರಂ ವ್ಯವಸ್ಥೆಯನ್ನು ಜಾರಿಗೆ ತಂದರು ಎಂದು ತಿಳಿಸಿದರು. ಯಾವುದೇ ಸಂದರ್ಭದಲ್ಲಿ ಯೂನಿಫಾರಂ ಒಳಗೆ ಹಿಜಾಬ್ ಪ್ರವೇಶ ಮಾಡಿರಲಿಲ್ಲ ಎಂದು ವಿಶ್ಲೇಷಿಸಿದರು. 1983ರಲ್ಲಿ ಕರ್ನಾಟಕ ಶಿಕ್ಷಣ ಕಾಯ್ದೆಯ ಮೂಲಕ ವಸ್ತ್ರಸಂಹಿತೆಯ ಉದ್ದೇಶವನ್ನು ಸ್ಪಷ್ಟಪಡಿಸಿದ್ದಾರೆ. ಆಯಾ ಶಾಲಾ, ಕಾಲೇಜಿನ ಆಡಳಿತ ಮಂಡಳಿಗೆ ಸ್ವಾಯತ್ತತೆ, ಜವಾಬ್ದಾರಿ ಕೊಟ್ಟಿದ್ದಾರೆ ಎಂದು ತಿಳಿಸಿದರು.




ಸರಕಾರ ಇದೀಗ ಮತೀಯ ಓಲೈಕೆ ರಾಜಕಾರಣ ಮುಂದುವರೆಸಿದೆ. ಅದರ ಪರಿಣಾಮವಾಗಿ ಶಾಲೆಗಳಲ್ಲಿ ಹಿಜಾಬ್‌ಗೆ ಅನುಮತಿ ಕೊಟ್ಟಿದ್ದಾರೆ ಎಂದು ಆಕ್ಷೇಪಿಸಿದರು. ಭಾರತ ಎಂದರೆ ಒಂದು ಪುಸ್ತಕ, ಒಂದು ಪ್ರವಾದಿ, ಒಬ್ಬ ದೇವರು ಎಂಬ ಸಿದ್ಧಾಂತದ ಮೇಲೆ ನಂಬಿಕೆ ಇಟ್ಟ ರಾಷ್ಟ್ರ ಅಲ್ಲ ಎಂದ ಅವರು, ಭಾರತವು ದೇವನೊಬ್ಬ ನಾಮ ಹಲವು ಎಂಬ ನಂಬಿಕೆಯ ದೇಶ. ಭಾರತವೆಂದರೆ ಸಾವಿರಾರು ಜನ ಮತ ಪ್ರವರ್ತಕರು, ಋಷಿಮುನಿಗಳ ದೇಶ. ಒಬ್ಬೊಬ್ಬರ ವಿಚಾರವು ಕೂಡ ಆಂತರಿಕವಾಗಿ ಏಕರೂಪತೆ ಹೊಂದಿದ್ದರೂ ಬಾಹ್ಯವಾಗಿ ಬಹುಮುಖವನ್ನು ಹೊಂದಿರುವ ವಿಚಾರಧಾರೆ ಎಂದು ವಿಶ್ಲೇಷಿಸಿದರು.

ಶಿಕ್ಷಣ ಸಚಿವರು ಮತ್ತು ಕಾಂಗ್ರೆಸ್ ಸರಕಾರವು ಎಲ್ಲರ ಸಂಪ್ರದಾಯವನ್ನು ಗೌರವಿಸುವರೇ ಎಂದು ಪ್ರಶ್ನಿಸಿದರು. ಎಲ್ಲ ಸಂಪ್ರದಾಯವನ್ನು ಗೌರವಿಸುತ್ತೇವೆ ಎಂಬುದು ನಿಮ್ಮ ಸುತ್ತೋಲೆಯಲ್ಲಿ ಇಲ್ಲ ಎಂದು ಗಮನ ಸೆಳೆದರು. ಎಲ್ಲ ಮತ ಸಂಪ್ರದಾಯವನ್ನು ನೀವು ಗೌರವಿಸುವುದಾದರೆ, ಭಾರತದಲ್ಲಿ ಸಾವಿರಾರು ಮತ ಸಂಪ್ರದಾಯಗಳಿವೆ. ನಿರ್ವಾಣ ಸ್ಥಿತಿ ಎಂದರೆ ಬಟ್ಟೆಯನ್ನೇ ಹಾಕದ ಸಂಪ್ರದಾಯದಿಂದ ಮೊದಲುಗೊಂಡು ಶರೀರದ ಯಾವೊಂದು ಅಂಗವೂ ಕಾಣದಂತೆ ಮುಚ್ಚಿಕೊಳ್ಳುವ ಸಂಪ್ರದಾಯವೂ ಈ ದೇಶದಲ್ಲಿದೆ ಎಂದು ವಿವರಿಸಿದರು.

ನಿಮ್ಮ ಹೇಳಿಕೆ ಪ್ರಕಾರ ಎಲ್ಲ ಮತ ಸಂಪ್ರದಾಯವನ್ನು ನೀವು ಗೌರವಿಸುವುದಾದರೆ, ಹಾಗೇ ಹೇಳಿ ಎಂದು ಒತ್ತಾಯಿಸಿದರು. ಕೇವಲ ಹಿಜಾಬ್‌ಗೆ ಅನುಮತಿ, ಕೇಸರಿ ಶಾಲಿಗೆ ಇಲ್ಲ ಎಂದಿದ್ದೀರಿ. ಇದರಿಂದ ನೀವು ಕೇಸರಿ ವಿರೋಧಿಗಳು ಅನಿಸುತ್ತದೆ ಎಂದು ತಿಳಿಸಿದರು. ನೀವು ಮರಿ ತಾಲಿಬಾನಿಗಳ ಥರ ವರ್ತನೆ ಮಾಡುತ್ತಿದ್ದೀರಿ ಎಂದು ಅನಿಸುತ್ತದೆ ಎಂದು ನುಡಿದರು.

**ವಸ್ತ್ರಸಂಹಿತೆ ರೂಪಿಸಿದವರ ಮಹತ್ವಾಕಾಂಕ್ಷೆ ಮಣ್ಣುಪಾಲು**

ಎಲ್ಲ ಮತ ಸಂಪ್ರದಾಯಕ್ಕೆ ಆದ್ಯತೆ ನೀಡಿದರೆ ಅವರವರ ಮತ ಸಂಪ್ರದಾಯದಂತೆ ಅವರವರು ಬರುತ್ತಾರೆ. ಆಗ, ಎಲ್ಲ ಮಕ್ಕಳು ಶಾಲೆಗಳಲ್ಲಿ ಸಮಾನರಾಗಿ ಇರಬೇಕೆಂಬ ದೃಷ್ಟಿಯಿಂದ ವಸ್ತ್ರಸಂಹಿತೆ ರೂಪಿಸಿದವರ ಮಹತ್ವಾಕಾಂಕ್ಷೆ ಎಲ್ಲವೂ ಮಣ್ಣು ಪಾಲಾಗುತ್ತದೆ. ಹಿಜಾಬ್ ಸಂಪ್ರದಾಯ ಅವರ ಮನೆಯಲ್ಲಿ ಇಟ್ಟುಕೊಳ್ಳಲಿ. ಎಲ್ಲೆಲ್ಲಿ ಅನುಮತಿ ಇದೆಯೋ ಅಲ್ಲಿ ಬಳಸಲಿ. ಶಾಲೆಗಳಲ್ಲಿ ಹಿಜಾಬ್ ಯೂನಿಫಾರಂನ ಭಾಗ ಆಗಿದ್ದರೆ ಹಿಜಾಬ್ ಹಾಕಿಕೊಂಡು ಬರಲಿ. ಹಿಜಾಬ್ ಯೂನಿಫಾರಂನ ಭಾಗ ಆಗದೇ ಇದ್ದಲ್ಲಿ ಹೇಗೆ? ಎಂದರು. ನಾಳೆ ಯಾವುದಾದರೂ ಶಾಲೆಯ ಆಡಳಿತ ಮಂಡಳಿಯು ಕೇಸರಿ ಶಾಲನ್ನು ಯೂನಿಫಾರಂನ ಭಾಗವಾಗಿ ಮಾಡಿದರೆ ನೀವು ಹೇಗೆ ನಿರಾಕರಿಸುತ್ತೀರಿ ಎಂದು ಕೇಳಿದರು.

# 'ಹಿಜಾಬ್ ಮೂಲಕ ಮತ್ತೊಮ್ಮೆ ಸಂಘರ್ಷಕ್ಕೆ ಎಡೆ'



ಬೆಂಗಳೂರು

ನಾಲ್ಕು ವರ್ಷಗಳ ನಂತರ ಮತ್ತೆ ಕಾಂಗ್ರೆಸ್ ಹಿಜಾಬ್ ಗೆ ಅವಕಾಶ ನೀಡಿ ಸಂಘರ್ಷಕ್ಕೆ ಎಡೆ ಮಾಡಿಕೊಡುತ್ತಿದೆ ಎಂದು ವಿಧಾನ ಪರಿಷತ್ ನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಆರೋಪಿಸಿದ್ದಾರೆ.

ರಾಜ್ಯ ಬಿಜೆಪಿ ಕಾರ್ಯಾಲಯದಲ್ಲಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಶಾಲಾ ಕಾಲೇಜುಗಳಲ್ಲಿ ಸಹೋದರತ್ವ ಇಲ್ಲದೆ ಇದ್ದರೆ ಸಮಾಜ ಉತ್ತಮವಾಗಿ ಬದುಕಲು ಸಾಧ್ಯವಿಲ್ಲ. ಆದ್ದರಿಂದ ನಾಲ್ಕು ವರ್ಷದ ಹಿಂದೆ ಶಾಲಾ ಕಾಲೇಜುಗಳಲ್ಲಿ ತಲೆದೋರಿದ್ದ ಧಾರ್ಮಿಕ ಭಾವನೆ ಕೆರಳಿಸುವ ಹಿಜಾಬ್ ಅನ್ನು ನಿಷೇಧ ಮಾಡಲಾಗಿತ್ತು. ಸಮವಸ್ತ್ರ ಬಿಟ್ಟು ಬಹಿರಂಗವಾಗಿ ಮೇಲೆ ಕಾಣುವ ವಸ್ತ್ರ ಧರಿಸಬಾರದು ಎಂದು ತೀರ್ಮಾನ ಮಾಡಲಾಗಿತ್ತು ಎಂದರು.

ಹಿಜಾಬ್ ನಿಷೇಧ ಪ್ರಶ್ನಿಸಿ ಕೇಸ್ ಹಾಕಲಾಗಿದೆ. ಸುಪ್ರೀಂ ಕೋರ್ಟ್‌ನಲ್ಲಿ ಪ್ರಕರಣ ಇರುವಾಗಲೇ ಇವರು ತಕ್ಷಣಕ್ಕೆ ಒಂದು ಸಮುದಾಯ ಓಲೈಸಲು ಮತ್ತೆ ಹಿಜಾಬ್ ಹಾಕಲು ಆದೇಶ ಮಾಡಿದ್ದಾರೆ. ಇದು ದೊಡ್ಡ ತಪ್ಪು. ಕೋರ್ಟ್‌ನಲ್ಲಿ ಇರುವಾಗಲೇ ಆದೇಶ ಮಾಡಿರುವುದು ಕೋರ್ಟ್ ಗೆ ಅಪಚಾರ ಮಾಡಿದಂತೆ ಎಂದು ತಿಳಿಸಿದರು.

ಹಿಜಾಬ್‌ಗೆಅವಕಾಶನೀಡಿದರೆಮುಸ್ಲಿಮರುನಮ್ಮ ಜೊತೆಯಾಗುತ್ತಾರೆ ಅಂತ ಸರ್ಕಾರ ತಿಳಿದಿದೆ. ಮುಸ್ಲಿಮರಿಗೆ ಹಣ ನೀಡಿದರೆ, ಮನೆ ಕೊಟ್ಟರೆ ಅವರೆಲ್ಲ ನಮ್ಮ ಜೊತೆಗೆ ನಿಲ್ಲುತ್ತಾರೆ ಅಂತ ಕಾಂಗ್ರೆಸ್ ಭಾವಿಸಿದೆ. ಇವೆಲ್ಲ ಬಹುಸಂಖ್ಯಾತರನ್ನು ಮುಸ್ಲಿಮರ ವಿರುದ್ಧವಾಗಿ ಎತ್ತಿಕಟ್ಟುವ ಕೆಲಸ. ಈ ರೀತಿ ಮಾಡಿ ಮುಸ್ಲಿಮರಿಗೆ ತೊಂದರೆ ಕೊಡುತ್ತಿದ್ದೀರಿ ಅಂತಾನೆ ನನ್ನ ಭಾವನೆ. ಏಕೆಂದರೆ ಅಲ್ಪಸಂಖ್ಯಾತರನ್ನು ಓಲೈಸಲು ಹೋಗಿ ಬಹುಸಂಖ್ಯಾತರು ವಿರೋಧಿಗಳಾಗುತ್ತಾರೆ ಎಂದು ಅಭಿಪ್ರಾಯಪಟ್ಟರು.

ಮುಸ್ಲಿಮರ ಓಲೈಕೆ ಮಾಡಿದರೆ ಯಾವ ರೀತಿ ಅದನ್ನು ಅವರು ತಗೋತಾರೆ ಎಂಬುದು ಮುಖ್ಯ. ಕಾಂಗ್ರೆಸ್ ನಿಮ್ಮ ಪರವಾಗಿ ಇಲ್ಲ. ಎಲ್ಲರ ನಡುವೆ ನಿಮ್ಮನ್ನು ನಿಂದಿಸುವ ಕೆಲಸ ಮಾಡುತ್ತಿದೆ ಎಂದು ತಿಳಿದುಕೊಳ್ಳಿ ಎಂದು ಹೇಳಿದರು. ಕಾಂಗ್ರೆಸ್ ನಂಬಿದರೆ ದ್ರೋಹ ಅಗುತ್ತದೆ; ಒಳ್ಳೆಯದು ಅಗಲ್ಲ.

ಯಾಕೆಂದರೆ ದೇಶದ ಕಾನೂನು ಎಲ್ಲರಿಗೂ ಒಂದೇ. ಸಂವಿಧಾನದ ಅಡಿಯಲ್ಲಿ ಮುಸ್ಲಿಂ, ಕ್ರೈಸ್ತ, ಬೌದ್ಧ ಒಂದೇ. ಪ್ರಧಾನಿ ಮೋದಿ ಅವರು 'ಸಬ್ ಕಾ ಸಾಥ್ ಸಬ್ ಕಾ ವಿಕಾಸ್' ಎಂದು ಹೇಳಿದ್ದು ಇದನ್ನೇ. ಸಂವಿಧಾನದ ಅಡಿ ಯಾರನ್ನೂ ಬೇರೆ ಮಾಡಬಾರದು ಎಂದರು. ಕಾಂಗ್ರೆಸ್, ಬಿಜೆಪಿಯನ್ನು ಸನಾತನಿ ಅಂತ ಹೇಳುತ್ತದೆ. ಆದರೆ ನಾವು ದೇಶ ಒಡೆಯುವ ಯಾವುದೇ ಧಾರ್ಮಿಕ ವಿಚಾರ ಹೇಳಿಲ್ಲ. ನಮ್ಮದು ಯಾವಾಗಲೂ ಕೂಡ ಹಿಂದೂ ಅಸ್ಮಿತೆ ಎಂದರು. ಹಿಜಾಬ್ ನಂತಹ ತೀರ್ಮಾನ ಕೈಗೊಂಡು ನೀವೇ ರಾಜ್ಯಕ್ಕೇ ಬೆಂಕಿ ಹಚ್ಚುತ್ತ ಇದ್ದೀರಿ. ಇಲ್ಲಿ ಅಹಿತಕರ ಘಟನೆ, ಗದ್ದಲ ಆದರೆ ಕಾಂಗ್ರೆಸ್ ಹೊಣೆ. ಮುಸ್ಲಿಮರು ಕಾಂಗ್ರೆಸ್ ಬಂಧುವಲ್ಲ. ಸರ್ವರನ್ನು ನಿಮ್ಮ ವಿರುದ್ಧವಾಗಿ ಎತ್ತಿಕಟ್ಟುವ ಕೆಲಸ ಮಾಡುತ್ತಿದೆ ಎಂದು ಹೇಳಿದರು.

# ಜಿಲೆಟಿನ್ ಕಡ್ಡಿ: ತನಿಖೆ ತೀವ್ರ

ಬೆಂಗಳೂರು

ಕನಕಪುರ ರಸ್ತೆಯ ಆರ್ಟ್ ಆಫ್ ಲಿವಿಂಗ್ ಆಶ್ರಮದ ಬಳಿ ಜಿಲೆಟಿನ್ ಕಡ್ಡಿಗಳು ಪತ್ತೆಯಾದ ಪ್ರಕರಣ ರಾಜ್ಯದಲ್ಲಿ ತಲ್ಲಣ ಮೂಡಿಸಿದ್ದು, ತನಿಖಾ ತಂಡಗಳು ಕಾರ್ಯಾಚರಣೆಯನ್ನು ತೀವ್ರಗೊಳಿಸಿವೆ. ಈ ಸ್ಫೋಟಕ ಪ್ರಕರಣದ ಬೆನ್ನತ್ತಿರುವ ಅಧಿಕಾರಿಗಳು ಯಾವುದೇ ಸಣ್ಣ ಸುಳಿವನ್ನೂ ಬಿಡದೆ ತನಿಖೆ ನಡೆಸುತ್ತಿದ್ದಾರೆ.

ಪ್ರಕರಣದ ಗಂಭೀರತೆಯನ್ನು ಪರಿಗಣಿಸಿ ಸ್ವತಃ ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ತನಿಖೆಯಲ್ಲಿ ಭಾಗಿಯಾಗಿದ್ದಾರೆ. ನಿನ್ನೆ ಸಂಜೆ ಆಡುಗೋಡಿಯ ಟೆಕ್ನಿಕಲ್ ಸೆಲ್‌ನಲ್ಲಿ ಸುಮಾರು 2 ಗಂಟೆಗಳ ಕಾಲ ಶಂಕಿತ ವ್ಯಕ್ತಿ ಲೋಹಿತ್ ನನ್ನು ಆಯುಕ್ತರು ಖುದ್ದು ವಿಚಾರಣೆ ನಡೆಸಿದ್ದಾರೆ.


ಸದ್ಯ ಕೋರಮಂಗಲ ಪೊಲೀಸರ ಕಸ್ಟಡಿಯಲ್ಲಿರುವ ಲೋಹಿತ್ ನನ್ನು ರಾಷ್ಟ್ರೀಯ ತನಿಖಾ ದಳದ ಅಧಿಕಾರಿಗಳು ಕಳೆದ ಎರಡು ದಿನಗಳಿಂದ ತೀವ್ರ ವಿಚಾರಣೆಗೆ ಒಳಪಡಿಸಿದ್ದಾರೆ. ನಿನ್ನೆಯೂ ಸಹ ಸತತ ಮೂರು ಗಂಟೆಗಳ ಕಾಲ ಎನ್‌ಐಎ ತಂಡ ಮಾಹಿತಿ ಕಲೆಹಾಕಿದೆ.

# ಮುಂಗಾರು ತುರ್ತು ಸಿದ್ಧತೆಗೆ 'ಪ್ರಹರಿ' ವಾಹನಗಳ ಪರೇಡ್

ಬೆಂಗಳೂರು

ಜಿಬಿಎ ವ್ಯಾಪ್ತಿಯಲ್ಲಿ ಮುಂಗಾರು ಸನ್ನದ್ಧತೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರು ಎಲ್ಲಾ ನಗರ ಪಾಲಿಕೆಗಳ ಆಯುಕ್ತರಿಗೆ ತಮ್ಮ ವ್ಯಾಪ್ತಿಯಲ್ಲಿ ತಕ್ಷಣ "ಪ್ರಹರಿ" ವಾಹನಗಳ ಪರೇಡ್ ಆಯೋಜಿಸಲು ಸೂಚಿಸಿದರು.

ಜಿಬಿಎ ಮುಖ್ಯ ಕಚೇರಿ ಸಭಾಂಗಣದಲ್ಲಿ ನಡೆದ ಸಮನ್ವಯ ಸಭೆಯಲ್ಲಿ ಮಾತನಾಡಿದ ಅವರು, ಪ್ರಹರಿ ವಾಹನಗಳಲ್ಲಿರುವ ಎಲ್ಲಾ ಅಗತ್ಯ ಉಪಕರಣಗಳನ್ನು ಸಮಗ್ರವಾಗಿ ಪರಿಶೀಲಿಸಿ, ಮಳೆ ಸಂಬಂಧಿತ ತುರ್ತು ಪರಿಸ್ಥಿತಿಗಳಿಗೆ ಸಂಪೂರ್ಣ ಕಾರ್ಯಸನ್ನದ್ಧತೆ ಖಚಿತಪಡಿಸಿಕೊಳ್ಳಬೇಕು ಎಂದು ನಿರ್ದೇಶಿಸಿದರು.



ಜೊತೆಗೆ, ಎಲ್ಲಾ ಮರ ಕಟಾವು ಯಂತ್ರೋಪಕರಣಗಳು, ವಾಹನಗಳು, ಹಾಗೂ ಸಂಬಂಧಿತ ತುರ್ತು ಸೇವಾ ಸಾಧನಗಳನ್ನು ಕೂಡ ವಿವರವಾಗಿ ಪರಿಶೀಲಿಸಿ, ಒಂದು ವಾರದೊಳಗಾಗಿ ಸಮಗ್ರ ಸಿದ್ಧತಾ ವರದಿಯನ್ನು ಸಲ್ಲಿಸುವಂತೆ ಸೂಚಿಸಿದರು.

**ರೈಲ್ವೆ ತಗ್ಗು ಪ್ರದೇಶಗಳ ಜಂಟಿ ಪರಿಶೀಲನೆ:** ಪ್ರವಾಹ ಮತ್ತು ನೀರು ನಿಲ್ಲುವ ಸಮಸ್ಯೆಗಳನ್ನು ಎದುರಿಸುತ್ತಿರುವ ರೈಲ್ವೆ ತಗ್ಗು ಪ್ರದೇಶಗಳಿಗೆ ವಿಶೇಷ ಆದ್ಯತೆ ನೀಡಲಾಗಿದ್ದು, ಸಂಬಂಧಿತ ನಗರ ಪಾಲಿಕೆ ಅಧಿಕಾರಿಗಳು ಹಾಗೂ ರೈಲ್ವೆ ಅಧಿಕಾರಿಗಳು ಪ್ರತಿ ಪ್ರದೇಶವನ್ನು ಜಂಟಿಯಾಗಿ ಪರಿಶೀಲಿಸಿ, ಸಮಸ್ಯೆಗಳನ್ನು ಸಮನ್ವಯದಿಂದ ಪರಿಹರಿಸಿ, ಬಾಕಿ ಉಳಿದ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸುವಂತೆ ಸೂಚಿಸಿದರು.

ಸಂಬಂಧಿತ ಅಧಿಕಾರಿಗಳು ನಿಯಂತ್ರಣ ಕೊಠಡಿಗಳನ್ನು ಪರಿಶೀಲಿಸಿ, ಭಾರಿ ಮಳೆ ಹಾಗೂ ಪ್ರವಾಹ ಪರಿಸ್ಥಿತಿಗಳಿಗೆ ಪರಿಣಾಮಕಾರಿಯಾಗಿ ಸ್ಪಂದಿಸಲು ಅಗತ್ಯ ಸೌಲಭ್ಯಗಳು, ತುರ್ತು ವ್ಯವಸ್ಥೆಗಳು ಹಾಗೂ ಸಿಬ್ಬಂದಿ ಸಿದ್ಧವಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಸೂಚಿಸಿದರು.

**ನಗರ ಸ್ವಚ್ಛತೆಗೆ ಲಿಟ್ಟರ್ ಪಿಕ್ಕರ್ ಖರೀದಿ:** ನಗರದ ಸ್ವಚ್ಛತೆ ಮತ್ತು ತ್ಯಾಜ್ಯ ನಿರ್ವಹಣೆಯನ್ನು ಮತ್ತಷ್ಟು ಬಲಪಡಿಸಲು ಅಗತ್ಯ ಸಂಖ್ಯೆಯಲ್ಲಿ ಲಿಟ್ಟರ್ ಪಿಕ್ಕರ್ ಗಳನ್ನು ಖರೀದಿಸುವ ಸಾಧ್ಯತೆಗಳ ಕುರಿತು ಪರಿಶೀಲನೆ ನಡೆಸಿ, ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಿದರು.

## ಮೇ ಮಾಹೆಯಲ್ಲಿಯೇ 2 ತಿಂಗಳ
# ಪಡಿತರ ವಿತರಣೆ

ತುಮಕೂರು

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯ ಪಡಿತರ ಚೀಟಿದಾರರಿಗೆ ಮೇ ಮತ್ತು ಜೂನ್ ಮಾಹೆಯ ಎರಡು ತಿಂಗಳ ಪಡಿತರವನ್ನು ಒಟ್ಟಿಗೆ ಮೇ–2026ರ ಮಾಹೆಯಲ್ಲಿ ವಿತರಿಸಲಾಗುವುದು ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರತಿ ಅಂತ್ಯೋದಯ ಪಡಿತರ ಚೀಟಿ(ಎಎವೈ)ಗೆ ಮಾಹೆಯಾನ 21 ಕೆ.ಜಿ.ಯಂತೆ 42 ಕೆ.ಜಿ. ರಾಗಿ; ಮಾಹೆಯಾನ 14 ಕೆ.ಜಿ.ಯಂತೆ 28 ಕೆ.ಜಿ. ಅಕ್ಕಿ ಸೇರಿದಂತೆ ಒಟ್ಟು 70 ಕೆ.ಜಿ. ರಾಗಿ ಹಾಗೂ ಅಕ್ಕಿಯನ್ನು ವಿತರಣೆ ಮಾಡಲಾಗುವುದು.

ಆದ್ಯತಾ(ಕೇಂದ್ರ) ಪಡಿತರ ಚೀಟಿ(ಪಿ.ಹೆಚ್.ಹೆಚ್.)ಯ ಪ್ರತಿ ಸದಸ್ಯರಿಗೆ ಮಾಹೆಯಾನ 3 ಕೆ.ಜಿ.ಯಂತೆ 6 ಕೆ.ಜಿ. ರಾಗಿ ಹಾಗೂ ಮಾಹೆಯಾನ 2 ಕೆ.ಜಿ.ಯಂತೆ 4 ಕೆ.ಜಿ. ಅಕ್ಕಿ ಸೇರಿದಂತೆ ಒಟ್ಟು 10 ಕೆ.ಜಿ. ರಾಗಿ ಹಾಗೂ ಅಕ್ಕಿಯನ್ನು ವಿತರಣೆ ಮಾಡಲಾಗುವುದು.

ಆದ್ಯತಾ(ರಾಜ್ಯ) ಪಡಿತರ ಚೀಟಿ(ಪಿ.ಹೆಚ್.ಹೆಚ್.)ಯ ಪ್ರತಿ ಸದಸ್ಯರಿಗೆ ಮಾಹೆಯಾನ 5 ಕೆ.ಜಿ.ಯಂತೆ ಒಟ್ಟು 10 ಕೆ.ಜಿ. ಅಕ್ಕಿಯನ್ನು ವಿತರಣೆ ಮಾಡಲಾಗುವುದು.

ಜಿಲ್ಲೆಯ ಪಡಿತರ ಚೀಟಿದಾರರು ಮೇ ಮತ್ತು ಜೂನ್ ಮಾಹೆಗೆ ಸಂಬಂಧಿಸಿದ 2 ತಿಂಗಳ ಪಡಿತರವನ್ನು ಮೇ–2026ರ ಮಾಹೆಯಲ್ಲಿಯೇ ಒಟ್ಟಿಗೆ ಪಡೆಯಬೇಕಾಗಿರುವುದರಿಂದ ಕಡ್ಡಾಯವಾಗಿ 2 ಬಾರಿ ಬಯೋಮೆಟ್ರಿಕ್ ನೀಡಿ ಪಡಿತರವನ್ನು ಪಡೆಯಬೇಕು. ಈ ಕಾರ್ಯಕ್ಕಾಗಿ ಪ್ರತಿ ದಿನ ಬೆಳಿಗ್ಗೆ 6 ರಿಂದ ರಾತ್ರಿ 10 ಗಂಟೆಯವರೆಗೆ ಆಹಾರ ಇಲಾಖೆಯ ಸರ್ವರ್ ಲಭ್ಯಗೊಳಿಸಿರುವುದರಿಂದ ಪಡಿತರ ಚೀಟಿದಾರರು ಬಯೋ ನೀಡಿ, ಮೇ 31ರೊಳಗಾಗಿ ಪಡಿತರ ಪಡೆಯಬಹುದಾಗಿದೆ.

ಪಡಿತರ ಚೀಟಿದಾರರು ತಮಗೆ ಹಂಚಿಕೆ ಮಾಡಿದ ಆಹಾರ ಧಾನ್ಯವನ್ನು ಕಾಳಸಂತೆಯಲ್ಲಿ ಮಾರಾಟ ಮಾಡಿದರೆ ಅಂತಹವರ ಪಡಿತರ ಚೀಟಿಯನ್ನು ರದ್ದುಪಡಿಸಲಾಗುವುದು. ಕಾಳಸಂತೆಯಲ್ಲಿ ಅನಧಿಕೃತವಾಗಿ ಆಹಾರ ಧಾನ್ಯವನ್ನು ದಾಸ್ತಾನು/ಸಾಗಾಣಿಕೆ ಮಾಡುವವರ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆ 1955ರಡಿ ಕ್ರಮ ಜರುಗಿಸಲಾಗುವುದು. ಪಡಿತರ ವಿತರಣೆ ಕುರಿತು ಏನಾದರೂ ದೂರುಗಳು ಇದ್ದಲ್ಲಿ ಕೇಂದ್ರ ಸಹಾಯವಾಣಿ ಸಂಖ್ಯೆ: 1967ಕ್ಕೆ ಕರೆ ಮಾಡಿ ದೂರು ಸಲ್ಲಿಸಬಹುದಾಗಿದೆ ಅಥವಾ ಹತ್ತಿರದ ಆಹಾರ ಕಚೇರಿಗೆ ಭೇಟಿ ನೀಡಿ ದೂರು ಸಲ್ಲಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಉಚಿತ ಕಣ್ಣಿನ ತಪಾಸಣಾ ಶಿಬಿರ

ಕೋಲಾರ

ಭಗವಂತ ನೀಡಿದ ಕಣ್ಣನ್ನು ಪ್ರತಿಯೊಬ್ಬರೂ ರಕ್ಷಣೆ ಮಾಡುವುದು ಕರ್ತವ್ಯ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನಾರಾಯಣಸ್ವಾಮಿ ಅವರು ತಿಳಿಸಿದರು.

ನಗರದ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಲ್ಲಿ ಗುರುವಾರ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಇಲಾಖೆ ಹಾಗೂ ಶಂಕರ ಕಣ್ಣಿನ ಆಸ್ಪತ್ರೆ ಬೆಂಗಳೂರು ವತಿಯಿಂದ ಆಯೋಜಿಸಿದ್ದ ತಾಲೂಕಿನ ವಿಕಲಚೇತನರಿಗೆ ಹಾಗೂ ಹಿರಿಯ ನಾಗರಿಕರಿಗೆ ಉಚಿತ ಕಣ್ಣಿನ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹುಟ್ಟಿನಿಂದಲೇ ದೃಷ್ಟಿಯನ್ನು ಕಳೆದುಕೊಂಡವರು ಪ್ರಪಂಚವನ್ನು ನೋಡುವ ಭಾಗ್ಯದಿಂದ ವಂಚಿತರಾಗಿದ್ದಾರೆ. ಆದರೆ ಬಹಳಷ್ಟು ಮಂದಿ ತಮ್ಮ ನಿರ್ಲಕ್ಷ್ಯದಿಂದ ಕಣ್ಣು ಕಳೆದುಕೊಂಡವರಿದ್ದಾರೆ. ಆದ ಕಾರಣ ದೃಷ್ಟಿ ಇದ್ದವರು ಕಣ್ಣಿನ ರಕ್ಷಣೆಗೆ ಒತ್ತು ನೀಡುವುದು ಅವಶ್ಯವೆಂದರು.

ಜಿಲ್ಲಾಡಳಿತ ವತಿಯಿಂದ ಆರೋಗ್ಯದ ರಕ್ಷಣೆಗಾಗಿ ಹಲವಾರು ಉಚಿತ ಶಿಬಿರಗಳನ್ನು ಮಾಡುತ್ತಾ ಬರುತ್ತಿದ್ದೆ. ಇದರ ಸದುಪಯೋಗವನ್ನು ಸಾರ್ವಜನಿಕರು ಬಳಸಿಕೊಳ್ಳುವ ಮೂಲಕ ತಮ್ಮ ದೇಹದ ಆರೋಗ್ಯವನ್ನು ಕಾಪಾಡಿಕೊಂಡು, ನಿಮ್ಮ ನಿರ್ಭೀತಿಯಿಂದ ಜೀವನವನ್ನು ನಡೆಸಲು ಮುಂದಾಗಿ ಎಂದು ಹೇಳಿದರು.

ಜಿಲ್ಲಾ ಅಂಗವಿಕಲ ಅಧಿಕಾರಿ ಮಂಜುಳಾ ಮಾತನಾಡಿ, ಬೆಂಗಳೂರು ಕುಂದಲಹಳ್ಳಿಯ ಶಂಕರ ಕಣ್ಣಿನ ಆಸ್ಪತ್ರೆ ವತಿಯಿಂದ ತಾಲೂಕಿನ ಅಂಗವಿಕಲರಿಗೆ ಹಾಗೂ ಹಿರಿಯ ನಾಗರಿಕರಿಗೆ ಉಚಿತ ನೇತ್ರ ತಪಾಸಣಾ ಶಿಬಿರ ಆಯೋಜಿಸಲಾಗಿದೆ. ಮುಂದಿನ ದಿನಗಳಲ್ಲಿ ಎಲ್ಲಾ ತಾಲೂಕಿನಲ್ಲೂ ಶಿಬಿರವನ್ನು ಏರ್ಪಡಿಸಲು ಮುಂದಾಗುತ್ತೇವೆ ಎಂದರು.

ಕಣ್ಣಿನ ರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ, ಇಲ್ಲಿ ತಪಾಸಣೆ ಒಳಗಾದವರಿಗೆ ಉಚಿತ ಸಲಹೆ, ಔಷಧಿ, ಕನ್ನಡಕ ನೀಡಲಾಗಿದೆ. ಹೆಚ್ಚಿನ ಚಿಕಿತ್ಸೆ ಬೇಕಾದವರಿಗೆ ಕಣ್ಣಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಲು ತಿಳಿಸಲಾಗಿದೆ ಎಂದು ನುಡಿದರು. 250ಕ್ಕೂ ಹೆಚ್ಚಿನ ಮಂದಿ ಶಿಬಿರದ ಪ್ರಯೋಜನ ಪಡೆದರು.

ಈ ಸಂದರ್ಭದಲ್ಲಿ ಜಿಲ್ಲಾ ನಿರೂಪಣಾಧಿಕಾರಿ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ನಾಗರತ್ನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಮುನಿರಾಜಪ್ಪ, ಶಂಕರ ಕಣ್ಣಿನ ಆಸ್ಪತ್ರೆಯ ವೈದ್ಯೆ ಡಾ.ಅನಿತಾ, ಡಾ.ಶ್ರಾವಣಿ, ಡಾ.ತೇಜಸ್ವಿನಿ, ತಾಲೂಕು ಸಂಯೋಜಕ ರಾಜೇಶ್, ಸುಪ್ರೀಂ ಸೇವಾ ಸಂಸ್ಥೆಯ ಸಂಸ್ಥಾಪಕ ಸುಪ್ರೀಂ, ಸಿಬ್ಬಂದಿಗಳು ಹಾಗೂ ವಿಕಲಚೇತನರು ಹಾಗೂ ಹಿರಿಯ ನಾಗರಿಕರು ಹಾಜರಿದ್ದರು.

# ಭೀಕರ ರಸ್ತೆ ಅಪಘಾತ: ಸ್ಥಳದಲ್ಲೇ ಮಹಿಳೆ ಸಾವು

ತಿಪಟೂರು

ತಿಪಟೂರಿನಿಂದ ಸೂಗೂರು ಕಡೆಗೆ ಬೈಕ್‌ನಲ್ಲಿ ತೆರಳುತ್ತಿದ್ದ ಮಹಿಳೆ ಭೀಕರ ರಸ್ತೆ ಅಪಘಾತದಲ್ಲಿ ಸ್ಥಳದಲ್ಲೇ ಮೃತಪಟ್ಟ ಘಟನೆ ಮತ್ತಿಘಟ್ಟ ಕಾಲುವೆ ಸಮೀಪ ನಡೆದಿದೆ.

ಮೃತರನ್ನು ರಾಮಕ್ಕ (60) ಎಂದು ಗುರುತಿಸಲಾಗಿದೆ. ಅವರು ತಮ್ಮ ಮಗ ಸತೀಶ್ ಅವರೊಂದಿಗೆ ಬೈಕ್‌ನಲ್ಲಿ ತಿಪಟೂರಿನಿಂದ ಸೂಗೂರು ಕಡೆಗೆ ತೆರಳುತ್ತಿದ್ದ ವೇಳೆ, ಹಿಂದಿನಿಂದ ವೇಗವಾಗಿ ಬಂದ ಬಿಳಿ ಬಣ್ಣದ ಹುಂಡೈ ಐ20 ಕಾರು ಬೈಕ್‌ಗೆ ಡಿಕ್ಕಿ ಹೊಡೆದಿದೆ ಎನ್ನಲಾಗಿದೆ.

ಅಪಘಾತದ ಪರಿಣಾಮ ಬೈಕ್ ಮತ್ತು ಸವಾರರನ್ನು ಸುಮಾರು ಒಂದು ಕಿಲೋಮೀಟರ್ ದೂರದವರೆಗೆ ಎಳೆದುಕೊಂಡು ಹೋಗಲಾಗಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ. ಘಟನೆಯ ಬಳಿಕ ಕಾರು ಚಾಲಕ ವಾಹನವನ್ನು ನಿಲ್ಲಿಸದೇ ಪರಾರಿಯಾಗಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಅಪಘಾತಕ್ಕೆ ಕಾರಣವಾದ ಕಾರಿನ ಮಾಲೀಕರು ರಾಜಕೀಯ ಸಂಪರ್ಕ ಹೊಂದಿರುವ ವ್ಯಕ್ತಿಯಾಗಿರುವುದರಿಂದ ಪೊಲೀಸರು ತಕ್ಷಣ ಪ್ರಕರಣ ದಾಖಲಿಸಲು ವಿಳಂಬ ಮಾಡುತ್ತಿದ್ದಾರೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಇದರಿಂದ ಸ್ಥಳದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿತ್ತು.

ಘಟನಾ ಸ್ಥಳಕ್ಕೆ ನೊಣವಿನಕೆರೆ ಪೊಲೀಸ್ ಠಾಣೆ ಅಧಿಕಾರಿಗಳು ಭೇಟಿ ನೀಡಿ ಗ್ರಾಮಸ್ಥರನ್ನು ಸಮಾಧಾನಪಡಿಸುವ ಪ್ರಯತ್ನ ನಡೆಸಿದರು.

# ಹಿಜಾಬ್‌ಗೆ ಅವಕಾಶ ಖಂಡಿಸಿ ಶ್ರೀರಾಮಸೇನೆ ಪ್ರತಿಭಟನೆ

ಕನಕಪುರ

ಶಿಕ್ಷಣ ಸಂಸ್ಥೆಗಳಲ್ಲಿ ಹಿಜಾಬ್‌ಗೆ ಅವಕಾಶ ನೀಡುವ ಕುರಿತು ರಾಜ್ಯ ಸರ್ಕಾರದ ನಿಲುವನ್ನು ಖಂಡಿಸಿ ಶ್ರೀರಾಮ ಸೇನೆ ಕಾರ್ಯಕರ್ತರು ನಗರದ ಚನ್ನಬಸಪ್ಪ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು. ಈ ವೇಳೆ ಸರ್ಕಾರದ ಸುತ್ತೋಲೆಯ ಪ್ರತಿಯನ್ನು ಹರಿದು ಆಕ್ರೋಶ ವ್ಯಕ್ತಪಡಿಸಲಾಯಿತು.



ಪ್ರತಿಭಟನೆಯ ನಂತರ ಕನಕಪುರ ತಹಶೀಲ್ದಾರ್ ಸಂಜಯ್ ಅವರ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು. ವಿವಾದಾತ್ಮಕ ನಿರ್ಧಾರವನ್ನು ತಕ್ಷಣ ಹಿಂಪಡೆಯುವಂತೆ ಆಗ್ರಹಿಸಿ ಮಾತನಾಡಿದ ನಾಗರ್ಜುನಗೌಡ, 2022ರಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯ ಹಿಜಾಬ್ ಸಮವಸ್ತ್ರದ ಭಾಗವಲ್ಲ ಎಂದು ತೀರ್ಪು ನೀಡಿದ್ದರೂ, ಇದೀಗ ಮತ್ತೆ ಈ ವಿಚಾರವನ್ನು ಮುಂದಿಟ್ಟುಕೊಂಡು ಸರ್ಕಾರ ತುಷ್ಟೀಕರಣ ರಾಜಕಾರಣ ನಡೆಸುತ್ತಿದೆ ಎಂದು ಆರೋಪಿಸಿದರು.

ಈ ನಿರ್ಧಾರವು ನ್ಯಾಯಾಂಗದ ತೀರ್ಪಿನ ಆತ್ಮಕ್ಕೆ ವಿರುದ್ಧವಾಗಿದ್ದು, ಶಿಕ್ಷಣ ಸಂಸ್ಥೆಗಳಲ್ಲಿ ಧಾರ್ಮಿಕ ಉದ್ವಿಗ್ನತೆ ಸೃಷ್ಟಿಸುವ ಅಪಾಯಕಾರಿ ನಡೆ ಎಂದು ಅವರು ಹೇಳಿದರು. ಶಾಲೆ ಮತ್ತು ಕಾಲೇಜುಗಳು ಶಿಕ್ಷಣ, ಶಿಸ್ತು ಹಾಗೂ ರಾಷ್ಟ್ರೀಯ ಏಕತೆಯ ಕೇಂದ್ರಗಳಾಗಬೇಕೇ ಹೊರತು ಧಾರ್ಮಿಕ ಪ್ರತ್ಯೇಕತೆಯ ವೇದಿಕೆಯಾಗಬಾರದು ಎಂದು ಅಭಿಪ್ರಾಯಪಟ್ಟರು.

ಮಾಜಿ ಪ್ರಧಾನಮಂತ್ರಿ ಇಂದಿರಾ ಗಾಂಧಿ ವಿದ್ಯಾರ್ಥಿಗಳಲ್ಲಿ ಜಾತಿ ಹಾಗೂ ಧರ್ಮ ಆಧಾರಿತ ಭೇದಭಾವ ಮೂಡಬಾರದು ಎಂಬ ಕಾರಣಕ್ಕಾಗಿ ಸಮವಸ್ತ್ರ ವ್ಯವಸ್ಥೆಗೆ ಮಹತ್ವ ನೀಡಿದ್ದರು. ಆದರೆ ಈಗ ಮತಬ್ಯಾಂಕ್ ರಾಜಕಾರಣಕ್ಕಾಗಿ ಸಮವಸ್ತ್ರ ವ್ಯವಸ್ಥೆಯನ್ನು ದುರ್ಬಲಗೊಳಿಸುವ ಪ್ರಯತ್ನ ನಡೆಯುತ್ತಿದೆ ಎಂದು ಅವರು ಟೀಕಿಸಿದರು.

ಶಾಲಾ ಅಭಿವೃದ್ಧಿ ಸಮಿತಿಗಳ ಅಧಿಕಾರವನ್ನು ಕಡೆಗಣಿಸಿ ಸರ್ಕಾರ ಏಕಪಕ್ಷೀಯ ನಿರ್ಧಾರ ಕೈಗೊಳ್ಳುತ್ತಿದೆ ಎಂದು ಆರೋಪಿಸಿದ ಅವರು, ಹಿಜಾಬ್‌ಗೆ ಅವಕಾಶ ನೀಡಿದರೆ ಭವಿಷ್ಯದಲ್ಲಿ ಶಾಲೆ–ಕಾಲೇಜು ಮತ್ತು ವಸತಿ ನಿಲಯಗಳಲ್ಲಿ ಧಾರ್ಮಿಕ ಪ್ರತ್ಯೇಕತೆ ಹಾಗೂ ಸಂಘರ್ಷಗಳಿಗೆ ಅವಕಾಶ ಸಿಗಬಹುದು ಎಂದು ಎಚ್ಚರಿಸಿದರು.

ಶಿವಧಾರ, ಜನಿವಾರ, ರುದ್ರಾಕ್ಷಿ ಮುಂತಾದ ಹಿಂದೂ ಆಚರಣೆಗಳನ್ನು ಹಿಜಾಬ್ ವಿಚಾರಕ್ಕೆ ಹೋಲಿಸುವುದು ತಪ್ಪು ದಾರಿ ತೋರಿಸುವ ಪ್ರಯತ್ನ ಎಂದು ಹೇಳಿದ ಅವರು, ಅವು ವೈಯಕ್ತಿಕ ನಂಬಿಕೆಗಳ ಭಾಗವಾಗಿದ್ದು ಸಮವಸ್ತ್ರ ನಿಯಮಗಳೊಂದಿಗೆ ಸಂಬಂಧ ಹೊಂದಿಲ್ಲ ಎಂದು ಸ್ಪಷ್ಟಪಡಿಸಿದರು.

ರಾಜ್ಯ ಸರ್ಕಾರ ತನ್ನ ನಿಲುವನ್ನು ಬದಲಿಸದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ಹಮ್ಮಿಕೊಳ್ಳುವುದರ ಜೊತೆಗೆ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಕಾನೂನು ಹೋರಾಟ ಆರಂಭಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಪರಮೇಶ್ ಗೌಡ, ವಿಭಾಗೀಯ ಅಧ್ಯಕ್ಷ ರಾಜೇಶ್ ಡಿ.ಎಂ., ಪ್ರಧಾನ ಕಾರ್ಯದರ್ಶಿ ನವೀನ್ ಕೆ.ಎನ್., ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಾಗರ್, ಜಿಲ್ಲಾ ಕಾರ್ಯದರ್ಶಿ ರಾಜಗೋಪಾಲ್, ಜಿಲ್ಲಾ ಪ್ರಮುಖ ಚೀರಣಕುಪ್ಪೆ ಕುಮಾರ್, ಕುಮಾರಸ್ವಾಮಿ ಸೇರಿದಂತೆ ಹಲವರು ಭಾಗವಹಿಸಿದ್ದರು.

# ‘ಕೃಷಿ ಹೊಂಡಕ್ಕೆ ತಂತಿ ಬೇಲಿ ಅಳವಡಿಸಿಕೊಳ್ಳಿ’

ಕೋಲಾರ

ಕೃಷಿ ಇಲಾಖೆಯಿಂದ ಕೃಷಿ ಭಾಗ್ಯ ಯೋಜನೆಯಡಿ ತಂತಿ ಬೇಲಿ ನಿರ್ಮಾಣಕ್ಕೆ ಸಾಮಾನ್ಯ ರೈತರಿಗೆ ಶೇ.40. ಮತ್ತು ಪ.ಜಾತಿ, ಪ.ಪಂಗಡ ರೈತರಿಗೆ ಶೇ.50 ರಷ್ಟು ಸಹಾಯಧನ ಸರ್ಕಾರದಿಂದ ನೀಡುತ್ತಿದ್ದು, 2023–24 ರಿಂದ 2025–26 ರವರಿಗೆ ಕೃಷಿ ಇಲಾಖೆಯ ಸಹಾಯಧನದಲ್ಲಿ ನಿರ್ಮಿಸಿರುವ ಕೃಷಿ ಹೊಂಡಗಳಿಗೆ ಕೆಲವು ರೈತರು ತಂತಿ ಬೇಲಿ ನಿರ್ಮಿಸಿಕೊಂಡಿರುವುದಿಲ್ಲ ಮತ್ತು ಕೃಷಿ ಹೋಂಡದ ಬಳಿ ಅಪಾಯ ಫಲಕವನ್ನು ಹಾಕಿರುವುದಿಲ್ಲ. ಕೂಡಲೇ ತಂತಿ ಬೇಲಿಯೊಂದಿಗೆ ಅಪಾಯದ ಫಲಕವನ್ನು ಕೃಷಿ ಹೊಂಡಗಳಿಗೆ ಅಳವಡಿಸಬೇಕು ಎಂದು ತಿಳಿಸಿದ್ದಾರೆ.

ಸರ್ಕಾರದಿಂದ ಅನುಷ್ಠಾನ ಮಾಡುತ್ತಿರುವ ಕೃಷಿ ಹೊಂಡಗಳಿಗೆ ತಂತಿ ಬೇಲಿ ನಿರ್ಮಾಣ ಮಾಡುವುದನ್ನು ಕಡ್ಡಾಯಮಾಡಿದ್ದು, ಸರ್ಕಾರದಿಂದ ಸಹಾಯದನ ನೀಡಲಾಗುತ್ತಿದೆ ಹಾಗೂ ಕೃಷಿ ಹೊಂಡಕ್ಕೆ ತಂತಿ ಬೇಲಿ ನಿರ್ಮಾಣ ಮಾಡಿದ ನಂತರವಷ್ಟೇ ಪೂರ್ಣಪ್ರಮಾಣದ ಸಹಾಯಧನ ಪಡೆಯಲು ಅರ್ಹರಾಗಿರುತ್ತಾರೆ. ಈ ಹಿಂದೆ ನಿರ್ಮಾಣ ಮಾಡಿರುವ ಕೃಷಿ ಹೊಂಡಕ್ಕೆ ತಂತಿ ಬೇಲಿ ಅಳವಡಿಸಿ ಜನರ ಹಾಗೂ ಜಾನುವಾರ ಸುರಕ್ಷತೆ ಕಾಪಾಡಬೇಕೆಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಕೃಷಿ ಹೊಂಡಕ್ಕೆ ತಂತಿ ಬೇಲಿ ಅಳವಡಿಸಿಕೊಳ್ಳಿ: ಕೃಷಿ ಹೊಂಡ ದಿಂದ ಹಾಗುವ ಪ್ರಾಣ ಹಾನಿಯನ್ನು ತಡೆಯಲು ಈಗಾಗಲೇ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಕೃಷಿ ಭಾಗ್ಯ ಯೋಜನೆಯ ಎಲ್ಲಾ ರೈತ ಫಲಾನುಭವಿಗಳು ಕಡ್ಡಾಯವಾಗಿ ತಂತಿ ಬೇಲಿ ಅಳವಡಿಸಿಕೊಂಡು ಆಗುವ ದುರಂತಗಳಿಂದ ತಪ್ಪಿಸಿಕೊಳ್ಳಬೇಕೆಂದು ಮನವಿ ಮಾಡಿದ್ದಾರೆ.

ಜಿಲ್ಲೆಯಲ್ಲಿ ಕೃಷಿ ಹೊಂಡಗಳನ್ನು ನರೇಗಾ, ಕೃಷಿ ಭಾಗ್ಯ, ಪಿಎಂಕೆಎಸ್‌ವೈ–01 ರಾಷ್ಟ್ರೀಯ ತೋಟಗಾರಿಕಾ ಮಿಷನ್ ಯೋಜನೆಗಳಲ್ಲಿ ಮತ್ತು ಕೆಲವು ರೈತರು ಸ್ವಂತವಾಗಿ ನಿರ್ಮಿಸಿಕೊಂಡಿದ್ದಾರೆ. ತಂತಿ ಬೇಲಿ ನಿರ್ಮಾಣ ಮಾಡದಿದ್ದಲ್ಲಿ ಆಗುವ ಪ್ರಾಣ ಹಾನಿಗಳಿಗೆ ರೈತ ಫಲಾನುಭವಿಗಳೇ ಸಂಪೂರ್ಣ ಜವಬ್ದಾರರಾಗಿರುತ್ತಾರೆಂದು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಯುವನಿಧಿ ಯೋಜನೆ ಯುವ ಸಮೂಹಕ್ಕೆ ವರ: ಯಲುವಳ್ಳಿ ಎನ್.ರಮೇಶ್

ಚಿಕ್ಕಬಳ್ಳಾಪುರ

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಯುವನಿಧಿ ಯೋಜನೆ ಯುವಕರ ಉಜ್ವಲ ಭವಿಷ್ಯಕ್ಕೆ ನೆರವಾಗುತ್ತಿರುವ ಮಹತ್ವದ ಯೋಜನೆಯಾಗಿದ್ದು, ಜಿಲ್ಲೆಯ ಶೇ.98.13 ರಷ್ಟು ಅರ್ಹ ಉದ್ಯೋಗಾಕಾಂಕ್ಷಿಗಳನ್ನು ಯೋಜನೆಯಡಿ ನೋಂದಾಯಿಸಿ ಸೌಲಭ್ಯ ನೀಡಲಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಯಲುವಳ್ಳಿ ಎನ್. ರಮೇಶ್ ತಿಳಿಸಿದ್ದಾರೆ.



ನಗರದ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜುದಲ್ಲಿ ಜಿಲ್ಲಾ ಉದ್ಯೋಗ ವಿನಿಯಮ ಕಚೇರಿ, ಜಿಲ್ಲಾ ಹಾಗೂ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಮತ್ತು ಕಾಲೇಜಿನ ಸಹಯೋಗದಲ್ಲಿ ಆಯೋಜಿಸಿದ್ದ "ಯುವನಿಧಿ ಅರಿವು ಕಾರ್ಯಾಗಾರ"ವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಯುವನಿಧಿ ಯೋಜನೆಗೆ ಅರ್ಹರಾಗಿರುವ 6200 ಅಭ್ಯರ್ಥಿಗಳ ಪೈಕಿ 6084 ಮಂದಿಯನ್ನು ಈಗಾಗಲೇ ನೋಂದಾಯಿಸಲಾಗಿದ್ದು, ಇದು ಶೇ.98.13 ಸಾಧನೆಯಾಗಿದೆ ಎಂದು ಹೇಳಿದರು. ನೋಂದಾಯಿತರ ಪೈಕಿ 5058 ಅಭ್ಯರ್ಥಿಗಳಿಗೆ ಆರ್ಥಿಕ ಸೌಲಭ್ಯ ಬಿಡುಗಡೆ ಮಾಡಲಾಗಿದ್ದು, ಶೇ.83.14 ಆರ್ಥಿಕ ಸಾಧನೆ ದಾಖಲಿಸಲಾಗಿದೆ ಎಂದರು.

ಇದುವರೆಗೆ ಒಟ್ಟು ರೂ.13,71,48,000 ಮೊತ್ತವನ್ನು ಡಿಬಿಟಿ ಮೂಲಕ ಉದ್ಯೋಗಾಕಾಂಕ್ಷಿಗಳ ಖಾತೆಗಳಿಗೆ ಜಮೆ ಮಾಡಲಾಗಿದೆ ಎಂದು ಮಾಹಿತಿ ನೀಡಿದರು. ಉಳಿದ ಅರ್ಹ ಫಲಾನುಭವಿಗಳಿಗೂ ಶೀಘ್ರದಲ್ಲೇ ಸೌಲಭ್ಯ ವಿತರಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳು ಬಡವರು, ಮಧ್ಯಮ ವರ್ಗದವರು ಹಾಗೂ ಸಂಕಷ್ಟದಲ್ಲಿರುವ ಕುಟುಂಬಗಳಿಗೆ ಬಹಳ ಸಹಕಾರಿಯಾಗಿವೆ ಎಂದು ಹೇಳಿದರು. ಇನ್ನೂ ಯಾವುದೇ ಅರ್ಹ ಫಲಾನುಭವಿಗಳು ಯೋಜನೆಗಳಿಂದ ವಂಚಿತರಾಗಿದ್ದರೆ ಸಂಬಂಧಪಟ್ಟ ಇಲಾಖೆಗಳನ್ನು ಸಂಪರ್ಕಿಸಿ ನೋಂದಾಯಿಸಿಕೊಳ್ಳುವಂತೆ ಮನವಿ ಮಾಡಿದರು.

ಹಿಂದೆ ದಿವಂಗತ ದೇವರಾಜ ಅರಸು ಅವರು ಜಾರಿಗೆ ತಂದಿದ್ದ ನಿರುದ್ಯೋಗ ಭತ್ಯೆ ಯೋಜನೆಯ ಮುಂದುವರಿದ ರೂಪವೇ ಇಂದಿನ ಯುವನಿಧಿ ಯೋಜನೆ ಎಂದು ವಿವರಿಸಿದರು. ಯೋಜನೆಯಡಿ ಪದವೀಧರರಿಗೆ ರೂ.3000 ಹಾಗೂ ಡಿಪ್ಲೊಮಾ ಪೂರೈಸಿದವರಿಗೆ ರೂ.1500 ನೆರವು ನೀಡಲಾಗುತ್ತಿದೆ ಎಂದರು.

ಅಭ್ಯರ್ಥಿಗಳು ಆನ್‌ಲೈನ್ ಮೂಲಕ ನಿರಂತರವಾಗಿ ನೋಂದಣಿ ಮಾಡಿಕೊಳ್ಳಬಹುದಾಗಿದ್ದು, ಯಾವುದೇ ತೊಂದರೆ ಇದ್ದರೆ ಜಿಲ್ಲಾ ಉದ್ಯೋಗ ವಿನಿಯಮ ಕಚೇರಿಯನ್ನು ಸಂಪರ್ಕಿಸಬಹುದು ಎಂದು ತಿಳಿಸಿದರು.

ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ಓದುತ್ತಿರುವ ಅನೇಕ ವಿದ್ಯಾರ್ಥಿಗಳು ಗ್ರಾಮೀಣ ಹಾಗೂ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಂದ ಬಂದವರಾಗಿದ್ದಾರೆ. ಇವರಲ್ಲಿ ಸುಮಾರು 40ಕ್ಕೂ ಹೆಚ್ಚು ವಿದ್ಯಾರ್ಥಿಗಳು ತಂದೆ–ತಾಯಿಯನ್ನು ಕಳೆದುಕೊಂಡಿದ್ದಾರೆ ಎಂದು ತಿಳಿದು, ಅವರ ಕಾಲೇಜು ಶುಲ್ಕವನ್ನು ವೈಯಕ್ತಿಕವಾಗಿ ಭರಿಸುವುದಾಗಿ ಯಲುವಳ್ಳಿ ಎನ್. ರಮೇಶ್ ಭರವಸೆ ನೀಡಿದರು.

ಜಿಲ್ಲಾ ಉದ್ಯೋಗಾಧಿಕಾರಿ ಪ್ರಸಾದ್ ಎಂ ಮಾತನಾಡಿ, ಕೌಶಲ್ಯಾಭಿವೃದ್ಧಿ ಇಲಾಖೆಯ ವಿವಿಧ ತರಬೇತಿ ಕಾರ್ಯಕ್ರಮಗಳೊಂದಿಗೆ ಯುವನಿಧಿ ಹಣವನ್ನು ಉದ್ಯೋಗ ಅರ್ಜಿ ಸಲ್ಲಿಕೆ ಮತ್ತು ಸಂದರ್ಶನಗಳಿಗೆ ಬಳಸಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

ಚಿಕ್ಕಬಳ್ಳಾಪುರ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಎನ್. ಜಯರಾಮ್ ಮಾತನಾಡಿ, ಸ್ವಾಮಿ ವಿವೇಕಾನಂದ ಜಯಂತಿಯಂದು 2024ರಲ್ಲಿ ಯುವನಿಧಿ ಯೋಜನೆ ಆರಂಭಿಸಲಾಯಿತು ಎಂದು ತಿಳಿಸಿದರು. ವಿದ್ಯಾವಂತ ಯುವಕರು ಉದ್ಯೋಗ ಪಡೆಯಲು ಉತ್ತೇಜನ ನೀಡುವುದೇ ಯೋಜನೆಯ ಮುಖ್ಯ ಉದ್ದೇಶ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಯುವನಿಧಿ ಯೋಜನೆ, ಉದ್ಯೋಗ ಮೇಳ, ಉದ್ಯೋಗ ಪತ್ರ, ಸ್ಟಡಿ ಸರ್ಕಲ್ ಹಾಗೂ ಯುವನಿಧಿ ಪ್ಲಸ್ ಕುರಿತು ಬಿತ್ತಿಪತ್ರಗಳು ಮತ್ತು ಕರಪತ್ರಗಳನ್ನು ವಿದ್ಯಾರ್ಥಿಗಳಿಗೆ ವಿತರಿಸಿ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಪ್ರಾಂಶುಪಾಲ ಚಂದ್ರಯ್ಯ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರಾದ ನಾರಾಯಣಸ್ವಾಮಿ, ಲಕ್ಷ್ಮಣ್, ವೆಂಕಟಲಕ್ಷ್ಮಮ್ಮ, ಬಾಲಕೃಷ್ಣ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಭಾರೀ ಮಳೇಗೆ 104 ಸಾವು: 21 ಜನರಿಗೆ ಗಾಯ

ಲಕ್ನೋ

ಉತ್ತರ ಪ್ರದೇಶದಾದ್ಯಂತ ಭಾರೀ ಮಳೆ ಮತ್ತು ಬಿರುಗಾಳಿಗೆ ಈವರೆಗೆ 104 ಜನರು ಸಾವನ್ನಪ್ಪಿದ್ದಾರೆ. ಪ್ರಯಾಗ್‌ರಾಜ್‌ನಲ್ಲೇ ಅತ್ಯಧಿಕ 21 ಜನ ಬಲಿಯಾಗಿದ್ದಾರೆ.

ಮಳೆ ಹೊಡೆತಕ್ಕೆ 53 ಜನರಿಗೆ ಗಾಯಗಳಾಗಿವೆ. 98 ಮನೆಗಳು ಹಾನಿಗೊಂಡಿವೆ. 130 ಜಾನುವಾರುಗಳು ಸಾವಿಗೀಡಾಗಿವೆ. ಮರಗಳು ಮತ್ತು ವಿದ್ಯುತ್ ಕಂಬಗಳು ಧರೆಗುರುಳಿವೆ. ರಾಜ್ಯಾದ್ಯಂತ ಹಲವಾರು ಮನೆಗಳು ಹಾನಿಗೊಳಗಾಗಿವೆ. ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಸಾವಿಗೆ ಸಂತಾಪ ಸೂಚಿಸಿದ್ದು, 24 ಗಂಟೆಗಳ ಒಳಗೆ ಆರ್ಥಿಕ ನೆರವು ನೀಡಲು ಆದೇಶಿಸಿದ್ದಾರೆ.

ಭದೋಹಿಯಲ್ಲಿ 18, ಮಿರ್ಜಾಪುರದಲ್ಲಿ 15, ಫತೇಪುರ್‌ನಲ್ಲಿ 10, ಉನ್ನಾವ್ ಮತ್ತು ಬದೌನ್‌ನಲ್ಲಿ ತಲಾ ಆರು, ಪ್ರತಾಪ್‌ಗಢ ಮತ್ತು ಬರೇಲಿಯಲ್ಲಿ ತಲಾ ನಾಲ್ಕು ಮತ್ತು ಸೀತಾಪುರ, ರಾಯ್‌ಬರೇಲಿ ಮತ್ತು ಚಂದೌಲಿಯಲ್ಲಿ ತಲಾ ಇಬ್ಬರು ಸಾವನ್ನಪ್ಪಿದ್ದಾರೆ. ಕಾನ್ಪುರ್ ದೇಹತ್, ಹರ್ದೋಯಿ ಮತ್ತು ಸಂಭಾಲ್‌ನಿಂದಲೂ ಎರಡು ಸಾವುಗಳು ವರದಿಯಾಗಿವೆ.

# ನೊಳಂಬ ಸಮುದಾಯದ ಚರಿತ್ರೆ ಅಧ್ಯಯನ ಅಗತ್ಯ

ತುಮಕೂರು

ನೊಳಂಬ ಸಮುದಾಯದ ಚರಿತ್ರೆ ಮತ್ತು ಸಂಸ್ಕೃತಿಯ ಬಗ್ಗೆ ಹೆಚ್ಚಿನ ಅಧ್ಯಯನ ನಡೆಯುವ ಅಗತ್ಯವಿದೆ ಎಂದು ತಿಪಟೂರು ಶಾಸಕ ಕೆ. ಷಡಕ್ಷರಿ ಅಭಿಪ್ರಾಯ ವ್ಯಕ್ತಪಡಿಸಿದರು.

ತುಮಕೂರು ವಿಶ್ವವಿದ್ಯಾನಿಲಯದ ಡಾ. ಶ್ರೀ ಶಿವಕುಮಾರ ಮಹಾಸ್ವಾಮೀಜಿ ಸಭಾಂಗಣದಲ್ಲಿ ತುಮಕೂರು ವಿವಿ ಮತ್ತು ಬೆಂಗಳೂರಿನ ನೊಳಂಬ ಲಿಂಗಾಯತ ಸಂಘದ ಜಂಟಿ ಆಶ್ರಯದಲ್ಲಿ ಏರ್ಪಡಿಸಿದ್ದ ನೊಳಂಬ ಸಂಸ್ಕೃತಿ ಅಧ್ಯಯನ ಪೀಠದ ಉದ್ಘಾಟನಾ ಕಾರ್ಯಕ್ರಮ ಹಾಗೂ ನೊಳಂಬ ಸಂಸ್ಕೃತಿ ಸಂಪದ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ನೊಳಂಬರ ಚರಿತ್ರೆ, ಸಂಸ್ಕೃತಿಯ ಹಾಗೂ ಸಮುದಾಯದ ಇತಿಹಾಸದ ಬಗ್ಗೆ ಸಂಪನ್ಮೂಲ ವ್ಯಕ್ತಿಗಳ ಮೂಲಕ ಜನರಿಗೆ ತಲುಪಿಸುವ ಕಾರ್ಯ ಅತ್ಯಗತ್ಯ ಎಂದ ಅವರು, ನೊಳಂಬರ ಇತಿಹಾಸದ ಬಗ್ಗೆ ಇಂದಿನ ಪೀಳಿಗೆಗೆ ಮಾತ್ರವಲ್ಲದೆ ಸ್ವತಃ ಸಮುದಾಯದವರಿಗೂ ಹೆಚ್ಚಿನ ಅರಿವಿಲ್ಲದಿರುವುದು ವಿಷಾದನೀಯ ಸಂಗತಿ ಎಂದರು.

ಈ ಸಮುದಾಯವು ಕೇವಲ ಆಡಳಿತವಷ್ಟೇ ಅಲ್ಲದೆ, ಸಾಮಾಜಿಕ ಕ್ಷೇತ್ರಕ್ಕೂ ತನ್ನದೇ ಆದ ಕೊಡುಗೆ ನೀಡಿದೆ. ಶಾಸಕರಾದ ನಂತರವಷ್ಟೇ ತಮಗೆ ಜಾತಿಗಳ ಬಗ್ಗೆ ಹೆಚ್ಚಿನ ಅರಿವು ಉಂಟಾಯಿತು ಎಂದು ಅವರು ಮಾರ್ಮಿಕವಾಗಿ ನುಡಿದರು.

ವಿಚಾರ ಸಂಕಿರಣದ ಮೂಲಕ ಹೊಸ ಸಂಶೋಧನೆಗಳು ಮತ್ತು ಆವಿಷ್ಕಾರಗಳು ಬೆಳಕಿಗೆ ಬರಬೇಕು. ಸಂಶೋಧನೆಯ ಫಲಿತಾಂಶಗಳನ್ನು ಮುಂದಿನ ಪೀಳಿಗೆಗೆ ಅರಿವು ಮೂಡಿಸಲು ಬಳಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ನೊಳಂಬ ಸಮುದಾಯವು ಸುಮಾರು 30 ಲಕ್ಷಕ್ಕೂ ಹೆಚ್ಚು ಜನಸಂಖ್ಯೆಯನ್ನು ಹೊಂದಿದ್ದು, ಒಂದು ಬಲಿಷ್ಠ ಸಮುದಾಯವಾಗಿದೆ. ಈ ಸಮುದಾಯದಿಂದ ಈ ಹಿಂದೆ ಟಿ.ಎಂ. ಮಂಜುನಾಥ್ ಅವರು ಪ್ರಥಮವಾಗಿ ಮಂತ್ರಿಯಾಗಿದ್ದರು. ನಂತರ ಮಾಧುಸ್ವಾಮಿ ಅವರು ಮಂತ್ರಿಯಾಗಿ ಸೇವೆ ಸಲ್ಲಿಸಿದ್ದಾರೆ. ರಾಜಕೀಯದಲ್ಲಿ ಸೋಲು–ಗೆಲುವು ಸಾಮಾನ್ಯವಾಗಿದ್ದರೂ, ಸಮಾಜಕ್ಕೆ ಕೊಡುಗೆ ನೀಡುವುದು ಮುಖ್ಯ ಎಂದರು.

ತುಮಕೂರು ವಿಶ್ವವಿದ್ಯಾನಿಲಯದ ಉತ್ತಮ ಪರಿಸರದಲ್ಲಿ ಇಂತಹ ಅರ್ಥಪೂರ್ಣ ವಿಚಾರಗಳು ಚರ್ಚೆಯಾಗುತ್ತಿರುವುದು ಶ್ಲಾಘನೀಯ ಎಂದು ಹರ್ಷ ವ್ಯಕ್ತಪಡಿಸಿದ ಅವರು, ನೊಳಂಬ ಸಂಸ್ಕೃತಿ ಅಧ್ಯಯನ ಪೀಠಕ್ಕೆ 5 ಲಕ್ಷ ರೂ ನೀಡುವುದಾಗಿ ಭರವಸೆ ನೀಡಿದರು.

ಅಧ್ಯಯನ ಪೀಠದ ಪ್ರೇರಣಾ ಲಾಂಛನ ಅನಾವರಣಗೊಳಿಸಿದ ಮಾಜಿ ಸಚಿವ ಜೆ.ಸಿ. ಮಾಧುಸ್ವಾಮಿ ಮಾತನಾಡಿ, ನಮ್ಮ ಸಂಸ್ಕೃತಿ ಮತ್ತು ಇತಿಹಾಸವನ್ನು ಮರೆತು ಬದುಕುತ್ತಿದ್ದೇವೆ. ಇತಿಹಾಸ ಗೊತ್ತಿಲ್ಲದವನು ವಿಜ್ಞಾನ ಓದಲು ಸಾಧ್ಯವಿಲ್ಲ. ಹಾಗಾಗಿ, ನಮ್ಮ ಮಕ್ಕಳಿಗೆ ನಾವು ಯಾರು ಮತ್ತು ನಮ್ಮ ಇತಿಹಾಸವೇನು ಎಂಬ ಅರಿವು ಮೂಡಿಸುವ ನಿಟ್ಟಿನಲ್ಲಿ ನೊಳಂಬ ಅಧ್ಯಯನ ಪೀಠವು ಮಹತ್ವದ ಪಾತ್ರ ವಹಿಸಲಿದೆ ಎಂದರು.

ಈ ಅಧ್ಯಯನ ಪೀಠವು ವಿಶ್ವವಿದ್ಯಾನಿಲಯ ಸ್ವಯಂ ಪ್ರೇರಿತವಾಗಿ ಕೈಗೊಂಡ ಕಾರ್ಯವಲ್ಲ.

ಬದಲಿಗೆ, ಪರಶಿವಮೂರ್ತಿ ಹಾಗೂ ಯೋಗೇಶ್ವರಪ್ಪ ಅವರಂತಹ ಶಿಕ್ಷಣ ತಜ್ಞರ ನಿರಂತರ ಕಾಳಜಿಯ ಫಲವಾಗಿದೆ. ನಾನು ಸಚಿವನಾಗಿದ್ದ ಅವಧಿಯಲ್ಲಿ ಈ ಇಬ್ಬರು ಗಣ್ಯರು ಪೀಠದ ಅವಶ್ಯಕತೆಯ ಬಗ್ಗೆ ಮನವರಿಕೆ ಮಾಡಿಕೊಟ್ಟಿದ್ದರು ಎಂದು ಹೇಳಿದರು.

ಸಮಾಜದಲ್ಲಿ ಅಸೂಯೆ ಹೆಚ್ಚಾಗುತ್ತಿದೆ. ಬೇರೆಯವರ ಕಾಲು ಎಳೆಯುವ ಬದಲು, ಸಾಧನೆ ಮಾಡುವವರಿಗೆ ಬೆನ್ನುತಟ್ಟುವ ಸಂಸ್ಕೃತಿ ಬೆಳೆಯಬೇಕು. ನೊಳಂಬ ಸಂಸ್ಥಾನದ ಇತಿಹಾಸವನ್ನು ಬರಿ ಕಥೆಯಾಗಿ ಕೇಳುವ ಬದಲು, ಇಂದಿನ ಸ್ಥಿತಿಗತಿಗಳಿಗೆ ಅನುಗುಣವಾಗಿ ಅದರ ಸಂಶೋಧನೆ ನಡೆಯಬೇಕು ಎಂದರು.

# ಮಾಸಿಕ ಸಭೆ

ತಿಪಟೂರು

ನಗರದ ನಿವೃತ್ತ ನೌಕರ ಸಂಘದ ಕಚೇರಿಯಲ್ಲಿ ನಡೆದ ತಾಲ್ಲೂಕಿನ ನಿವೃತ್ತ ನೌಕರರ ಸಂಘದ ಮಾಸಿಕ ಸಭೆಯಲ್ಲಿ ಬಸವಣ್ಣ ವಿಚಾರಧಾರೆ ಕುರಿತು ಉಪನ್ಯಾಸ ಕಾರ್ಯಕ್ರಮ ನಡೆಯಿತು.

ಕೇಂದ್ರ ಕನ್ನಡ ಸಾಹಿತ್ಯ ವೇದಿಕೆಯ ಸಂಸ್ಥಾಪಕ ಅಧ್ಯಕ್ಷ ಕೊಟ್ರೇಶ್ ಎಸ್. ಉಪ್ಪಾರ್ ಮಾತನಾಡಿ ಬಸವಣ್ಣ ನಿರ್ದಿಷ್ಟ ಜಾತಿಗೆ ಸೀಮಿತಗೊಳಿಸಿ ದೇವರೆಂದು ಪೂಜಿಸುವುದು ಅವರ ಮೂಲ ತತ್ವಗಳಿಗೆ ವಿರುದ್ಧ ಎಂದು ವಿಷಾದ ವ್ಯಕ್ತಪಡಿಸಿದರು.

ಜಾತಿ, ವರ್ಣ, ಲಿಂಗ ಭೇದಗಳನ್ನು ತಿರಸ್ಕರಿಸಿ, ಮೌಢ್ಯಗಳನ್ನು ವಿರೋಧಿಸಿ ಸಾಮಾಜಿಕ ಸಮಾನತೆಯನ್ನು ಸಾರಿದ ಮಹಾನ್ ಮಾನವತಾವಾದಿಯನ್ನು ಸ್ಥಾವರ ರೂಪದಲ್ಲಿ ಕಾಣುವುದು ವಿಪರ್ಯಾಸ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಘದ ಅಧ್ಯಕ್ಷ ಕೆ.ಎಮ್. ರಾಜಣ್ಣ ಬಸವಣ್ಣರು ಸಾಮಾಜಿಕ ಬದಲಾವಣೆಯ ಹರಿಕಾರರಾಗಿದ್ದು, ಅವರ ತತ್ವಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿಶ್ವ ಕಾರ್ಮಿಕ ದಿನಾಚರಣೆಯ ಅಂಗವಾಗಿ ಪೌರ ಕಾರ್ಮಿಕ ನಾಗರಾಜು ಗೌರವಿಸಲಾಯಿತು.

ಉಪನ್ಯಾಸದಲ್ಲಿ ಹೆಚ್.ಜಿ.ನರಸಿಂಹಮೂರ್ತಿ, ಪಿ.ಆರ್. ಗುರುಸ್ವಾಮಿ, ಹೆಚ್.ಎಸ್. ಮಂಜಪ್ಪ ಡಿ.ಎಸ್. ಮರುಳಪ್ಪ, ಕೇಂದ್ರ ಸಾಹಿತ್ಯ ವೇದಿಕೆಯ ತಾ ಅಧ್ಯಕ್ಷೆ ಲತಾಮಣಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ನಗರದ ನಿವೃತ್ತ ನೌಕರ ಸಂಘದ ಕಚೇರಿಯಲ್ಲಿ ಬಸವಣ್ಣ ವಿಚಾರಧಾರೆ ಕುರಿತು ಉಪನ್ಯಾಸ ಕಾರ್ಯಕ್ರಮ.

# ‘ನೀಟ್ ಪರೀಕ್ಷೆ ವೈಫಲ್ಯಕ್ಕೆ ಕೇಂದ್ರ ಸರ್ಕಾರವೇ ಹೊಣೆ’

ತುಮಕೂರು

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ತಡೆಯುವಲ್ಲಿ, ಪರೀಕ್ಷಾ ಪಾವಿತ್ರತೆ ಕಾಪಾಡುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ ಎಂದು ಯುವ ಕಾಂಗ್ರೆಸ್ ಮುಖಂಡರು ಗುರುವಾರ ನಗರದಲ್ಲಿ ಪ್ರತಿಭಟನೆ ನಡೆಸಿ ಈ ವೈಫಲ್ಯಕ್ಕೆ ಕೇಂದ್ರ ಸರ್ಕಾರವೇ ಹೊಣೆ ಎಂದು ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಈ ಬಗ್ಗೆ ಸಂಸದರು ಸಂಸತ್ತಿನಲ್ಲಿ ಧ್ವನಿ ಮಾಡಬೇಕು ಎಂದು ಒತ್ತಾಯಿಸಿ ತುಮಕೂರು ಸಂಸದರ ಕಚೇರಿಗೆ ಮುತ್ತಿಗೆ ಹಾಕಲು ಹೊರಟ ಕಾರ್ಯಕರ್ತರನ್ನು ಪೊಲೀಸರು ತಡೆದು ವಶಕ್ಕೆ ಪಡೆದರು.

ಬಿಜಿಎಸ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದ ಯುವ ಕಾಂಗ್ರೆಸ್ ಕಾರ್ಯಕರ್ತರು ನೀಟ್ ಪರೀಕ್ಷೆಯನ್ನು ಸಮರ್ಪಕವಾಗಿ ನಡೆಸುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ. ಲಕ್ಷಾಂತರ ವಿದ್ಯಾರ್ಥಿಗಳ ಕನಸು, ಭವಿಷ್ಯ ಕೇಂದ್ರ ಸರ್ಕಾರ ಹಾಳು ಮಾಡಿದೆ ಎಂದು ಕಾರ್ಯಕರ್ತರು ಆರೋಪಿಸಿದರು. ಬಿತ್ತಿ ಪತ್ರ ಹಿಡಿದು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಇಲಾಹಿ ಸಿಕಂದರ್ ಮಾತನಾಡಿ, ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ನೀಟ್ ಪರೀಕ್ಷೆ ಮಾತ್ರವಲ್ಲ, ಹಲವು ಪರೀಕ್ಷೆಗಳ ಪ್ರಶ್ನೆ ಪತ್ರಿಕೆ ಲೀಕ್ ಮಾಡುವ ದೊಡ್ಡ ದಂಧೆಯೇ ನಡೆಯುತ್ತಿದೆ.

ಸರ್ಕಾರದ ವಿವಿಧ ಹುದ್ದೆಗಳ ನೇಮಕಾತಿ ಪರೀಕ್ಷೆಗಳಲ್ಲೂ ಅಕ್ರಮಗಳು ನಡೆದ ಆರೋಪಗಳಿವೆ. ಮೋದಿ ಸರ್ಕಾರ ಬಡವರ ಪರವಾಗಿಲ್ಲ, ಬಂಡವಾಳಶಾಹಿಗಳ ಪರವಿದೆ ಎಂದು ಟೀಕೆ ಮಾಡಿದರು.

ದೇಶದಲ್ಲಿ ಸುಮಾರು 24 ಲಕ್ಷ, ರಾಜ್ಯದಲ್ಲಿ 1.4 ಲಕ್ಷ ವಿದ್ಯಾರ್ಥಿಗಳು ನೀಟ್ ಮೂಲಕ ತಮ್ಮ ವೈದ್ಯಕೀಯ ಪದವಿಯ ಕನಸು ಕಂಡಿದ್ದರು. ಅಷ್ಟೂ ಜನರಿಗೆ ಮೋದಿ ಸರ್ಕಾರ ಅನ್ಯಾಯ ಮಾಡಿದೆ. ನೀಟ್ ಪ್ರಶ್ನೆ ಪತ್ರಿಕೆ ಬಹಿರಂಗ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಲಾಗಿದೆ. ಪ್ರಾಮಾಣಿಕ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಬೇಕು. ಇನ್ನು ಮುಂದೆ ನೀಟ್ ಮತ್ತಿತರ ಪರೀಕ್ಷೆಗಳು ಪ್ರಾಮಾಣಿಕವಾಗಿ ನಡೆಸಬೇಕು ಎಂದು ಇಲಾಹಿ ಸಿಕಂದರ್ ಒತ್ತಾಯಿಸಿದರು.

20/05/2026

ಭಾರತ ಸಾರಥಿ
BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಮುಂಬೈನಲ್ಲಿ 17ರಂದು 'ಶ್ರೀ ರಾಜಮಾತಂಗಿ ಮಹಾಯಾಗ'

ಬೆಂಗಳೂರು

ಸನಾತನ ಸಂಸ್ಥೆ ವತಿಯಿಂದ ಭಾರತದ ಆಧ್ಯಾತ್ಮಿಕ ರಕ್ಷಣೆ ಮತ್ತು ರಾಷ್ಟ್ರದ ಸರ್ವಾಂಗೀಣ ಪ್ರಗತಿಯ ಸಂಕಲ್ಪದೊಂದಿಗೆ 'ಶ್ರೀ ರಾಜಮಾತಂಗಿ ಮಹಾಯಾಗ'ವನ್ನು ಮುಂಬೈನಲ್ಲಿ ಆಯೋಜಿಸಲಾಗಿದೆ. ಮೂರನೇ ಮಹಾಯುದ್ಧದ ಆತಂಕದ ನಡುವೆಯೂ ರಾಷ್ಟ್ರಕ್ಕೆ ಆಧ್ಯಾತ್ಮಿಕ ಸುರಕ್ಷಾ ಕವಚ ಅಗತ್ಯವಿದೆ ಎಂಬ ಉದ್ದೇಶದಿಂದ ಈ ಮಹಾಯಾಗ ಹಮ್ಮಿಕೊಳ್ಳಲಾಗಿದೆ.

ಭಾನುವಾರ, ಮೇ 17, 2026 ರಂದು ಶ್ರೀ ಸಿದ್ಧಿವಿನಾಯಕ ದೇವಸ್ಥಾನ ಹಿಂಭಾಗದಲ್ಲಿರುವ ನರ್ದುಲ್ಲಾ ಟ್ಯಾಂಕ್ ಮೈದಾನದಲ್ಲಿ ಮಧ್ಯಾಹ್ನ 3.30 ರಿಂದ ಸಂಜೆ 7.30 ರವರೆಗೆ ಯಜ್ಞ ಸಮಾರಂಭ ನಡೆಯಲಿದೆ. ಈ ಕುರಿತು ಮುಂಬೈ ಮರಾಠಿ ಪತ್ರಕರ್ತ ಸಂಘದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಸಂಸ್ಥೆಯ ವಕ್ತಾರ ಅಭಯ ವರ್ತಕ್ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ರಾಷ್ಟ್ರೀಯ ವಕ್ತಾರ ಚೇತನ್ ರಾಜಹಂಸ, ಜ್ಯೋತಿರ್ವಿದ ಶ್ರೇಯಸ್ ಪಿಸೋಳ್ಕರ್ ಹಾಗೂ ಮಹಾರಾಷ್ಟ್ರ ಮಂದಿರ ಮಹಾಸಂಘದ ನವಿ ಮುಂಬೈ ಸಂಯೋಜಕ ಕೈಲಾಸ್ ಪಾಟೀಲ್ ಉಪಸ್ಥಿತರಿದ್ದರು.



ಅಭಯ ವರ್ತಕ್ ಅವರ ಪ್ರಕಾರ, ಆದಿಶಕ್ತಿ ದೇವಿ ಸತಿಯ ಕ್ರೋಧದಿಂದ ಪ್ರಕಟವಾದ 'ದಶಮಹಾವಿದ್ಯೆ'ಗಳಲ್ಲಿ ದೇವಿ ಮಾತಂಗಿಗೆ ವಿಶೇಷ ಸ್ಥಾನವಿದೆ. ದೇವಿ ಮಾತಂಗಿಯನ್ನು ಆದಿಶಕ್ತಿಯ ಪ್ರಮುಖ ಸಲಹೆಗಾರ್ತಿ ಎಂದು ಪರಿಗಣಿಸಲಾಗುತ್ತದೆ. ಶತ್ರುಗಳ ಮೇಲೆ ವಿಜಯ ಸಾಧಿಸಲು ಮತ್ತು ಪ್ರತಿಕೂಲ ಪರಿಸ್ಥಿತಿಗಳನ್ನು ನಿಯಂತ್ರಿಸಲು ಈ ದೇವಿಯ ಉಪಾಸನೆ ಅತ್ಯಂತ ಫಲದಾಯಕವೆಂದು ವಿವರಿಸಲಾಯಿತು.

ತ್ರೇತಾಯುಗದಲ್ಲಿ ಶ್ರೀರಾಮ ಅವತಾರ ಕಾಲದಲ್ಲಿಯೂ ರಾಜಮಾತಂಗಿ ತತ್ವ ಕಾರ್ಯನಿರ್ವಹಿಸಿತ್ತು ಹಾಗೂ ಅದರಿಂದ ರಾಮರಾಜ್ಯದ ಸ್ಥಾಪನೆ ಸಾಧ್ಯವಾಯಿತು ಎಂಬ ಉಲ್ಲೇಖವೂ ಮಾಡಲಾಯಿತು. ಇಂದಿನ ಕಾಲದಲ್ಲಿಯೂ ಭಾರತದ ರಕ್ಷಣೆಗೆ ಇದೇ ದೈವೀ ಶಕ್ತಿಯ ಆಶೀರ್ವಾದ ದೊರಕಲಿ ಎಂಬುದು ಮಹಾಯಾಗದ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ಈ ಮಹಾಯಾಗದ ಪ್ರಮುಖ ಆಕರ್ಷಣೆಯಾಗಿ ಸುಮಾರು ಸಾವಿರ ವರ್ಷಗಳ ಹಿಂದೆ ಮಹಮೂದ್ ಗಜನವಿ ದಾಳಿಯಿಂದ ಹಾನಿಗೊಳಗಾದ ಸೋಮನಾಥ ಜ್ಯೋತಿರ್ಲಿಂಗದ ದಿವ್ಯ ಅಂಶಗಳ ದರ್ಶನ ವ್ಯವಸ್ಥೆ ಮಾಡಲಾಗಿದೆ. ಇತಿಹಾಸದ ಸಾಕ್ಷಿಯಾದ ಈ ಪವಿತ್ರ ಅವಶೇಷಗಳನ್ನು ಭಕ್ತರ ದರ್ಶನಕ್ಕಾಗಿ ಇರಿಸಲಾಗುವುದು ಎಂದು ಚೇತನ್ ರಾಜಹಂಸ ತಿಳಿಸಿದರು.

ಮಹಾಸಂಕಲ್ಪ, ಶ್ರೀ ಗಣೇಶ ಆವಾಹನೆ ಮತ್ತು ಪುಣ್ಯಾಹವಾಚನದೊಂದಿಗೆ ಯಜ್ಞ ಆರಂಭವಾಗಲಿದೆ. ಬಳಿಕ ಶ್ರೀ ರಾಜಮಾತಂಗಿ ದೇವಿಯ ಮೂಲಮಂತ್ರಗಳ ನಡುವೆ ಆಹುತಿಗಳನ್ನು ಅರ್ಪಿಸಲಾಗುವುದು.

ತಮಿಳುನಾಡಿನ ಈರೋಡ್‌ನ ಶಿವಾಗಮ ವಿದ್ಯಾನಿಧಿ ಆಗಮಾಚಾರ್ಯ ಅರುಣ್‌ಕುಮಾರ್ ಗುರುಮೂರ್ತಿ ಯಜ್ಞದ ಪೌರೋಹಿತ್ಯ ವಹಿಸಲಿದ್ದು, ಶಿವಾಚಾರ್ಯ ಶ್ರೀ ಗುರುಮೂರ್ತಿ ಮುಖ್ಯ ಆಚಾರ್ಯರಾಗಿರುತ್ತಾರೆ ಎಂದು ಶ್ರೇಯಸ್ ಪಿಸೋಳ್ಕರ್ ತಿಳಿಸಿದರು. ಮುಂಬೈ, ಠಾಣೆ, ರಾಯಗಡ ಹಾಗೂ ಪಾಲ್ಘರ್ ಜಿಲ್ಲೆಗಳ ಅನೇಕ ದೇವಾಲಯಗಳ ವಿಶ್ವಸ್ತರು ಮತ್ತು ಅರ್ಚಕರು ಈ ಯಜ್ಞದಲ್ಲಿ ಭಾಗವಹಿಸಲಿದ್ದಾರೆ ಎಂದು ಕೈಲಾಸ್ ಪಾಟೀಲ್ ಮಾಹಿತಿ ನೀಡಿದರು.

ಸನಾತನ ಸಂಸ್ಥೆ ಇದುವರೆಗೆ 750ಕ್ಕೂ ಹೆಚ್ಚು ಯಜ್ಞ-ಅನುಷ್ಠಾನಗಳನ್ನು ನಡೆಸಿದೆ. ಈ ಮಹಾಯಾಗದಲ್ಲಿ ವಿವಿಧ ಕ್ಷೇತ್ರಗಳ ಗಣ್ಯರು, ಸಂತ-ಮಹಂತರು, ರಾಜ್ಯ ಸರ್ಕಾರದ ಸಚಿವರು, ಹಿಂದುತ್ವ ಸಂಘಟನೆಗಳ ಪದಾಧಿಕಾರಿಗಳು, ನ್ಯಾಯವಾದಿಗಳು, ಉದ್ಯಮಿಗಳು ಸೇರಿದಂತೆ ಸುಮಾರು 5 ಸಾವಿರ ಭಕ್ತರು ಭಾಗವಹಿಸುವ ನಿರೀಕ್ಷೆಯಿದೆ.

ಸಂಸ್ಥಾಪಕ ಡಾ. ಜಯಂತ ಆಠವಲೆ ಅವರು ಧರ್ಮಕಾರ್ಯ ಆರಂಭಿಸಿದ ಮುಂಬೈ ನಗರದಲ್ಲೇ ಈ ಮಹಾಯಾಗ ಆಯೋಜನೆಯಾಗುತ್ತಿರುವುದು ರಾಷ್ಟ್ರ ನಿರ್ಮಾಣದ ದಿಕ್ಕಿನಲ್ಲಿ ಐತಿಹಾಸಿಕ ಹೆಜ್ಜೆಯಾಗಲಿದೆ ಎಂದು ಸಂಘಟಕರು ಅಭಿಪ್ರಾಯಪಟ್ಟಿದ್ದಾರೆ.

ಎಲ್ಲಾ ಧರ್ಮಪ್ರೇಮಿ ಹಿಂದೂಗಳು ಕುಟುಂಬ ಸಮೇತ ಈ ಮಹಾಯಾಗದಲ್ಲಿ ಭಾಗವಹಿಸಬೇಕೆಂದು ಅಭಯ ವರ್ತಕ್ ಕರೆ ನೀಡಿದ್ದಾರೆ.

# ಕಾರ್ಮಿಕ ವಸತಿ ಶಾಲೆ ನಿರ್ಮಾಣಕ್ಕೆ ಮರಗಳ ತೆರವು

ಬೂದಿಕೋಟೆ

ಯಳೆಸಂದ್ರ ಗ್ರಾಮದ ಬಳಿ ಎರಡು ಎಕರೆ ಜಾಗದಲ್ಲಿ ನೀಲಗಿರಿ ಮರಗಳನ್ನು ಅನುಮತಿ ಇಲ್ಲದೆ ಕಟಾವು ಮಾಡಲಾಗುತ್ತಿದೆ ಎಂಬ ಆರೋಪಗಳು ಸತ್ಯಕ್ಕೆ ದೂರವಾದವು ಎಂದು ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಟಿ. ಮಹದೇವಪ್ಪ ಸ್ಪಷ್ಟನೆ ನೀಡಿದ್ದಾರೆ.

ಯಳೆಸಂದ್ರ ಹೋಬಳಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಟ್ಟಡ ಕಾರ್ಮಿಕ ಇಲಾಖೆ ವತಿಯಿಂದ ಕಾರ್ಮಿಕ ವಸತಿ ಶಾಲೆ ನಿರ್ಮಾಣಕ್ಕಾಗಿ ಒಟ್ಟು 10 ಎಕರೆ ಜಾಗವನ್ನು ಗುರುತಿಸಲಾಗಿದೆ ಎಂದು ಹೇಳಿದರು. ಪಂಚಾಯಿತಿ ಹಾಗೂ ಸಂಬಂಧಿತ ಇಲಾಖೆಗಳಿಂದ ಕಳೆದ ಕೆಲವು ತಿಂಗಳುಗಳ ಹಿಂದೆ ಎನ್‌ಓಸಿ ನೀಡಲಾಗಿದ್ದು, ಈಗ ಆ ಸ್ಥಳದಲ್ಲಿ ಯೋಜಿತ ಕಟ್ಟಡ ನಿರ್ಮಾಣಕ್ಕಾಗಿ ಮರಗಳನ್ನು ತೆರವು ಮಾಡಲಾಗುತ್ತಿದೆ ಎಂದು ವಿವರಿಸಿದರು.

ಕೆಲವರು ಈ ವಿಚಾರವನ್ನು ತಿಳಿಯದೆ ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಹೇಳಿದ ಅವರು, "ಮರಗಳನ್ನು ತೆರವು ಮಾಡದೆ ಕಟ್ಟಡ ನಿರ್ಮಿಸಲು ಸಾಧ್ಯವೇ?" ಎಂದು ಪ್ರಶ್ನಿಸಿದರು. ನೂರಾರು ಬಡ ವಿದ್ಯಾರ್ಥಿಗಳಿಗೆ 6ನೇ ತರಗತಿಯಿಂದ ಪಿಯುಸಿ ವರೆಗೆ ಶಿಕ್ಷಣ ನೀಡುವ ಉದ್ದೇಶದಿಂದ ಈ ವಸತಿ ಶಾಲೆ ನಿರ್ಮಾಣವಾಗುತ್ತಿದೆ ಎಂದು ಅವರು ಹೇಳಿದರು.

ಈ ಯೋಜನೆಗೆ ಶಾಸಕ ಎಸ್.ಎನ್. ನಾರಾಯಣಸ್ವಾಮಿ ಅವರು ಸಚಿವರು ಮತ್ತು ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಅನುಮೋದನೆ ಪಡೆದುಕೊಂಡಿದ್ದಾರೆ ಎಂದು ಮಹದೇವಪ್ಪ ತಿಳಿಸಿದರು. ಕಾರ್ಮಿಕ ಇಲಾಖೆಯ ಅಡಿಯಲ್ಲಿ ರಾಜ್ಯಕ್ಕೆ ಒಟ್ಟು 9 ವಸತಿ ಶಾಲೆಗಳು ಅನುಮೋದನೆಯಾಗಿದ್ದು, ಅದರಲ್ಲಿ ಈ ತಾಲೂಕಿಗೂ ಒಂದು ಶಾಲೆ ಮಂಜೂರಾಗಿದೆ ಎಂದು ಹೇಳಿದರು.

ಹಿಂದಿನ ಅವಧಿಯಲ್ಲಿ ಇದೇ ಸ್ಥಳದ ಮರಗಳನ್ನು ಹರಾಜು ಮಾಡಿ ಪಂಚಾಯಿತಿಗೆ ಆದಾಯ ತಂದು ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗಿತ್ತು ಎಂಬುದನ್ನೂ ಅವರು ನೆನಪಿಸಿದರು. ಆದರೆ ಈಗ ಕೆಲವರು ವಿನಾಕಾರಣ ಆರೋಪ ಮಾಡುತ್ತಿರುವುದು ಸರಿಯಲ್ಲ ಎಂದು ಪರೋಕ್ಷವಾಗಿ ಕೆ.ಸಿ. ಸೀತಾರಾಮಪ್ಪ ವಿರುದ್ಧ ಆಕ್ಷೇಪ ವ್ಯಕ್ತಪಡಿಸಿದರು.

ಅಂತಿಮವಾಗಿ, ವಸತಿ ಶಾಲೆ ನಿರ್ಮಾಣದ ಉದ್ದೇಶವಷ್ಟೇ ಹೊರತು ಬೇರೆ ಯಾವುದೇ ಕಾರಣಕ್ಕೆ ಮರಗಳನ್ನು ಕಡಿದುಹಾಕಲಾಗುತ್ತಿಲ್ಲ ಎಂದು ಅವರು ಪುನಃ ಸ್ಪಷ್ಟಪಡಿಸಿದರು. ಕಾರ್ಯಕ್ರಮದಲ್ಲಿ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

# ಹುಣಸೇಮರದ ಚಿಗುರು ಹೂಗಳ ಸೊಬಗು; ಪ್ರಕೃತಿಯ ಅಪರೂಪದ ಕಾಣಿಕೆ

ಬಂಗಾರಪೇಟೆ

ಬೇಸಿಗೆಯ ಆರಂಭದ ದಿನಗಳಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಮನಸೆಳೆಯುವ ದೃಶ್ಯವೆಂದರೆ ಹುಣಸೇಮರದ ಹೊಸ ಚಿಗುರುಗಳು ಮತ್ತು ಸಣ್ಣ ಸಣ್ಣ ಹೂಗಳ ಅರಳುವಿಕೆ. ಹಸಿರು ಎಲೆಗಳ ನಡುವೆ ಕೆಂಪು ಮಿಶ್ರಿತ ಮೃದುವಾದ ಚಿಗುರುಗಳು ಗಾಳಿಗೆ ತೂಗಾಡುತ್ತಿರಲು, ಮರದ ತುಂಬೆಲ್ಲಾ ಮಿನುಗುವ ಹೂಗಳು ಪ್ರಕೃತಿಯ ಅದ್ಭುತ ಕಲಾತ್ಮಕತೆಯನ್ನು ನೆನಪಿಗೆ ತರುತ್ತವೆ. ಈ ಸಮಯದಲ್ಲಿ ಹುಣಸೇಮರಗಳು ಹೊಸ ಜೀವ ತುಂಬಿಕೊಂಡಂತೆ ಕಾಣುತ್ತವೆ.

ಗ್ರಾಮೀಣ ಬದುಕಿನ ಅವಿಭಾಜ್ಯ ಅಂಗವಾಗಿರುವ ಹುಣಸೇಮರವು ಶತಮಾನಗಳಿಂದ ಜನಜೀವನದೊಂದಿಗೆ ಬೆಸೆದುಕೊಂಡಿದೆ. ಹೊಲಗಳ ಅಂಚಿನಲ್ಲಿ, ರಸ್ತೆ ಬದಿಗಳಲ್ಲಿ, ಬಯಲು ಪ್ರದೇಶಗಳಲ್ಲಿ ಎತ್ತರವಾಗಿ ನಿಂತಿರುವ ಈ ಮರಗಳು ಕೇವಲ ನೆರಳನ್ನಷ್ಟೇ ನೀಡುವುದಿಲ್ಲ, ನಮ್ಮ ಸಂಸ್ಕೃತಿ ಮತ್ತು ಪರಿಸರದ ಸಂಕೇತಗಳಾಗಿಯೂ ಗುರುತಿಸಿಕೊಂಡಿವೆ. ಮಳೆ, ಬಿಸಿಲು, ಚಳಿ ಎನ್ನದೆ ವರ್ಷಪೂರ್ತಿ ಜೀವಂತಿಕೆಯನ್ನು ಉಳಿಸಿಕೊಂಡಿರುವ ಹುಣಸೇಮರ ತನ್ನದೇ ಆದ ವಿಶಿಷ್ಟತೆಯನ್ನು ಹೊಂದಿದೆ.

ಈ ಬಾರಿ ಮರಗಳಲ್ಲಿ ಕಾಣಿಸುತ್ತಿರುವ ಹೂಗಳ ಸಮೃದ್ಧಿ ಉತ್ತಮ ಫಲಧಾರೆಯ ಸೂಚನೆ ಎಂದು ರೈತರು ಅಭಿಪ್ರಾಯಪಡುತ್ತಾರೆ. ಹಿರಿಯರ ಅನುಭವದ ಪ್ರಕಾರ, ಚಿಗುರು ಮತ್ತು ಹೂಗಳ ಸಾಂದ್ರತೆ ಹೆಚ್ಚಿದ್ದರೆ ಆ ವರ್ಷ ಹುಣಸೇ ಹಣ್ಣಿನ ಉತ್ಪಾದನೆಯೂ ಉತ್ತಮವಾಗಿರುತ್ತದೆ. ಈಗಿನ ದೃಶ್ಯಗಳನ್ನು ಗಮನಿಸಿದರೆ ಈ ಬಾರಿ ಸಮೃದ್ಧ ಹುಣಸೇ ಹಣ್ಣು ದೊರೆಯುವ ನಿರೀಕ್ಷೆ ಮೂಡಿದೆ. ಹೂಗಳ ಪರಿಮಳಕ್ಕೆ ಜೇನುನೊಣಗಳು ಗುಂಪುಗೂಡುತ್ತಿರುವುದು ಪ್ರಕೃತಿಯ ಸಮತೋಲನದ ಸುಂದರ ಸಂಕೇತವಾಗಿದೆ.

ಹುಣಸೇಮರದ ಮಹತ್ವ ಅದರ ಬಹುಮುಖ ಉಪಯೋಗದಲ್ಲಿದೆ. ಹುಣಸೇ ಹಣ್ಣು ಅಡುಗೆಮನೆಯಲ್ಲಿ



ಅನಿವಾರ್ಯ ಪದಾರ್ಥವಾಗಿದ್ದು, ಸಾರು, ಚಟ್ನಿ, ಪಲ್ಯ, ಪಾನಕ ಸೇರಿದಂತೆ ಅನೇಕ ತಿನಿಸುಗಳಿಗೆ ವಿಶಿಷ್ಟ ರುಚಿ ನೀಡುತ್ತದೆ. ಅದರ ಚಿಗುರು ಮತ್ತು ಎಲೆಗಳು ಕೆಲವು ಔಷಧೀಯ ಬಳಕೆಯಲ್ಲಿಯೂ ಪ್ರಸಿದ್ಧವಾಗಿವೆ. ದಟ್ಟ ಕೊಂಬೆಗಳು ಬಿಸಿಲಿನ ನಡುವೆ ತಂಪಿನ ನೆರಳು ನೀಡುವುದರ ಜೊತೆಗೆ ಅನೇಕ ಪಕ್ಷಿಗಳಿಗೆ ಆಶ್ರಯವಾಗುತ್ತವೆ.

ಇಂದಿನ ಆಧುನಿಕ ಜೀವನದಲ್ಲಿ ಮರಗಳ ಸಂಖ್ಯೆ ದಿನದಿಂದ ದಿನಕ್ಕೆ ಕಡಿಮೆಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಇಂತಹ ಸಂದರ್ಭದಲ್ಲಿ

> ಹುಣಸೇಮರದ ಮಹತ್ವ ಅದರ ಬಹುಮುಖ ಉಪಯೋಗದಲ್ಲಿದೆ. ಹುಣಸೇ ಹಣ್ಣು ಅಡುಗೆಮನೆಯಲ್ಲಿ ಅನಿವಾರ್ಯ ಪದಾರ್ಥವಾಗಿದ್ದು, ಸಾರು, ಚಟ್ನಿ, ಪಲ್ಯ, ಪಾನಕ ಸೇರಿದಂತೆ ಅನೇಕ ತಿನಿಸುಗಳಿಗೆ ವಿಶಿಷ್ಟ ರುಚಿ ನೀಡುತ್ತದೆ. ಅದರ ಚಿಗುರು ಮತ್ತು ಎಲೆಗಳು ಕೆಲವು ಔಷಧೀಯ ಬಳಕೆಯಲ್ಲಿಯೂ ಪ್ರಸಿದ್ಧವಾಗಿವೆ. ದಟ್ಟ ಕೊಂಬೆಗಳು ಬಿಸಿಲಿನ ನಡುವೆ ತಂಪಿನ ನೆರಳು ನೀಡುವುದರ ಜೊತೆಗೆ ಅನೇಕ ಪಕ್ಷಿಗಳಿಗೆ ಆಶ್ರಯವಾಗುತ್ತವೆ.

ಹುಣಸೇಮರಗಳಂತಹ ಪಾರಂಪರಿಕ ಮರಗಳನ್ನು ಉಳಿಸಿಕೊಳ್ಳುವುದು ಅತ್ಯಂತ ಅಗತ್ಯವಾಗಿದೆ. ಒಂದು ಹುಣಸೇಮರ ಬೆಳೆದು ದೊಡ್ಡದಾಗಲು ಹಲವು ವರ್ಷಗಳು ಬೇಕಾದರೂ, ಅದು ಬೆಳೆದ ನಂತರ ಅನೇಕ ಪೀಳಿಗೆಗಳಿಗೆ ಉಪಕಾರಿಯಾಗುತ್ತದೆ. ಆದ್ದರಿಂದ ಗ್ರಾಮೀಣ ಪ್ರದೇಶಗಳಷ್ಟೇ ಅಲ್ಲದೆ ನಗರ ಪ್ರದೇಶಗಳಲ್ಲಿಯೂ ಇಂತಹ ಮರಗಳನ್ನು ನೆಡುವ ಮತ್ತು ಸಂರಕ್ಷಿಸುವ ಕಾರ್ಯ ಹೆಚ್ಚಾಗಬೇಕು.

ಒಟ್ಟಿನಲ್ಲಿ, ಹುಣಸೇಮರದ ಚಿಗುರು ಮತ್ತು ಹೂಗಳ ಸೌಂದರ್ಯ ಪ್ರಕೃತಿಯ ಜೀವಂತ ಕಾವ್ಯವೇ ಸರಿ. ಅದರ ನೆರಳು, ಹಣ್ಣು, ಹೂ ಮತ್ತು ಚಿಗುರುಗಳು ಮನುಷ್ಯ ಹಾಗೂ ಪ್ರಕೃತಿಯ ನಡುವಿನ ಆತ್ಮೀಯ ಸಂಬಂಧವನ್ನು ಸಾರುತ್ತವೆ. ಈ ಬಾರಿ ಮರಗಳಲ್ಲಿ ಕಂಡುಬರುತ್ತಿರುವ ಹೂಗಳ ಸಮೃದ್ಧಿ ಉತ್ತಮ ಫಲದ ನಿರೀಕ್ಷೆಯ ಜೊತೆಗೆ ಪ್ರಕೃತಿಯ ಮೇಲಿನ ಪ್ರೀತಿಯನ್ನು ಮತ್ತಷ್ಟು ಗಾಢಗೊಳಿಸಿದೆ.

# ಎಸ್‌ಎಸ್‌ಎಲ್‌ಸಿ ಪರೀಕ್ಷೆ-2: ನಿಷೇಧಾಜ್ಞೆ ಜಾರಿ

ತುಮಕೂರು

ತುಮಕೂರು ಜಿಲ್ಲೆಯಾದ್ಯಂತ 14 ಪರೀಕ್ಷಾ ಕೇಂದ್ರಗಳಲ್ಲಿ ಮೇ 18 ರಿಂದ 25ರವರೆಗೆ ಎಸ್.ಎಸ್.ಎಲ್.ಸಿ. ಪರೀಕ್ಷೆ-2 ನಡೆಯಲಿದ್ದು, ಪರೀಕ್ಷೆಯನ್ನು ಯಾವುದೇ ಲೋಪದೋಷವಿಲ್ಲದಂತೆ ಹಾಗೂ ಯಾವುದೇ ಅಹಿತಕರ ಘಟನೆ ಸಂಭವಿಸದಂತೆ ನಡೆಸಲು ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀ. ವ್ಯಾಪ್ತಿಯೊಳಗಿನ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಶುಭ ಕಲ್ಯಾಣ್ ಅವರು ಆದೇಶ ಹೊರಡಿಸಿದ್ದಾರೆ.

ನಿಷೇಧಾಜ್ಞೆಯು ಮೇ 18 ರಿಂದ 25ರವರೆಗೆ(ಸರ್ಕಾರಿ ರಜೆ ಮತ್ತು ಪರೀಕ್ಷೆ ನಡೆಯದೆ ಇರುವ ದಿನಗಳನ್ನು ಹೊರತುಪಡಿಸಿ) ಬೆಳಿಗ್ಗೆ 9 ರಿಂದ ಸಂಜೆ 4 ಗಂಟೆಯವರೆಗೆ ಜಾರಿಯಲ್ಲಿರುತ್ತದೆ.

ಈ ನಿಷೇಧಾಜ್ಞೆಯನ್ವಯ ಪರೀಕ್ಷೆ ನಡೆಯುವ ದಿನಾಂಕದಂದು ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಇರುವ ಜೆರಾಕ್ಸ್ ಮತ್ತು ಕಂಪ್ಯೂಟರ್/ ಸೈಬರ್, ಬೆರಳಚ್ಚು ಅಂಗಡಿಗಳನ್ನು ಮುಚ್ಚತಕ್ಕದ್ದು. ನಿಷೇಧಾಜ್ಞೆ ಜಾರಿಯಲ್ಲಿರುವ ಅವಧಿಯಲ್ಲಿ ಅನಧಿಕೃತ ವ್ಯಕ್ತಿಗಳು ಯಾರೂ ನಿರ್ಬಂಧಿತ ಪ್ರದೇಶದೊಳಗೆ ಪ್ರವೇಶಿಸುವಂತಿಲ್ಲ ಹಾಗೂ ನಿಷೇಧಾಜ್ಞೆಯನ್ನು ಉಲ್ಲಂಘನೆ ಮಾಡಿದ ವ್ಯಕ್ತಿಗಳನ್ನು ಬಂಧಿಸಿ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲು ಜಿಲ್ಲಾ ಪೊಲೀಸ್ ಇಲಾಖೆಗೆ ಆದೇಶಿಸಲಾಗಿದೆ.

ಕೆಲವು ಪ್ರಕರಣಗಳಲ್ಲಿ ದುರುದ್ದೇಶದಿಂದ ನಕಲಿ ಪ್ರಶ್ನೆಪತ್ರಿಕೆಗಳ ಫೋಟೋಗಳನ್ನು ತೆಗೆದು ವಾಟ್ಸ್‌ಆಪ್ ಇತರೆ ಸಾಮಾಜಿಕ ಜಾಲತಾಣಗಳ ಮೂಲಕ ಕಳುಹಿಸಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಲ್ಲಿ ಗೊಂದಲ ಸೃಷ್ಟಿ ಮಾಡುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು.

ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರಿಗೆ ಬೇಸಿಕ್ ಮೊಬೈಲ್ ಇರಿಸಿಕೊಳ್ಳಲು ಅವಕಾಶ ನೀಡಲಾಗಿದೆ. ಉಳಿದ ಎಲ್ಲಾ ಪರೀಕ್ಷಾ ಸಿಬ್ಬಂದಿ/ವಿದ್ಯಾರ್ಥಿಗಳು ಮೊಬೈಲ್ ತರುವುದು/ ಉಪಯೋಗಿಸುವುದನ್ನು ಕಡ್ಡಾಯವಾಗಿ ನಿಷೇಧಿಸಿದೆ.

ಜಿಲ್ಲೆಯಲ್ಲಿ ಪ್ರಶ್ನೆ ಪತ್ರಿಕೆಗಳ ಸೋರಿಕೆ ಮತ್ತು ಪರೀಕ್ಷಾ ಅಕ್ರಮಗಳಿಗೆ ಉತ್ತೇಜನ ನೀಡುವಂತಹ ವ್ಯಕ್ತಿಗಳು ಕಂಡುಬಂದಲ್ಲಿ ಅವರ ವಿರುದ್ಧ ಭಾರತೀಯ ನ್ಯಾಯ ಸಂಹಿತೆ 2023ರಡಿ ಅಗತ್ಯ ಮುಂಜಾಗ್ರತಾ ಕ್ರಮ ಕ್ರಮಕೈಗೊಳ್ಳಲಾಗುವುದು ಎಂದು ಅವರು ಸೂಚಿಸಿದ್ದಾರೆ.

# 'ವಿರೋಧ ಪಕ್ಷದ ಟೀಕೆಗಳಿಗೆ ಕಿವಿಗೊಡುವುದಿಲ್ಲ'



ಬಂಗಾರಪೇಟೆ

ಸಾರ್ವಜನಿಕರು ಅಭಿವೃದ್ಧಿ ಕಾರ್ಯಗಳಿಗೆ ಉತ್ತಮ ಬೆಂಬಲ ನೀಡುತ್ತಿರುವ ಹಿನ್ನೆಲೆಯಲ್ಲಿ ವಿರೋಧ ಪಕ್ಷಗಳ ಟೀಕೆಗಳಿಗೆ ಮಹತ್ವ ನೀಡುವುದಿಲ್ಲ ಎಂದು ಶಾಸಕ ಎಸ್.ಎನ್.ನಾರಾಯಣಸ್ವಾಮಿ ಹೇಳಿದ್ದಾರೆ.

ನಗರದ ಬಜಾರ್ ರಸ್ತೆಯಲ್ಲಿ ನಡೆದ ಒತ್ತುವರಿ ತೆರವು ಕಾರ್ಯಾಚರಣೆಯನ್ನು ವೀಕ್ಷಿಸಿದ ಬಳಿಕ ಮಾತನಾಡಿದ ಅವರು, ಪಟ್ಟಣದ ಪ್ರಮುಖ ರಸ್ತೆಗಳನ್ನು ಅಭಿವೃದ್ಧಿಪಡಿಸಿ ಸಿಮೆಂಟ್ ರಸ್ತೆಗಳನ್ನು ನಿರ್ಮಿಸಲಾಗುವುದು ಎಂದು ತಿಳಿಸಿದರು. ಜೊತೆಗೆ ಹಳೆಯ ವಿದ್ಯುತ್ ಕಂಬಗಳನ್ನು ತೆರವುಗೊಳಿಸಿ ಹೊಸ ಸ್ಪೇನ್ ಕಂಬಗಳನ್ನು ಅಳವಡಿಸುವ ಯೋಜನೆಯೂ ಜಾರಿಯಾಗಲಿದೆ ಎಂದರು.

ಪಟ್ಟಣದ ಪಟಾಭಿಷೇಕ ಉದ್ಯಾನವನದಲ್ಲಿ ಆಧುನಿಕ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಹೇಳಿದ ಅವರು, ವ್ಯಾಯಾಮ ಸಾಮಗ್ರಿ, ವಾಕಿಂಗ್ ಟ್ರ್ಯಾಕ್, ಬುದ್ಧನ ಪ್ರತಿಮೆಯೊಂದಿಗೆ ಧ್ಯಾನ ಕೇಂದ್ರ, ಶೌಚಾಲಯ ಹಾಗೂ ಸ್ನಾನಗೃಹ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ಡೇಲ್ಟ್ ಯೋಜನೆಯಡಿ ಸುಮಾರು 7 ಕೋಟಿ ರೂ. ವೆಚ್ಚದಲ್ಲಿ ಫುಟ್ಪಾತ್ ಅಭಿವೃದ್ಧಿ ಹಾಗೂ ನಗರ ಸೌಂದರ್ಯೀಕರಣ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಇದರ ಭಾಗವಾಗಿ ಪಟ್ಟಣದಲ್ಲಿ ಗಿಡಗಳನ್ನು ನೆಡುವ ಕಾರ್ಯಕ್ರಮವೂ ನಡೆಯಲಿದೆ ಎಂದು ಹೇಳಿದರು.

"ನವ ಬಂಗಾರಪೇಟೆ" ನಿರ್ಮಾಣ ಗುರಿಯೊಂದಿಗೆ ಕ್ರೀಡಾಂಗಣ, ಅಂಬೇಡ್ಕರ್ ಭವನ, ಪತ್ರಕರ್ತರ ಭವನ ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ಶಾಸಕ ನಾರಾಯಣಸ್ವಾಮಿ ತಿಳಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಆಯುಕ್ತ ಸತ್ಯನಾರಾಯಣ, ಕಾರ್ಯಪಾಲಕ ಅಭಿಯಂತರ ರವಿಕುಮಾರ್ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

# ಓಲೈಕೆ ರಾಜಕೀಯಕ್ಕೆ ಜನರಿಂದ ತಕ್ಕ ಉತ್ತರ: ವಿಜಯೇಂದ್ರ

ಬೆಂಗಳೂರು

ಅಭಿವೃದ್ಧಿಯನ್ನು ಮರೆತು ಹಿಂದೂಗಳಿಗೆ ಅಪಮಾನ ಮಾಡಿಕೊಂಡು ಅಲ್ಪಸಂಖ್ಯಾತರ ಓಲೈಕೆ ರಾಜಕಾರಣ ಮಾಡುತ್ತಿರುವ ಕಾಂಗ್ರೆಸ್ ಸರಕಾರದ ಆಡಳಿತಕ್ಕೆ ಇತಿಶ್ರೀ ಹಾಡುವ ದಿನಗಳು ಬಂದೇಬರಲಿವೆ. ಆಗ ರಾಜ್ಯದ ಜನರೂ ಇದಕ್ಕೆ ಉತ್ತರ ಕೊಡಲಿದ್ದಾರೆ ಎಂದು ಶಾಸಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಹೇಳಿದ್ದಾರೆ.

ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಹಿಜಾಬ್‌ಗೆ ಅವಕಾಶ ಕೊಡುವುದಾಗಿ ಅಧಿಕೃತ ಮುದ್ರೆಯನ್ನು ಒತ್ತಲಾಗಿದೆ. ಶಿಕ್ಷಣ ಸಚಿವರು ಹೇಳಿರುವುದು ಖಂಡಿತ ಸರಿಯಲ್ಲ ಎಂದು ಆಕ್ಷೇಪಿಸಿದರು. ಮಾಡಬೇಕಾದ ಕೆಲಸಗಳು ನೂರಾರಿವೆ. ಅದನ್ನು ಬಿಟ್ಟು ಶಾಲಾ, ಕಾಲೇಜುಗಳಲ್ಲೂ ಹಿಂದೂಗಳು, ಮುಸಲ್ಮಾನರೆಂದು ಬೆಂಕಿ ಹಚ್ಚುವ ಕೆಲಸಕ್ಕೆ ಕಾಂಗ್ರೆಸ್ ಸರಕಾರ ಕೈ ಹಾಕಿದೆ; ಬರುವ ದಿನಗಳಲ್ಲಿ ರಾಜ್ಯದ ಜನರು ಇದಕ್ಕೆ ಉತ್ತರ ಕೊಡುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಹಿಂದೆ ಬಿಜೆಪಿ ಸರಕಾರವು ಹಿಜಾಬ್ ನಿಷೇಧಿಸಿತ್ತು. ಇವತ್ತು ಅದು ನ್ಯಾಯಾಲಯದ ಕಟಕಟೆಯಲ್ಲಿದೆ. ಅಲ್ಪಸಂಖ್ಯಾತರನ್ನು ಖುಷಿ ಪಡಿಸಲು ಯಾವ ಮಟ್ಟಕ್ಕೆ ತೆರಳಲೂ ಇವರು ಹೇಸುವುದಿಲ್ಲ ಎಂಬುದನ್ನು ತೋರಿಸಿಕೊಟ್ಟಿದ್ದಾರೆ ಎಂದು ಟೀಕಿಸಿದರು. ಓಲೈಕೆ ರಾಜಕಾರಣ ಒಂದು ಕಡೆಯಾದರೆ, ಹಿಂದೂಗಳಿಗೆ ಅಪಮಾನ ಮಾಡುವ ಕೆಲಸವನ್ನು ನಿರಂತರವಾಗಿ ಕಾಂಗ್ರೆಸ್ ಸರಕಾರ ಮಾಡುತ್ತಿದೆ ಎಂದು ಆಕ್ಷೇಪಿಸಿದರು.



ರಾಜ್ಯ ಸರಕಾರವು ಅಧಿಕಾರದ ದರ್ಪ, ಮದದಿಂದ ಮನಬಂದಂತೆ ತೀರ್ಮಾನ ತೆಗೆದುಕೊಳ್ಳುತ್ತಿದೆ. ಹಿಂದೂಗಳ ವಿರುದ್ಧ ಮುಸಲ್ಮಾನರನ್ನು ಹಾಗೂ ಮುಸಲ್ಮಾನರ ವಿರುದ್ಧ ಹಿಂದೂಗಳನ್ನು ಎತ್ತಿಕಟ್ಟುವ ಷಡ್ಯಂತ್ರ, ಕುತಂತ್ರವನ್ನು ಈ ಕಾಂಗ್ರೆಸ್ ಸರಕಾರದ ನಿರ್ಧಾರಗಳಲ್ಲಿ ನಾವು ನೋಡುತ್ತಿದ್ದೇವೆ ಎಂದು ವಿಶ್ಲೇಷಿಸಿದರು. ಉಪ ಚುನಾವಣೆ ಗೆದ್ದ ಅಮಲಿನಲ್ಲಿ ಕಾಂಗ್ರೆಸ್ಸಿನವರು ಇಂಥ ತೀರ್ಮಾನಗಳನ್ನು ತೆಗೆದುಕೊಳ್ಳುತ್ತಿರಬಹುದು ಎಂದು ಅವರು ನುಡಿದರು.

ಹಿಂದೆ 2018ರಲ್ಲಿ ಈ ಸರಕಾರ ತೊಲಗುವ ಮುಂಚಿತವಾಗಿ 2 ಉಪ ಚುನಾವಣೆಗಳಲ್ಲಿ ಗೆದ್ದಿತ್ತು. ಆಮೇಲೆ ಜನರು ಪಾಠ ಕಲಿಸಿದ್ದರು ಎಂಬುದನ್ನು ಮುಖ್ಯಮಂತ್ರಿಗಳಿಗೆ ನೆನಪಿಸಲು ಬಯಸುವುದಾಗಿ ಹೇಳಿದರು.

ಪ್ರಶ್ನೆಗೆ ಉತ್ತರಿಸಿದ ಅವರು, ನರೇಂದ್ರ ಮೋದಿಯವರು ಒಂದು ದೇಶ ಒಂದೇ ಚುನಾವಣೆ ಎಂದರೆ ಅದನ್ನೂ ವಿರೋಧಿಸುತ್ತಾರೆ. ಪ್ರಧಾನಿಯವರು ಮಹಿಳಾ ಮೀಸಲಾತಿ ತರಬೇಕೆಂದರೆ ಅದನ್ನು ವಿರೋಧಿಸುತ್ತಾರೆ. ಇವತ್ತು ಎಸ್‌ಐಆರ್ ಅನ್ನೂ ವಿರೋಧ ಮಾಡುತ್ತಾರೆ ಎಂದರು.

ಬಿಹಾರದಲ್ಲಿ ಕಾಂಗ್ರೆಸ್‌ನವರು ಸರಕಾರದ ಕನಸು ಕಾಣುತ್ತಿದ್ದರು. ಅಲ್ಲಿ ಮಣ್ಣು ಮುಕ್ಕುವಂತಾಯಿತು. ಅಸ್ಸಾಂನಲ್ಲಿ ಜನರು ಕಾಂಗ್ರೆಸ್ ಅಧಿಕಾರದ ಕನಸಿಗೆ ಮಂಗಳಾರತಿ ಎತ್ತಿದರು. ಅಲ್ಲಿ ಬಿಜೆಪಿ ಸರಕಾರ ಬಂದಿದೆ.

ಪಶ್ಚಿಮ ಬಂಗಾಲದಲ್ಲಿ ಮೋದಿಜೀ ಅವರ ನಾಯಕತ್ವದಲ್ಲಿ ಐತಿಹಾಸಿಕ ಗೆಲುವು ಬಿಜೆಪಿಯದಾಗಿದೆ. ಪ್ರಧಾನಿ ಮೋದಿಜೀ ಅವರ ಜನಪ್ರಿಯತೆ ಸಹಿಸಲು ಕಾಂಗ್ರೆಸ್ಸಿನವರಿಗೆ ಸಾಧ್ಯವಾಗುತ್ತಿಲ್ಲ. ಎನ್‌ಡಿಎ ಸರಕಾರದ ಪ್ರತಿಯೊಂದು ನಿರ್ಧಾರ, ಯೋಜನೆಗಳನ್ನು ವಿರೋಧ ಮಾಡುವುದೇ ಈ ಕಾಂಗ್ರೆಸ್ ಸರಕಾರದ ದಿನನಿತ್ಯದ ಕೆಲಸ ಎಂದು ಟೀಕಿಸಿದರು.

# ಎಂಬಿಎ, ಎಂಸಿಎ ಪ್ರವೇಶ ಪರೀಕ್ಷೆ ಜೂನ್ 14ಕ್ಕೆ ಮುಂದಕ್ಕೆ

ಬೆಂಗಳೂರು

ಇದೇ ತಿಂಗಳ 24ರಂದು ನಡೆಯಬೇಕಿದ್ದ ಎಂಬಿಎ, ಎಂಸಿಎ ಕೋರ್ಸ್‌ಗಳ ಪ್ರವೇಶ (ಪಿಜಿಸಿಇಟಿ) ಪರೀಕ್ಷೆಯನ್ನು ಜೂನ್ 14ಕ್ಕೆ ಮುಂದೂಡಲಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ.

ಮೇ 24ರಂದು ಕೇಂದ್ರ ಲೋಕಸೇವಾ ಆಯೋಗದ ಪರೀಕ್ಷೆ ಇರುವ ಕಾರಣ ಈ ಬದಲಾವಣೆ ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಈ ಹಿಂದೆ ಪ್ರಕಟಿಸಿದಂತೆ ಮೇ 23ರಂದು ಎಂ.ಟೆಕ್/ ಎಂಬಿಎ ಹಾಗೂ ಡಿಸಿಇಟಿ ಪ್ರವೇಶ ಪರೀಕ್ಷೆಗಳು ನಡೆಯಲಿವೆ ಎಂದು ಅವರು ವಿವರಿಸಿದ್ದಾರೆ.

# ಬಿಡದಿ ಟೌನ್‌ಶಿಪ್ ವಿರುದ್ಧ ಮತ್ತೆ ಸಿಡಿದ ಎಚ್‌ಡಿಕೆ

ಬೆಂಗಳೂರು

ಹೆಚ್.ಡಿ. ಕುಮಾರಸ್ವಾಮಿ ಅವರು ರಾಜ್ಯ ಸರ್ಕಾರದ ಬಿಡದಿ ಟೌನ್‌ಶಿಪ್ ಯೋಜನೆ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, ರೈತರಿಗೆ ಬೇಡವಾಗಿರುವ ಯೋಜನೆಯನ್ನು ತಕ್ಷಣ ಕೈಬಿಡಬೇಕು ಎಂದು ಒತ್ತಾಯಿಸಿದರು.

ಪಕ್ಷದ ರಾಜ್ಯ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, "ರಿಯಲ್ ಎಸ್ಟೇಟ್ ಮಾಡುವುದು ಸರ್ಕಾರದ ಕೆಲಸವಲ್ಲ. ರೈತರು ಜಮೀನು ನೀಡುವುದಿಲ್ಲ ಎಂದು ಸ್ಪಷ್ಟವಾಗಿ ಹೇಳುತ್ತಿದ್ದಾರೆ. ಆದರೆ ರಾಜ್ಯ ಸರ್ಕಾರದಲ್ಲಿರುವ ರಿಯಲ್ ಎಸ್ಟೇಟ್ ದಂಧೆಕೋರರು ಭೂಮಿ ಕಿತ್ತುಕೊಂಡು ವ್ಯವಹಾರ ಮಾಡಲು ಮುಂದಾಗಿದ್ದಾರೆ" ಎಂದು ಆರೋಪಿಸಿದರು.

ರೈತರಿಂದ ಫಲವತ್ತಾದ ಕೃಷಿ ಭೂಮಿಯನ್ನು ಪಡೆದು ರಿಯಲ್ ಎಸ್ಟೇಟ್ ಅಭಿವೃದ್ಧಿ ಮಾಡುವ ಉದ್ದೇಶ ಸರ್ಕಾರಕ್ಕಿದೆ ಎಂದು ಆರೋಪಿಸಿದ ಕುಮಾರಸ್ವಾಮಿ, "ಇದು ಯಾರಪ್ಪನ ಭೂಮಿ? ಬೆದರಿಕೆ ಹಾಕಿ ಜಮೀನು ಕಿತ್ತುಕೊಳ್ಳಲು ಇವರಾರು?" ಎಂದು ಪ್ರಶ್ನಿಸಿದರು.

ಸಿದ್ದರಾಮಯ್ಯ ಅವರ ವಿರುದ್ಧವೂ ತೀವ್ರ ವಾಗ್ದಾಳಿ ನಡೆಸಿದ ಅವರು, "ಮುಖ್ಯಮಂತ್ರಿ ಸ್ವತಃ ರಿಯಲ್ ಎಸ್ಟೇಟ್ ಬ್ರೋಕರ್‌ಗಿರಿಯನ್ನೇ ವಹಿಸಿಕೊಂಡಿದ್ದಾರೆ. ರೈತರ ಜಮೀನು ಲಪಟಾಯಿಸಿ ದಂಧೆ ನಡೆಸಲು ಸರ್ಕಾರ ಮುಂದಾಗಿದೆ" ಎಂದು ಗಂಭೀರ ಆರೋಪ ಮಾಡಿದರು.

ಯಾವುದೇ ಕಾರಣಕ್ಕೂ ರೈತರು ಭೂಮಿ ಬಿಟ್ಟುಕೊಡಲು ಸಿದ್ಧರಿಲ್ಲ ಎಂದು ಹೇಳಿದ ಕುಮಾರಸ್ವಾಮಿ, ರೈತರನ್ನು ಹೆದರಿಸುವ ಹಾಗೂ ಒತ್ತಡ ಹೇರುವ ಕೆಲಸ ನಡೆಯುತ್ತಿದೆ ಎಂದು ದೂರಿದರು. "ಭೂಮಿ ವಶಪಡಿಸಿಕೊಳ್ಳುವುದು ಹೇಗೆ ಅಂತ ಬಂದು ನೋಡಲಿ" ಎಂದು ಸವಾಲು ಹಾಕಿದರು.



ರಾಮನಗರ ಜಿಲ್ಲಾಧಿಕಾರಿ ವಿರುದ್ಧವೂ ಅಸಮಾಧಾನ ವ್ಯಕ್ತಪಡಿಸಿದ ಅವರು, "ರೈತರ ಸಮಸ್ಯೆ ಕೇಳದೆ, ಕೆಲವರ ಮಾತಿಗೆ ಸಹಿ ಹಾಕುತ್ತಿದ್ದಾರೆ. ನನ್ನ ಫೋನ್‌ಗೂ ಪ್ರತಿಕ್ರಿಯೆ ನೀಡುತ್ತಿಲ್ಲ" ಎಂದು ಟೀಕಿಸಿದರು.

ಬಿಡದಿ ಟೌನ್‌ಶಿಪ್ ಯೋಜನೆ ರೈತರ ಹಿತಾಸಕ್ತಿಗೆ ವಿರುದ್ಧವಾಗಿದ್ದು, ಸರ್ಕಾರ ನೇರವಾಗಿ ರಿಯಲ್ ಎಸ್ಟೇಟ್ ಮಾಫಿಯಾದಂತೆ ವರ್ತಿಸುತ್ತಿದೆ ಎಂದು ಆರೋಪಿಸಿದ ಕುಮಾರಸ್ವಾಮಿ, "ಯೋಜನೆ ಹಿಂಪಡೆಯದಿದ್ದರೆ ಉಗ್ರ ಹೋರಾಟ ಎದುರಿಸಬೇಕಾಗುತ್ತದೆ" ಎಂದು ಎಚ್ಚರಿಕೆ ನೀಡಿದರು.

ರಾಜ್ಯ ಸಚಿವ ಸಂಪುಟದ ನಿರ್ಧಾರಗಳ ಮೇಲೂ ಕಿಡಿಕಾರಿದ ಅವರು, "ಕ್ಯಾಬಿನೆಟ್ ಎನ್ನುವುದು ಈಗ ಹರಾಜು ಹಾಕುವ ಮನೆಯಂತಾಗಿದೆ. ಯಾರು ಏನು ಬೇಕಾದರೂ ಮಾಡಿಕೊಳ್ಳಿ, ನಾನು ಸಹಿ ಹಾಕುತ್ತೇನೆ ಎನ್ನುವ ಪರಿಸ್ಥಿತಿಗೆ ಸರ್ಕಾರ ಬಂದಿದೆ" ಎಂದು ಲೇವಡಿ ಮಾಡಿದರು.

ತಮ್ಮ ಮುಖ್ಯಮಂತ್ರಿ ಅವಧಿಯಲ್ಲಿ ಬೆಂಗಳೂರಿನ ಮೇಲಿನ ಒತ್ತಡ ಕಡಿಮೆ ಮಾಡಲು ಬಿಡದಿ, ಸೋಲೂರು, ಹೊಸಕೋಟೆ ಸೇರಿದಂತೆ ಐದು ಕಡೆ ವಿಶೇಷ ಟೌನ್‌ಶಿಪ್‌ಗಳನ್ನು ನಿರ್ಮಿಸುವ ಯೋಜನೆ ರೂಪಿಸಲಾಗಿತ್ತು ಎಂದು ನೆನಪಿಸಿಕೊಂಡ ಅವರು, ಆ

> ರೈತರಿಂದ ಫಲವತ್ತಾದ ಕೃಷಿ ಭೂಮಿಯನ್ನು ಪಡೆದು ರಿಯಲ್ ಎಸ್ಟೇಟ್ ಅಭಿವೃದ್ಧಿ ಮಾಡುವ ಉದ್ದೇಶ ಸರ್ಕಾರಕ್ಕಿದೆ ಎಂದು ಆರೋಪಿಸಿದ ಕುಮಾರಸ್ವಾಮಿ, "ಇದು ಯಾರಪ್ಪನ ಭೂಮಿ? ಬೆದರಿಕೆ ಹಾಕಿ ಜಮೀನು ಕಿತ್ತುಕೊಳ್ಳಲು ಇವರಾರು?"

ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷ ನಡೆಸಿದ್ದ ವಿರೋಧವನ್ನು ಉಲ್ಲೇಖಿಸಿದರು.

ಈಗಿನ ಸಚಿವ ಎಚ್.ಕೆ. ಪಾಟೀಲ್ ನೇತೃತ್ವದಲ್ಲಿ ಆಗ ರಚಿಸಲಾಗಿದ್ದ ಸತ್ಯಶೋಧನಾ ಸಮಿತಿಯ ವರದಿಯನ್ನು ಬಹಿರಂಗಪಡಿಸಬೇಕು ಎಂದು ಅವರು ಆಗ್ರಹಿಸಿದರು.

ಬೆಂಗಳೂರು ಅಭಿವೃದ್ಧಿ ಹೆಸರಿನಲ್ಲಿ ಜನರಿಂದ ಹಣ ವಸೂಲಿ ಮಾಡುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದ ಕುಮಾರಸ್ವಾಮಿ, ಬಿ ಖಾತೆಯಿಂದ ಎ ಖಾತೆಗೆ ಪರಿವರ್ತನೆ ಮಾಡಲು ವಿಧಿಸಿರುವ ಶುಲ್ಕವನ್ನು ಸಾರ್ವಜನಿಕರು ಪಾವತಿಸಬಾರದು ಎಂದು ಕರೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಎಂ. ರಮೇಶ್ ಗೌಡ, ನಾಡಗೌಡ, ಟಿ.ಎ. ಜವರಾಯಗೌಡ, ಮಾಜಿ ಶಾಸಕರಾದ ಆರ್. ಮಂಜುನಾಥ್, ಕೆ.ಎ. ತಿಪ್ಪೇಸ್ವಾಮಿ, ರಾಜ್ಯ ಕಾನೂನು ಘಟಕದ ಅಧ್ಯಕ್ಷ ರಂಗನಾಥ್ ಹಾಗೂ ರೈತ ಮುಖಂಡರು ಉಪಸ್ಥಿತರಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy